RNI.KAR/KAN/2009/31934 ಬೆಂಗಳೂರು ಸಂಪುಟ: 16 ಸಂಚಿಕೆ: 73 ಪುಟ: 06 ಮಂಗಳವಾರ 11-02-2025

Mail:mussanje2010@gmail.com www.mussanjenews.com

# ಮುಸ್ಸಂಜೆ

ಪ್ರಭಾವಶಾಲಿ ಕನ್ನಡ ಸಂಜೆ ದಿನ ಪತ್ರಿಕೆ

Managing Editor: N.Veerendra Babu (MBA, LLB) Executive Editor: L P Babu Honourary Editor: Venkatesh



ಒಂದೇ ದಿನ 6 ತಂಡಗಳ ಏಕದಿನ ಪಂದ್ಯ..!

ಪಿ.ವಿ.ಸಿಂಧು ಗೈರಿನಲ್ಲಿ ಭಾರತಕ್ಕೆ ಕಠಿಣ ಸವಾಲು

ದರ್ಶನ್ ಭೇಟಿಯಾಗಲು ಸಾಧ್ಯವಾಗ್ತಿಲ್ಲ ಪುಟ 6

## ಅನ್ಯಕೋಮಿನವರಿಂದ ಉದಯಗಿರಿ ಠಾಣೆ ಮೇಲೆ ಕಲ್ಲು ತೂರಾಟ, ಹಿಂಸಾಚಾರ

# ಮೈಸೂರು ಉದ್ವಿಗ್ನ

**ಮೈಸೂರು:** ಮುಸ್ಲಿಂ ಧರ್ಮಗುರು ಕುರಿತು ಅವಹೇಳನಕಾರಿ ಪೋಸ್ಟ್ ವಿವಾದಕ್ಕೆ ಸಂಬಂಧಿಸಿದಂತೆ ಸೋಮವಾರ ರಾತ್ರಿ ಸಮುದಾಯವೊಂದರ ಪ್ರತಿಭಟನಾಕಾರರು ಪೊಲೀಸ್ ವಾಹನಗಳ ಮೇಲೆ ಕಲ್ಲು ತೂರಾಟ ನಡೆಸಿದ್ದು ಈ ವೇಳೆ ಇನ್ಸ್‌ಪೆಕ್ಟರ್ ಸೇರಿ 14ಕ್ಕೂ ಹೆಚ್ಚು ಪೊಲೀಸರಿಗೆ ಗಾಯಗಳಾಗಿವೆ.

ಮೈಸೂರಿನಲ್ಲಿ ಕಲ್ಯಾಣಗಿರಿ ಬಡಾವಣೆಯ ಯುವಕನೋರ್ವ ಹಾಕಿದ ಒಂದು ಪೋಸ್ಟ್ ಭಾರಿ ಹಿಂಸಾಚಾರಕ್ಕೆ ಕಾರಣವಾಗಿದ್ದು, ಆರೋಪಿಯನ್ನ ಪೊಲೀಸರು ಬಂಧಿಸಿದ್ದಾರೆ.

ಪೋಸ್ಟ್ ವೈರಲ್ ಆಗುತ್ತಿದ್ದಂತೆ ರೊಚ್ಚಿಗೆದ್ದ ಸಮದಾಯ, ಉದಯಗಿರಿ ಪೊಲೀಸ್ ಠಾಣೆಗೆ ಮುತ್ತಿಗೆ ಹಾಕಿ ಘೋಷಣೆ ಕೂಗಿ, ಕಲ್ಲು ತೂರಾಟ ನಡೆಸಿದೆ. ಪೊಲೀಸರು ಕೂಡ ಪ್ರತಿಯಾಗಿ ಲಾಠಿಚಾರ್ಜ್ ನಡೆಸಿ ಅಶ್ರುವಾಯು



ಸಿಡಿಸಿದ್ದಾರೆ.

ಇನ್ನು ಉದಯಗಿರಿ ಪೊಲೀಸ್ ಠಾಣೆಗೆ ಪೊಲೀಸ್ ಸರ್ಪಗಾವಲು ಹಾಕಲಾಗಿದೆ 8 ಕ್ಕೂ ಹೆಚ್ಚು ಇನ್ಸ್ ಪೆಕ್ಟರ್ಸ್ ಹಾಗೂ 6 ಕೆಎಸ್ ಆರ್ ಪಿ ತುಕಡಿಗಳನ್ನ ಭದ್ರತೆಗೆ ನಿಯೋಜಿಸಲಾಗಿದೆ. ಈ ಮಧ್ಯೆ ಪೊಲೀಸ್ ಠಾಣೆ ಮೇಲೆ ಕಲ್ಲು ತೂರಾಟ ನಡೆಸಿದವರನ್ನ ಪತ್ತೆ ಮಾಡಲು ಪೊಲೀಸರು ಶೋಧಕಾರ್ಯ ನಡೆಸುತ್ತಿದ್ದಾರೆ.

ಸದ್ಯಕ್ಕೆ ಪರಿಸ್ಥಿತಿ ಶಾಂತ: ಎಡಿಜಿಪಿ ಹಿತೇಂದ್ರ

ಉದಯಗಿರಿ ಪೊಲೀಸ್ ಠಾಣೆ ಬಳಿ ನಡೆದ ಕಲ್ಲುತೂರಾಟ ಗಲಾಟೆಯಲ್ಲಿ 7 ಮಂದಿ ಪೊಲೀಸರಿಗೆ ಗಾಯಗಳಾಗಿದ್ದು, ಸದ್ಯಕ್ಕೆ ಪರಿಸ್ಥಿತಿ ಶಾಂತವಾಗಿದೆ ಎಂದು ಎಡಿಜಿಪಿಹಿತೇಂದ್ರ ಮಾಹಿತಿ ನೀಡಿದ್ದಾರೆ.

ಈ ಕುರಿತು ಮಾತನಾಡಿರುವ ಎಡಿಜಿಪಿ ಹಿತೇಂದ್ರ, ಗಲಾಟೆ ಮಾಡಿದವರ ಬಂಧನಕ್ಕೆ ಸ್ಥಳೀಯ ಪೊಲೀಸರಿಂದ ಟೀಂ ರಚನೆ ಮಾಡಲಾಗಿದೆ. ಅವಹೇಳನಕಾರಿ ಪೋಸ್ಟರ್ ಹಾಕಿದ ವಿಚಾರದಲ್ಲಿ ಆರೋಪಿಯನ್ನ ಬೇಗ ಬಿಟ್ಟು ಬಿಡುತ್ತಾರೆ ಅಂತಾ ಕೆಲವರು ಪುಟ 2

## ಆರೋಪಿಗಳ ವಿರುದ್ಧ ಕ್ರಮಕ್ಕೆ ಸೂಚನೆ



**ಬೆಂಗಳೂರು:** ಮೈಸೂರಿನ ಉದಯಗಿರಿ ಪೊಲೀಸ್ ಠಾಣೆಗೆ ನುಗ್ಗಿ ದಾಂಧಲೆ ನಡೆಸಿದವರ ವಿರುದ್ಧ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಿದ್ದೇನೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ಬೆಂಗಳೂರಿನ ಸದಾಶಿವನಗರದ ತಮ್ಮ ನಿವಾಸದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವ್ಯಕ್ತಿಯೊಬ್ಬ ಸಾಮಾಜಿಕ ಜಾಲತಾಣದಲ್ಲಿ ಒಂದು ಸಮುದಾಯವನ್ನು ನಿಂದಿಸಿದ ಅವಹೇಳನಕಾರಿ ಪೋಸ್ಟ್ ಹಾಕಿದ್ದ. ಈತನನ್ನು ಪೊಲೀಸರು ಬಂಧಿಸಿ ಕಾನೂನು ಕ್ರಮ ಜರುಗಿಸಿದ್ದಾರೆ.ಈ ವ್ಯಕ್ತಿಯನ್ನು ತಮ್ಮ ವಶಕ್ಕೆ ನೀಡಿ ನಾವು ಆತನಿಗೆ ಬುದ್ಧಿ ಕಲಿಸುತ್ತೇವೆ ಎಂದು ಒಂದು ಸಮುದಾಯದ ಜನರು ಉದಯಗಿರಿ ಪೊಲೀಸ್ ಠಾಣೆ ಮುಂದೆ ಗಲಾಟೆ ನಡೆಸಿದ್ದಾರೆ. ಈಗ ಪರಿಸ್ಥಿತಿ ನಿಯಂತ್ರಣದಲ್ಲಿದೆ. ಗಲಾಟೆ ನಡೆಸಿ ಕಲ್ಲು ತೂರಿದವರ ವಿರುದ್ಧವೂ ಕಾನೂನು ಕ್ರಮ ಜರುಗಿಸುವಂತೆ ಪೊಲೀಸರಿಗೆ ಸೂಚನೆ ನೀಡಿದ್ದೇನೆ ಎಂದರು. ಪುಟ 2




ಗ್ಲೋಬಲ್ ಹೆಡ್ ಆಫ್ ಪಲ್ಸಸ್ ಕಂಪನಿಯ ಮುಖ್ಯಸ್ಥ ವಿಲ್ ವಾಚರ್ನ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಭೇಟಿಯಾಗಿ ತಮ್ಮ ಕಂಪನಿಯು ರಾಜ್ಯದಲ್ಲಿ ಹೂಡಿಕೆಗೆ ಉತ್ಸುಕವಾಗಿರುವ ಬಗ್ಗೆ ಚರ್ಚಿಸಿದರು.

## ಪೊಲೀಸರ ವಿರುದ್ಧ ರಾಜಣ್ಣ ಗರಂ

**ಬೆಂಗಳೂರು:** ನಿನ್ನೆ ಮೈಸೂರಿನ ಉದಯಗಿರಿ ಪೊಲೀಸ್ ಠಾಣೆ ಬಳಿ ನಡೆದ ಕಲ್ಲು ತೂರಾಟ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರ ವಿರುದ್ಧ ಸಹಕಾರ ಸಚಿವ ಕೆ.ಎನ್ ರಾಜಣ್ಣ ಗರಂ ಆಗಿ ಮಾತನಾಡಿದ್ದಾರೆ. ಈ ಕುರಿತು ಮಾತನಾಡಿದ ಸಚಿವ ಕೆ.ಎನ್ ರಾಜಣ್ಣ, ಪೊಲೀಸರಿಗೆ ಏನಾಗಿದೆ. ಮಿನಿಮಮ್ ಕಾಮನ್ ಸೆನ್ಸ್ ಬೇಡವಾ? ಯಾರೋ ಆರ್ ಎಸ್ ಎಸ್ ನವರು ಈ ಕೃತ್ಯವನ್ನ ಮಾಡಿದ್ದಾನೆ. ಆತನ ಮೇಲೆ ಕೇಸ್ ಆಗಿದೆ ಅರೆಸ್ಟ್ ಆಗಿದ್ದಾನೆ. ಪೊಲೀಸರು ಆತನನ್ನು ಏಕೆ ಉದಯಗಿರಿ ಪೊಲೀಸರ ಠಾಣೆಯಲ್ಲಿ ಇಟ್ಟರು ಉದಯಗಿರಿಯಲ್ಲಿ ಮುಸ್ಲೀಂ ಬಾಹುಳ್ಯ ಇದೆ. ನಾವಷ್ಟೆ ಅಲ್ಲ ಅಧಿಕಾರಿಗಳು ಸಹ ನಿರ್ಧಾರ ಮಾಡಬೇಕು ಎಂದು ಪೊಲೀಸರ ವಿರುದ್ದ ಕಿಡಿಕಾರಿದರು.

## ಸಿಎಂ ಈಗಲಾದ್ರೂ ಖಡಕ್ ಆಗಿ ಕೆಲಸ ಮಾಡಿ



**ಮೈಸೂರು:** ಮೈಸೂರಿನ ಉದಯಗಿರಿ ಪೊಲಿಸ್ ಠಾಣೆ ಬಳಿ ನಿನ್ನೆ ನಡೆದ ಕಲ್ಲು ತೂರಾಟದ ಘಟನೆಯನ್ನ ಮಾಜಿ ಸಂಸದ ಪ್ರತಾಪ್ ಸಿಂಹ ಖಂಡಿಸಿದ್ದು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಮಾತನಾಡಿರುವ ಮಾಜಿ ಸಂಸದ ಪ್ರತಾಪ್ ಸಿಂಹ, ನಿನ್ನೆ ಮುಸ್ಲೀಂ ಸಮುದಾಯದ ಪ್ರತಿಭಟನಾಕಾರರು ಪೊಲೀಸ್ ಠಾಣೆ ಮೇಲೆ ದಾಳಿ ಮಾಡಿದ್ದಾರೆ. ಮೈಸೂರಿನಲ್ಲಿ ನಾಗರೀಕ ಸಮಾಜ ತಲೆ ತಗ್ಗಿಸುವ ಘಟನೆ ನಿನ್ನೆ ನಡೆದಿದೆ. ಪೊಲೀಸರನ್ನೆ ಗುರಿಯಾಗಿಸಿ ಇಲ್ಲಿ ಯಾವಾಗಲೂ ದಾಳಿ ಆಗುತ್ತದೆ. ಈಗಲೂ ಅದೇ ಮುಂದುವರಿದಿದೆ. ಸಿದ್ದರಾಮಯ್ಯ ಆಡಳಿತ ಹೇಗಿದೆ ಎಂಬುದಕ್ಕೆ ಇದು ಸಾಕ್ಷಿಯಾಗಿದೆ. ಸಿದ್ದರಾಮಯ್ಯ ಅವರದ್ದು, ಕನ್ನಡಿಗರ ಸರಕಾರ ಅಲ್ಲ. ಇದು ತಾಲಿಬಾನಿ ಸರಕಾರ ಎಂದು ವಾಗ್ದಾಳಿ ನಡೆಸಿದರು.

ಪೊಲೀಸರು ಆಳುವ ಸರಕಾರದ ಅಣತಿಯಂತೆ ನಡೆಯುವುದನ್ನು ಮೊದಲು ಬಿಡಬೇಕು. ಅರವಿಂದ್ ಕೇಜ್ರಿವಾಲ್ ಸೋತರೆ ಉದಯಗಿರಿ ಮುಸಲ್ಮಾನರಿಗೆ ಯಾಕೆ ರೋಷ ಬರುತ್ತದೆ? ಅವರ ಮನೆಯಲ್ಲಿ ಯಾಕೆ ಸೂತಕ ಬರುತ್ತೆ? ಉದಯಗಿರಿ ವ್ಯಾಪ್ತಿಯಲ್ಲಿ ಪೊಲೀಸರು ಕೂಬಿಂಗ್ ಮಾಡಬೇಕು. ಸಿದ್ದರಾಮಯ್ಯ ಅವರು ಎಷ್ಟು ದಿನ ಸಿಎಂ ಆಗಿ ಇರುತ್ತಿರಾ ಗೊತ್ತಿಲ್ಲ. ಈಗಲಾದರೂ ಖಡಕ್ ಆಗಿ ಕೆಲಸ ಪುಟ 2

## ಭೀಕರ ಕೊಲೆ

**ಮಂಡ್ಯ:** ಜಿಲ್ಲೆಯ ಮದ್ದೂರು ತಾಲೂಕಿನ ಕೆ.ಎಂ.ದೊಡ್ಡಿ ಸಮೀಪದ ಲಕ್ಕೇಗೌಡನದೊಡ್ಡಿ ಇಂದು ಬೆಳ್ಳಂಬೆಳಗ್ಗೆ ವ್ಯಕ್ತಿಯೊಬ್ಬನ ಹತ್ಯೆಯಾಗಿದೆ. ಎಲ್. ಕೃಷ್ಣೇಗೌಡ (47) ಹತ್ಯೆಗೀಡಾದ ವ್ಯಕ್ತಿ. ಯಾರೋ ದುಷ್ಕರ್ಮಿಗಳು ಕುತ್ತಿಗೆ ಸೀಳಿ ಬರ್ಬರವಾಗಿ ಹತ್ಯೆಗೈದಿದ್ದಾರೆ ಎಂದು ಶಂಕಿಸಲಾಗಿದೆ. ಮದನಹಟ್ಟಿ ದೇವಾಲಯದ ಬಳಿ ಈ ಘಟನೆ ನಡೆದಿದೆ. ಕೃಷ್ಣೇಗೌಡರ ಮೇಲೆ ಮಾರಕಾಸ್ತ್ರಗಳಿಂದ ದಾಳಿ ಮಾಡಿದ ದುಷ್ಕರ್ಮಿಗಳು, ಕುತ್ತಿಗೆ ಕೊಯ್ದು ಹತ್ಯೆ ಮಾಡಿ ಪರಾರಿಯಾಗಿದ್ದಾರೆ ಎಂದು ಶಂಕೆ ವ್ಯಕ್ತವಾಗುತ್ತಿದೆ.

ಬೆಳ್ಳಂಬೆಳಗ್ಗೆ ಹರಿದ ನೆತ್ತರನ್ನು ನೋಡಿ ಗ್ರಾಮದ ಜನರು ಬೆಚ್ಚಿಬಿದ್ದಿದ್ದಾರೆ. ಎಂದಿನಂತೆ ಇಂದು ಬೆಳಗ್ಗೆ ಡೈರಿಗೆ ತೆರಳಿ ಹಾಲು ಹಾಕಿ ಮನೆಗೆ ತೆರಳಿದ್ದ ಕೃಷ್ಣೇಗೌಡ, ತೋಟದ ಬಳಿ ಎಮ್ಮೆ ಕರು ಕಟ್ಟುತ್ತಿದ್ದರು. ಈ ವೇಳೆ ಘಟನೆ ನಡೆದಿರ ಪುಟ 2

## ಮೈಲಾರ ಜಾತ್ರೆಗೆ ಹೊರಟಿದ್ದಾಗ ಅಪಘಾತ: ಸಾವು

**ಹಾವೇರಿ:** ಹಾವೇರಿ (ಊಚಿತಜಡು) ಜಿಲ್ಲೆ ರಾಣೆಬೆನ್ನೂರು ತಾಲೂಕಿನ ಗುಡಗೂರು ಕ್ರಾಸ್ ಬಳಿ ಎತ್ತಿನಬಂಡಿಗೆ ಡಿಕ್ಕಿಯಾಗಿ ಬೈಕ್‌ನಲ್ಲಿದ್ದ ಮೂವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಶಶಿಕುಮಾರ್ (25), ಆಕಾಶ್ (23), ದರ್ಶನ್ (23) ಮೃತ ದುರ್ದೈವಿಗಳು. ಮೂವರು ಹನುಮನಮಟ್ಟಿ ಗ್ರಾಮದಿಂದ ಮೈಲಾರ ಜಾತ್ರೆಗೆ ಹೊರಟಿದ್ದಾಗ ಅಪಘಾತ ಸಂಭವಿಸಿದೆ. ಆಕಾಶ್ ಮತ್ತು ದರ್ಶನ್ ಅಂತಿಮ ವರ್ಷದ ಬಿಎಸ್‌ಸಿ ಓದುತ್ತಿದ್ದರು. ಶಶಿಕುಮಾರ್ ಹನುಮನಮಟ್ಟಿ ಗ್ರಾಮ ದಲ್ಲಿನ ಹೋಟೆಲ್‌ವೊಂದರಲ್ಲಿ ಪುಟ 2

## ಹಿಂದೂಗಳಿಗೆ ರಕ್ಷಣೆ ಇಲ್ಲ: ಅಶೋಕ

**ಬೆಂಗಳೂರು:** ಸಿಎಂ ಸಿದ್ದರಾಮಯ್ಯ ಮುಸ್ಲಿಮ್ ಮತಾಂಧರ ವಿರುದ್ಧ ಪ್ರಕರಣ ವಾಪಸ್ ಪಡೆಯುವುದರಿಂದಾಗಿ, ಪೊಲೀಸರ ಮೇಲೂ ಹಲ್ಲೆ ಮಾಡುವಷ್ಟು ಧೈರ್ಯ ಮತಾಂಧರಿಗೆ ಬಂದಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರದಿಂದ ಕಾನೂನು ಸುವ್ಯವಸ್ಥೆ ಹದಗೆಟ್ಟು ಹಳ್ಳ ಹಿಡಿದಿದೆ. ಹುಬ್ಬಳ್ಳಿಯಲ್ಲಿ ಆದಂತೆಯೇ ಮೈಸೂರಿನಲ್ಲಿ ಪೊಲೀಸರ ಮೇಲೆ ಹಲ್ಲೆ ನಡೆದಿದೆ. ರಾಹುಲ್ ಗಾಂಧಿ, ಕೇಜ್ರಿವಾಲ್ ಬಗ್ಗೆ ಪೋಸ್ಟ್ ಮಾಡಿದ್ದಾರೆಂಬ ಕಾರಣಕ್ಕೆ ಮತಾಂಧ ಮುಸ್ಲಿಮರು ನಿನ್ನೆ ಸಂಜೆ 6-7 ಗಂಟೆ ಸಮಯದಲ್ಲಿ ಚೀಲಗಳಲ್ಲಿ ಕಲ್ಲು ತುಂಬಿಕೊಂಡು ಬಂದು ಪೊಲೀಸರ ಮೇಲೆ ದಾಳಿ ಮಾಡಿದ್ದಾರೆ. ಹಿಂದೂ ಸಮುದಾಯದ ಜನರಿಗೆ ಬೆದರಿಕೆ ಹಾಕಿದ್ದು, ಇಡೀ



ಮೈಸೂರಿನಲ್ಲಿ ಭಯದ ವಾತಾವರಣ ಸೃಷ್ಟಿಯಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಹುಬ್ಬಳ್ಳಿ ಗಲಭೆಯಲ್ಲಿ ಭಾಗಿಯಾದವರ ವಿರುದ್ಧ ಇದ್ದ ಪ್ರಕರಣಗಳನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ವಾಪಸ್ ಪಡೆದಿರುವುದರಿಂದ ಮುಸ್ಲಿಮ್ ಮತಾಂಧರಿಗೆ ಧೈರ್ಯ ಬಂದಿದೆ. ಜೊತೆಗೆ ಡಿ.ಕೆ.ಶಿವಕುಮಾರ್ ಸೇರಿದಂತೆ ಕಾಂಗ್ರೆಸ್ ನಾಯಕರು, ಇದು ಮುಸ್ಲಿಮರ ಸರ್ಕಾರ ಎಂದು ಹೇಳಿರುವುದರಿಂದ ಪೊಲೀಸ್ ಠಾಣೆಯನ್ನು ಧ್ವಂಸ ಮಾಡಬಹುದು ಎಂಬ ವಿಶ್ವಾಸ ಅವರಿಗೆ ಬಂದಿದೆ. ಒಂದಡೆ ಆರ್ಥಿಕ ದುಸ್ಥಿತಿ ಇದ್ದರೆ, ಮತ್ತೊಂದೆಡೆ ಕಾನೂನು ಹದಗೆಟ್ಟಿದೆ. ಈಗ ಮುಸ್ಲಿಮರ ವಿರುದ್ಧ ಪ್ರಕರಣ ದಾಖಲಿಸಿದರೂ, ಅದು ವ್ಯರ್ಥ ಎಂಬುದು ಪೊಲೀಸರಿಗೆ ಗೊತ್ತಾಗಿದೆ. ಪೊಲೀಸರ ಬಗ್ಗೆ ಭಯವೇ ಇಲ್ಲವೆಂದರೆ ಕಾನೂನು ಸತ್ತಿದೆ ಎಂದರ್ಥ. ಮತಬ್ಯಾಂಕ್‌ಗಾಗಿ ಇಡೀ ವ್ಯವಸ್ಥೆಯನ್ನು ಹಾಳು ಮಾಡಲಾಗುತ್ತಿದೆ ಎಂದರು.

ಮೈಸೂರಿನ ಹಿಂದೂಗಳ ರಕ್ಷಣೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿ. ಮೈಸೂರಿನ ಪಕ್ಷದ ಪುಟ 2

## ಶೇಂಗಾ ಖರೀದಿ ಅವಧಿ ವಿಸ್ತರಣೆ



**ನವದೆಹಲಿ:** ಕೇಂದ್ರ ಸರ್ಕಾರ ರಾಜ್ಯದ ಶೇಂಗಾ ಬೆಳೆಗಾರರಿಗೆ ಸಿಹಿ ಸುದ್ದಿ ನೀಡಿದೆ. ಬೆಂಬಲ ಬೆಲೆಯಲ್ಲಿ ಶೇಂಗಾ ಖರೀದಿ ಅವಧಿ ವಿಸ್ತರಿಸಿ ಆದೇಶಿಸಿದೆ.

ರಾಜ್ಯದಲ್ಲಿ ಈ ಬಾರಿ ಅಧಿಕ ಪ್ರಮಾಣದಲ್ಲಿ ಶೇಂಗಾ(ನೆಲಗಡಲೆ) ಬೆಳೆದ ಹಿನ್ನೆಲೆಯಲ್ಲಿ ಬೆಂಬಲ ಬೆಲೆ ಘೋಷಿಸಿ ರೈತರಿಗೆ ನೆರವಾಗಿದ್ದ ಕೇಂದ್ರ ಸರ್ಕಾರ, ಈಗ ಮತ್ತೆ ಖರೀದಿ ಅವಧಿಯನ್ನು ಮತ್ತಷ್ಟು ಕಾಲ ಮುಂದುವರಿಸಿ ಸಂಕಷ್ಟದಲ್ಲಿದ್ದ ಶೇಂಗಾದಾತರ ಕೈ ಹಿಡಿದಿದೆ. ರಾಜ್ಯದಲ್ಲಿ 2024-25ರ ರಾಬಿ ಋತುವಿನಲ್ಲಿ (ಹಿಂಗಾರು ಬೆಳೆ) ಬೆಳೆದ ಶೇಂಗಾವನ್ನು ಬೆಂಬಲ ಬೆಲೆ ಪುಟ 2

## ಶಾ ಭೇಟಿಗಾಗಿ ವಿಜಯೇಂದ್ರ ದೆಹಲಿಯಲ್ಲಿ ಮೊಕ್ಕಾಂ

**ಬೆಂಗಳೂರು:** ರಾಜ್ಯ ಬಿಜೆಪಿಯ ನೂತನ ಅಧ್ಯಕ್ಷರ ನೇಮಕಕ್ಕೆ ಸಂಬಂಧಿಸಿದಂತೆ ಬಿಜೆಪಿಯಲ್ಲಿ ನಡೆದಿರುವ ಬಣ ಬಡಿದಾಟ ಹೈಕಮಾಂಡ್ ಅಂಗಳಕ್ಕೆ ತಲುಪಿರುವಾಗಲೇ ಹೈಕಮಾಂಡ್ ಬುಲಾವ್ ಮೇರೆಗೆ ದೆಹಲಿಗೆ ತೆರಳಿರುವ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ದೆಹಲಿಯಲ್ಲೇ ಮೊಕ್ಕಾಂ ಹೂಡಿದ್ದು, ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರನ್ನು ಭೇಟಿ ಮಾಡಿದ ನಂತರ ರಾಜ್ಯಕ್ಕೆ ಮರಳುವರು.

ಕಳೆದ ಭಾನುವಾರ ಹೈಕಮಾಂಡ್ ಸೂಚನೆ ಮೇರೆಗೆ ದೆಹಲಿಗೆ ತೆರಳಿದ್ದ ಬಿ.ವೈ. ವಿಜಯೇಂದ್ರ ಅವರು ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದರು.

ಕೇಂದ್ರ ಗೃಹ ಸಚಿವ ಅಮಿತ್ ಶಾ



ಅವರನ್ನು ಭೇಟಿ ಮಾಡುವ ಉಮೇದಿನಲ್ಲಿರುವ ವಿಜಯೇಂದ್ರ ಅವರು ಸಾಧ್ಯವಾದರೆ ಇಂದೇ ಅಮಿತ್ ಶಾ ಅವರನ್ನು ಭೇಟಿ ಮಾಡುವರು. ಇಲ್ಲವೇ ನಾಳೆ ಅಮಿತ್ ಶಾ ರವರನ್ನು ಭೇಟಿ ಮಾಡುವರು ಎಂದು ಹೇಳಲಾಗಿದೆ.

ಮಣಿಪುರದ ಮುಖ್ಯಮಂತ್ರಿ ಬೀರೇಂದ್ರ ಸಿಂಗ್ ರಾಜೀನಾಮೆ ನಂತರ ಅಲ್ಲಿ ಉಂಟಾಗಿರುವ ಬಿಕ್ಕಟ್ಟಿನ ವಿಚಾರದಲ್ಲಿ ಪುಟ 2

### ಇಂದಿನಿಂದ ಇನ್ವೆಸ್ಟ್ ಕರ್ನಾಟಕ 2025:

## ಹೂಡಿಕೆದಾರರನ್ನು ಸೆಳೆಯಲು ಸಜ್ಜು

**ಬೆಂಗಳೂರು;** ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ, ಎಲೆಕ್ಟ್ರಾನಿಕ್ಸ್, ನವೋದ್ಯಮ, ಏರೋಸ್ಪೇಸ್‌ಆಂಡ್ ಡಿಫೆನ್ಸ್ ಮತ್ತಿತರ ಕ್ಷೇತ್ರಗಳಲ್ಲಿ ವಿಶ್ವದಾದ್ಯಂತ ಪ್ರಖ್ಯಾತಿಯ ಛಾಪು ಮೂಡಿಸಿರುವ ಕರ್ನಾಟಕವು, 'ಪ್ರಗತಿಯ ಮರುಕಲ್ಪನೆ' ಧ್ಯೇಯದ ಇನ್ವೆಸ್ಟ್ ಕರ್ನಾಟಕ 2025ರ ಮೂಲಕ ವಿಶ್ವದಾದ್ಯಂತದ ಹೂಡಿಕೆದಾರರನ್ನು ರಾಜ್ಯದತ್ತ ಚುಂಬಕದಂತೆ ಸೆಳೆಯಲು ಸಜ್ಜಾಗಿದೆ.

ಮಂಗಳವಾರದಿಂದ ಶುಕ್ರವಾರದವರೆಗೆ (ಫೆ. 11ರಿಂದ 14) ನಡೆಯಲಿರುವ ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಭಾಗವಹಿಸಲಿರುವ ಉದ್ದಿಮೆ ದಿಗ್ಗಜರು, ಹೂಡಿಕೆದಾರರು, ನವೋದ್ಯಮಗಳ ಕನಸುಗಾರರು, ನೀತಿ ನಿರೂಪಣೆಯ ಚಿಂತಕರಿಗೆ ಬೆಂಗಳೂರು ಅರಮನೆ ಮೈದಾನದಲ್ಲಿ ಕೆಂಪುರತ್ನಗಂಬಳಿಯ ಸ್ವಾಗತ ಕೋರುವ ಸಿದ್ಧತೆಗಳೆಲ್ಲ ಪೂರ್ಣಗೊಂಡಿವೆ.




ಮಂಗಳವಾರ ಮಧ್ಯಾಹ್ನ 4 ಗಂಟೆಗೆ ಬೆಂಗಳೂರು ಅರಮನೆ ಮೈದಾನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಪುಟ 2

ಮೊದಲ ಪುಟದಿಂದ

## ಖಡಕ್ ಆಗಿ ಕೆಲಸ ಮಾಡಿ

ಮಾಡಲಿ. ಸಿದ್ದರಾಮಯ್ಯ ಎಷ್ಟು ಅಸಮರ್ಥ ಸಿಎಂ ಎಂಬುದಕ್ಕೆ ಅವರ ತವರೂರಿನಲ್ಲಿ ನಡೆದ ಈ ಘಟನೆ ಸಾಕ್ಷಿ ಎಂದು ಕಿಡಿಕಾರಿದರು.

ಒಂದು ವಾರ ಪೊಲೀಸರಿಗೆ ಫ್ರೀ ಹ್ಯಾಂಡ್ ಕೊಡಿ:
ಈಗಲೂ ಒಂದು ವಾರ ಪೊಲೀಸರಿಗೆ ಫ್ರೀ ಹ್ಯಾಂಡ್ ಕೊಡಿ. ನಮ್ಮ ಪೊಲೀಸರು ಸಮರ್ಥರಿದ್ದಾರೆ. ಸಿದ್ದರಾಮಯ್ಯ ಅವರೇ ನಿಮ್ಮ ಕೈಯಲ್ಲಂತೂ ಆಗುವುದಿಲ್ಲ. ಪೊಲೀಸರಿಗಾದರೂ ಅವಕಾಶ ಮಾಡಿಕೊಡಿ ಎಂದು ಮಾಜಿ ಸಂಸದ ಪ್ರತಾಪ್ ಸಿಂಹ ಸವಾಲು ಹಾಕಿದರು.

## ಮೈಸೂರು ಉದ್ವಿಗ್ನ

ಗಲಾಟೆ ಮಾಡಿದ್ದಾರೆ. ಪೋಸ್ಟರ್ ವಿಚಾರದಲ್ಲಿ ಕೆಲವು ವಂದತಿ ಹಬ್ಬಿದ್ದಕ್ಕೆ ಗಲಾಟೆಯಾಗಿದೆ.

ಗಲಾಟೆ ಹಿಂದೆ ಯಾರಿದ್ದಾರೆ, ಯಾವುದಾದರೂ ಸಂಘಟನೆ ಇದೆಯಾ? ಎಂದುಬದರ ಬಗ್ಗೆ ತನಿಖೆ ಮೂಲಕ ಗೊತ್ತಾಗುತ್ತದೆ ಸದ್ಯಕ್ಕೆ ಪರಿಸ್ಥಿತಿ ಶಾಂತವಾಗಿದೆ ಎಂದು ಎಡಿಜಿಪಿ ಹಿತೇಂದ್ರ ತಿಳಿಸಿದ್ದಾರೆ.

## ಆರೋಪಿಗಳ ವಿರುದ್ಧ ಕ್ರಮ

ಘಟನಾ ಸ್ಥಳಕ್ಕೆ ಕಾನೂನು ಸುವ್ಯವಸ್ಥೆಯ ಎಡಿಜಿಪಿಯವರನ್ನು ಕಳುಹಿಸಿದ್ದೇನೆ. ಅವರು ಅಲ್ಲಿಯೇ ಮೊಕ್ಕಾಂ ಹೂಡಿದ್ದಾರೆ. ಹಾಗೆಯೇ ಟಿ. ನರಸೀಪುರದಲ್ಲಿ ನಡೆದಿರುವ ಕುಂಭಮೇಳದ ಭದ್ರತೆಯನ್ನು ಇವರು ಪರಿಶೀಲಿಸಲಿದ್ದಾರೆ ಎಂದು ಹೇಳಿದರು.

ರಾಜ್ಯದ ಕಾಂಗ್ರೆಸ್ ಸರ್ಕಾರ ಮುಸಲ್ಮಾನರನ್ನು ತುಷ್ಟೀಕರಿಸುವ ನೀತಿಯಿಂದ ಈ ರೀತಿಯ ಘಟನೆಗಳಾಗುತ್ತಿವೆ ಎಂಬ ಬಿಜೆಪಿ ನಾಯಕರ ಆರೋಪಕ್ಕೆ ಗರಂ ಆದ ಅವರು, ಬಿಜೆಪಿಯವರು ಎಲ್ಲಾ ಸಂದರ್ಭದಲ್ಲೂ ಈ ರೀತಿ ಮಾತನಾಡುವುದು ಸರಿಯಲ್ಲ. ಹೀಗೆ ಮಾತನಾಡುವುದನ್ನು ಬಿಟ್ಟರೆ ಅವರಿಗೆ ಬೇರೆ ಅಜೆಂಡಾ ಇಲ್ಲ ಎಂದು ಕಿಡಿಕಾರಿದರು.

ಘಟನಾ ಸ್ಥಳಕ್ಕೆ ಪ್ರತಿಪಕ್ಷ ನಾಯಕ ಆರ್. ಅಶೋಕ್ ಭೇಟಿ ನೀಡುತ್ತಿರುವುದಕ್ಕೆ ಪ್ರತಿಕ್ರಿಯಿಸಿದ ಅವರು, ಅಶೋಕ್ ಭೇಟಿ ನೀಡಲಿ, ಯಾವ ಸಲಹೆ ಕೊಡುತ್ತಾರೋ ಅದನ್ನು ಪಾಲಿಸುತ್ತೇನೆ. ಯಾರೇ ಆಗಲಿ ಕಾನೂನನ್ನು ಕೈಗೆತ್ತಿಕೊಂಡರೆ ಅಂಥವರ ವಿರುದ್ದ ಕಠಿಣ ಕ್ರಮ ಕೈಗೊಂಡಿದ್ದೇವೆ. ಈ ಘಟನೆಯಲ್ಲಿ ಪೊಲೀಸರ ಲೋಪಗಳಿದ್ದರೆ ಅವರ ವಿರುದ್ಧವೂ ಕ್ರಮ ಆಗುತ್ತದೆ. ಈ ಹಿಂದೆಯೆಲ್ಲಾ ಪೊಲೀಸರ ವಿರುದ್ದವೂ ಕ್ರಮ ಆಗಿದೆ ಎಂದರು.

**ರಾಜಣ್ಣ ದೆಹಲಿ ಭೇಟಿ ಗೊತ್ತಿಲ್ಲ:** ಸಹಕಾರ ಸಚಿವ ರಾಜಣ್ಣನವರು ದೆಹಲಿಗೆ ಏಕೆ ಭೇಟಿ ನೀಡುತ್ತಿದ್ದಾರೆ ಎಂಬುದು ನನಗೆ ಗೊತ್ತಿಲ್ಲ, ಅವರನ್ನೇ ಕೇಳಿ. ನಾನು ದೆಹಲಿಗೆ ಹೋಗುವಾಗ ನಿಮಗೆ ಹೇಳಿಯೇ ಹೋಗುತ್ತೇನೆ. 2 ದಿನದ ಹಿಂದೆ ಸಹ ನಾನು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರನ್ನು ಭೇಟಿ ಮಾಡಿದ್ದೆ. ನಾವು ಸಚಿವರುಗಳಿದ್ದೇವೆ. ಹಾಗಾಗಿ ಭೇಟಿ ಮಾಡಿ ಮಾತನಾಡುವುದು ತಪ್ಪೇನಲ್ಲ. ಹೈಕಮಾಂಡ್ ಬಹಿರಂಗವಾಗಿ ಏನನ್ನು ಮಾತನಾಡಬೇಡಿ ಎಂದಿದೆ. ಹಾಗಾಗಿ ನಾವು ಬಹಿರಂಗವಾಗಿ ಏನನ್ನೂ ಮಾತನಾಡುತ್ತಿಲ್ಲ. ಸಭೆ ಸೇರುವುದು ಎಲ್ಲವೂ ನಡೆದಿದೆ. ಇದಕ್ಕೆಲ್ಲಾ ವಿಶೇಷ ಅರ್ಥ ಕಲ್ಪಿಸುವ ಅಗತ್ಯವಿಲ್ಲ ಎಂದು ಅವರು ಹೇಳಿದರು.

## ಹಿಂದೂಗಳಿಗೆ ರಕ್ಷಣೆ ಇಲ್ಲ

ಕಾರ್ಯಕರ್ತರು ಹಾಗೂ ಮುಖಂಡರ ಜೊತೆಗೆ ಈಗಾಗಲೇ ಮಾತಾಡಿದ್ದೇನೆ. ಪೊಲೀಸರು ಕೈ ಚೆಲ್ಲಿ ಕುಳಿತಿರುವುದರಿಂದ ನಾವೇ ಶಾಂತಿ ಕಾಪಾಡಬೇಕಾಗಿದೆ. ನಾನು ಕೂಡ ಮೈಸೂರಿಗೆ ಭೇಟಿ ನೀಡುತ್ತೇನೆ. ಕೆಎಫ್‌ಡಿ, ಪಾಪ್ಯುಲರ್ ಫ್ರಂಟ್ ಮೊದಲಾದ ಸಂಘಟನೆಗಳು ಮೈಸೂರಿನಲ್ಲಿ ಸಕ್ರಿಯವಾಗಿವೆ. ಕೇರಳದಿಂದ ಬಂದು ಕೊಲೆ, ಅಪಹರಣ ಮಾಡಿ ಹೋಗಿರುವ ಘಟನೆಗಳು ನಡೆದಿವೆ ಎಂದರು.

**ಕಾಂಗ್ರೆಸ್ ಶಾಸಕರಿಗೆ ಆದಾಯವಿಲ್ಲ:** ಕಾಂಗ್ರೆಸ್ ಶಾಸಕರಿಗೆ ಬೇರೆ ಆದಾಯವಿಲ್ಲ. ಆದ್ದರಿಂದ ವರ್ಗಾವಣೆ, ಮರಳು ಮಾಫಿಯಾ ಮೂಲಕ ಹಣ ಸಂಪಾದಿಸುತ್ತಿದ್ದಾರೆ. ಭದ್ರಾವತಿಯಲ್ಲೂ ಇಂಥದ್ದೇ ಘಟನೆ ನಡೆದಿದೆ. ಬೇರೆ ಜಿಲ್ಲೆಗಳಲ್ಲೂ ಅಧಿಕಾರಿಗಳಿಗೆ ಕಾಂಗ್ರೆಸ್ ಶಾಸಕರಿಂದ ಬೆದರಿಕೆ ಇದೆ. ಮಂಡ್ಯ, ಬೀದರ್, ಯಾದಗಿರಿ ಮೊದಲಾದ ಕಡೆ ಮರಳು ಮಾಫಿಯಾ ನಡೆಯುತ್ತಿದೆ. ಭದ್ರಾವತಿಯ ಮಹಿಳಾ ಅಧಿಕಾರಿ ರೆಕಾರ್ಡ್ ಮಾಡಿಕೊಂಡು ಧೈರ್ಯವಾಗಿ ಹೇಳಿದ್ದಾರೆ. ಉಳಿದ ಜಿಲ್ಲೆಗಳ ಅಧಿಕಾರಿಗಳು ವರ್ಗಾವಣೆ ಭಯದಿಂದ ಸುಮ್ಮನಾಗಿದ್ದಾರೆ ಎಂದರು.

ಡಿಸಿಎಂ ಡಿ.ಕೆ.ಶಿವಕುಮಾರ್ ಅವರು, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮಾತನ್ನು ಉಲ್ಲಂಘಿಸಿ ಕುಂಭಮೇಳಕ್ಕೆ ಭೇಟಿ ನೀಡಿದ್ದಾರೆ. ಜೊತೆಗೆ ಅಲ್ಲಿನ ವ್ಯವಸ್ಥೆಗೆ ಉತ್ತರ ಪ್ರದೇಶ ಸರ್ಕಾರವನ್ನು ಶ್ಲಾಘಿಸಿದ್ದಾರೆ. ಖರ್ಗೆಯವರದ್ದು ನಿಜವಾದ ಕಾಂಗ್ರೆಸ್ಸಾ ಅಥವಾ ಡಿ.ಕೆ.ಶಿವಕುಮಾರ್ ಅವರದ್ದು ನಿಜವಾದ ಕಾಂಗ್ರೆಸ್ಸಾ ಎಂದು ಅವರೇ ಹೇಳಬೇಕು. ಇಲ್ಲಿ ಯಾರನ್ನು ನಂಬಬೇಕು ಹಾಗೂ ಅನುಸರಿಸಬೇಕೆಂದು ಕಾಂಗ್ರೆಸ್ ಕಾರ್ಯಕರ್ತರಲ್ಲಿ ಗೊಂದಲ ಕಾಡುತ್ತಿದೆ ಎಂದು ವ್ಯಂಗ್ಯವಾಡಿದರು.

## ಅವಧಿ ವಿಸ್ತರಣೆ

ಯೋಜನೆಯಡಿ 90 ದಿನಗಳ ಕಾಲ ಖರೀದಿಸುವಂತೆ ಕೇಂದ್ರ ಕೃಷಿ ಸಚಿವಾಲಯ ರಾಜ್ಯ ಸರ್ಕಾರಕ್ಕೆ ಅನುಮತಿ ನೀಡಿತ್ತು. ಅವಧಿ ಹೆಚ್ಚಿಸಲು ಗಮನ ಸೆಳೆದಿದ್ದರು ಸಚಿವ ಜೋಶಿ: ಆದರೆ, ಹೆಚ್ಚಿನ ಪ್ರಮಾಣದಲ್ಲಿ ಬೆಳೆ ಇದ್ದುದರಿಂದ, ರೈತರ ಹಿತದೃಷ್ಟಿಯಿಂದ ಬೆಂಬಲ ಬೆಲೆ ಖರೀದಿಯ ಕಾಲಮಿತಿ ಹೆಚ್ಚಿಸುವಂತೆ ಧಾರವಾಡದ ಸಂಸದರೂ ಆಗಿರುವ ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರು ಕೇಂದ್ರ ಕೃಷಿ ಸಚಿವರಲ್ಲಿ ಮನವಿ ಮಾಡಿದ್ದರು. ಅಲ್ಲದೇ, ಇತ್ತೀಚೆಗೆ ರಾಜ್ಯ ಸರ್ಕಾರ ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು. ಸಚಿವರ ಮನವಿಗೆ ಸ್ಪಂದಿಸಿ ಕ್ರಮ: ಕೇಂದ್ರ ಆಹಾರ ಸಚಿವ ಪ್ರಲ್ಹಾದ ಜೋಶಿ ಅವರ ಮನವಿ ಮೇರೆಗೆ ಕೇಂದ್ರ ಸರ್ಕಾರ ಬೆಂಬಲ ಬೆಲೆಯಲ್ಲಿ ಶೇಂಗಾ ಖರೀದಿ ಪ್ರಕ್ರಿಯೆಯನ್ನು ಫೆಬ್ರವರಿ 15ರವರೆಗೆ ವಿಸ್ತರಿಸಿ ಆದೇಶ ಹೊರಡಿಸಿದೆ. 3 ಮೆಟ್ರಿಕ್ ಟನ್ ಖರೀದಿಗೆ ಸೂಚನೆ: ಕೇಂದ್ರ ಸರ್ಕಾರ ರಾಜ್ಯದಿಂದ ಈ ಬಾರಿ ಒಟ್ಟು 57703 ಮೆಟ್ರಿಕ್ ಟನ್ ಶೇಂಗಾವನ್ನು ಬೆಂಬಲ ಬೆಲೆಯಲ್ಲಿ ಖರೀದಿಸಲಿದೆ ಎಂದು ಕೇಂದ್ರ ಆಹಾರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ಮೊದಲಿಗೆ 36,974 ಮೆಟ್ರಿಕ್ ಟನ್ ಶೇಂಗಾ ಖರೀದಿಗೆ ರಾಜ್ಯಕ್ಕೆ ಸೂಚಿಸಲಾಗಿತ್ತು. ಈಗ ಅವಧಿ ವಿಸ್ತರಣೆ ಜತೆಗೆ ಮತ್ತೆ 20,730 ಮೆಟ್ರಿಕ್ ಟನ್ ಶೇಂಗಾವನ್ನು ಹೆಚ್ಚುವರಿಯಾಗಿ ಖರೀದಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಲಾಗಿದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ. ರಾಜ್ಯದಲ್ಲಿ ಶೇಂಗಾ ಬೆಳೆದ ರೈತರ ಪರಿಸ್ಥಿತಿ ಅರಿತು ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಕೃಷಿ ಸಚಿವ ಶಿವರಾಜಸಿಂಗ್ ಚವ್ಹಾಣ ಅವರು ಸ್ಪಂದಿಸಿದ್ದು, ಸಮಸ್ತ ರೈತರ ಪರವಾಗಿ ಕೃತಜ್ಞತೆ ಸಲ್ಲಿಸುವುದಾಗಿ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ

## ಭೀಕರ ಕೊಲೆ

ಬಹುದೆಂದು ಮೃತ ವ್ಯಕ್ತಿಯ ಪೋಷಕರು ಸಹ ಶಂಕೆ ವ್ಯಕ್ತಪಡಿಸಿದ್ದಾರೆ.
ಸುದ್ದಿ ತಿಳಿಯುತ್ತಿದ್ದಂತೆ ಕೆ ಎಂ ದೊಡ್ಡಿ ಠಾಣೆಯ ಪೊಲೀಸರು ಸ್ಥಳಕ್ಕೆ ತೆರಳಿ ಶ್ವಾನದಳ ಮತ್ತು ಬೆರಳಚ್ಚು ತಜ್ಞರ ಜೊತೆ ಪ್ರಾಥಮಿಕ ತನಿಖೆ ನಡೆಸಿದ್ದಾರೆ. ಸದ್ಯ ಮೃತದೇಹವನ್ನು ಆಸ್ಪತ್ರೆಗೆ ಸ್ಥಳಾಂತರಿಸಲಾಗಿದ್ದು, ಪ್ರಕರಣ ದಾಖಲಿಸಿಕೊಳ್ಳಲಾಗಿದೆ. ಅಲ್ಲದೇ ಆರೋಪಿಗಳ ಪತ್ತೆಗೂ ಬಲೆ ಬೀಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಹತ್ಯೆಯಾದ ಕೃಷ್ಣೇಗೌಡರಿಗೆ ಇಬ್ಬರು ಮಕ್ಕಳು, ಪತ್ನಿ ಹಾಗೂ ತಾಯಿ ಇದ್ದು, ಕುಟುಂಬದವರ ಆಕ್ರಂದನ ಮುಗಿಲು ಮುಟ್ಟಿದೆ.

## ಜಾತ್ರೆಗೆ ಹೊರಟಿದ್ದಾಗ ಅಪಘಾತ

ಕೆಲಸ ಮಾಡುತ್ತಿದ್ದರು. ರಾಣೆಬೆನ್ನೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.
ಚಾಲಕನ ನಿಯಂತ್ರಣ ತಪ್ಪಿ ವಾಹನ ಪಲ್ಟಿಯಾಗಿ ಕೂಲಿ ಕೆಲಸಕ್ಕೆ ತೆರಳುತ್ತಿದ್ದ ನಾಲ್ವರು ಕಾರ್ಮಿಕರು ಗಂಭೀರವಾಗಿ ಗಾಯಗೊಂಡಿರುವ ಘಟನೆ ಹಾಸನ ಜಿಲ್ಲೆಯ ಸಕಲೇಶಪುರ ತಾಲೂಕಿನ ನಿಡನೂರು ಬಳಿ ನಡೆದಿದೆ. 14 ಕಾರ್ಮಿಕರನ್ನು ಕೂಲಿ ಕೆಲಸಕ್ಕೆ ಕರೆದೊಯ್ದಿದ್ದಾಗ ವಾಹನ ಪಲ್ಟಿಯಾಗಿದೆ.

# ನಟ ಡಾಲಿ ಧನಂಜಯ್ ಮದುವೆಗೆ ಮುಕ್ತ ಅವಕಾಶ



**ಮೈಸೂರು:** ಸ್ಯಾಂಡಲ್ ವುಡ್ ನಟ ಡಾಲಿ ಧನಂಜಯ್ ಅವರ ವಿವಾಹ ಫೆಬ್ರವರಿ 15ಮತ್ತು 16ರಂದು ಮೈಸೂರಿನ ವಸ್ತು ಪ್ರದರ್ಶನ ಆವರಣದಲ್ಲಿ ನೆರವೇರಲಿದ್ದು ಅಭಿಮಾನಿಗಳು ಪಾಲ್ಗೊಳ್ಳಲು ಮುಕ್ತ ಅವಕಾಶ ನೀಡಲಾಗಿದೆ.

ಈ ಕುರಿತು ಸ್ವತಃ ನಟ ಡಾಲಿ ಧನಂಜಯ್ ಅವರು ಮೈಸೂರಿನ ವಸ್ತು ಪ್ರದರ್ಶನ ಆವರಣದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ್ದಾರೆ. ಮದುವೆಗೆ ಈಗಾಗಲೇ ಸಿದ್ಧತೆ ಮಾಡಿಕೊಳ್ಳಲಾಗುತ್ತಿದ್ದು, ಮೈಸೂರಿನಲ್ಲೇ ಮದುವೆ ಆಗಬೇಕು ಎನ್ನುವುದು ನಮ್ಮ ಕನಸು. ನನ್ನ ವಿದ್ಯಾಭ್ಯಾಸ, ಚಿತ್ರರಂಗಕ್ಕೆ ಕಾಲಿಟ್ಟಿದ್ದು ಎಲ್ಲವು ಮೈಸೂರಿನಿಂದಲೇ. ತಾಯಿ ಚಾಮುಂಡೇಶ್ವರಿ ಆಶೀರ್ವಾದ ಸಿಗಲಿ. ಮದುವೆಯಲ್ಲಿ ಪಾಲ್ಗೊಳ್ಳಲು ಅಭಿಮಾನಿಗಳಿಗೆ ಮುಕ್ತ ಅವಕಾಶ ನೀಡಿದ್ದೇವೆ. ಎಲ್ಲರು ನೇರವಾಗಿ ಬಂದು ನನಗೆ ಆಶೀರ್ವಾದ ಮಾಡಿ ಹೋಗಬಹುದು. ವಿದ್ಯಾಪತಿ ದ್ವಾರ ಮೂಲಕ ಅಭಿಮಾನಿಗಳಿಗೆ ಎಂಟ್ರಿ ಇರುತ್ತದೆ ಎಂದು ತಿಳಿಸಿದರು.

ಚಿತ್ರರಂಗ, ರಾಜಕೀಯ ನಾಯಕರು ಎಲ್ಲರನ್ನ ಮದುವೆಗೆ ಕರೆದಿದ್ದೇನೆ. ಎಲ್ಲರು ಬಂದು ಆಶೀರ್ವಾದ ಮಾಡಬೇಕು ಎಂಬುದು ನಮ್ಮ ಬಯಕೆ. ಅಹ್ವಾನ ನೀಡಿರುವವರು ಬರುತ್ತಾರೆ ಎಂಬ ನಿರೀಕ್ಷೆ ಇದೆ. ನನಗೆ ಮಂತ್ರ ಮಾಂಗಲ್ಯ, ವಚನ ಮಾಂಗಲ್ಯ, ರಿಜಿಸ್ಟರ್ ಮದುವೆ ಆಗುವ ಆಸೆ ಇತ್ತು.

ನಮ್ಮ ಕುಟುಂಬ ಸದಸ್ಯರು, ಚಿತ್ರರಂಗ, ಸ್ನೇಹಿತರು ಎಲ್ಲರಿಗೂ ಊಟ ಹಾಕಿಸಬೇಕು. ಹೀಗಾಗಿ ಒಂದೇ ವೇದಿಕೆಯಲ್ಲಿ ಎಲ್ಲರಿಗೂ ಊಟ ಹಾಕಿ ಆಶೀರ್ವಾದ ಪಡೆಯೋಣ ಎಂಬ ಆಸೆಯಿಂದ ಇಲ್ಲಿ ಮದುವೆ ಆಗುತ್ತಿದ್ದೇನೆ ಎಂದು ಡಾಲಿ ಧನಂಜಯ್ ತಿಳಿಸಿದರು.

ಚಾಮುಂಡೇಶ್ವರಿ ದೇವಾಲಯ ಮಾದರಿಯಲ್ಲಿ ವೇದಿಕೆ ನಿರ್ಮಾಣ ಆಗುತ್ತಿದೆ. ದಕ್ಷಿಣ ಭಾರತದ ಮಾದರಿಯ ಊಟದ ವ್ಯವಸ್ಥೆ ಇದೆ. ಅಭಿಮಾನಿಗಳು, ವಿಐಪಿ ಗಳಿಗೆ ಪ್ರತ್ಯೇಕ ಊಟದ ವ್ಯವಸ್ಥೆ ಮಾಡಲಾಗಿದೆ. ಎಲ್ಲರಿಗೂ ಒಂದೇ ಮಾದರಿಯ ಊಟ ಇರುತ್ತದೆ. ಆದರೆ ಪ್ರತ್ಯೇಕವಾಗಿ ಊಟದ ವ್ಯವಸ್ಥೆ ಮಾಡಲಾಗಿದೆ. ಎಲ್ಲರು ಮದುವೆಗೆ ಬನ್ನಿ ಹಾರೈಸಿ ಎಂದು ನಟ ಡಾಲಿ ಧನಂಜಯ ಮನವಿ ಮಾಡಿದರು.

**ನಟ ದರ್ಶನ್ ನನ್ನ ಮದುವೆಗೆ ಬಂದ್ರೆ ನನಗೆ ಸಂತೋಷ:** ನಟ ದರ್ಶನ್ ಗೆ ವಿವಾಹ ಆಮಂತ್ರಣ ಪತ್ರಿಕೆ ಆಹ್ವಾನ ವಿಚಾರ ಕುರಿತು ಪ್ರತಿಕ್ರಿಯಿಸಿದ ನಟ ಡಾಲಿ ಧನಂಜಯ್, ನನ್ನ ಮದುವೆಗೆ ದರ್ಶನ್ ಅವರು ಬಂದ್ರೆ ನನಗೆ ತುಂಬಾ ಸಂತೋಷ. ಈಗಿನ ಪರಿಸ್ಥಿಯಲ್ಲಿ ಅವರನ್ನ ಭೇಟಿ ಮಾಡಲು ಆಗುತ್ತಿಲ್ಲ.

ಕನ್ನಡ ಚಿತ್ರರಂಗದ ಎಲ್ಲರನ್ನೂ ಕರೆದಿದ್ದೇನೆ. ದರ್ಶನ್ ರವರನ್ನ ಕರೆಯಲು ಪ್ರಯತ್ನ ಮಾಡುತ್ತಿದ್ದೇನೆ. ದರ್ಶನ್ ರವರು ಸಿಗುತ್ತಿಲ್ಲ. ಖಂಡಿತವಾಗಿ ದರ್ಶನ್ ನನ್ನ ಮದುವೆಗೆ ಬಂದರೆ ನನಗೆ ಸಂತೋಷ ಎಂದು ಹೇಳಿದರು.

# ನಿಧಾನಗತಿಯಲ್ಲಿ ಅರ್ಜಿ ಸಲ್ಲಿಕೆ

ಕೋಟಾ (ರಾಜಸ್ಥಾನ) : ದೇಶದ ಅತಿ ದೊಡ್ಡ ವೈದ್ಯಕೀಯ ಪ್ರವೇಶ ಪರೀಕ್ಷೆಯಾಗಿರುವ ನೀಟ್ (ರಾಷ್ಟ್ರೀಯ ಅರ್ಹತಾ ಮತ್ತು ಪ್ರವೇಶ ಪರೀಕ್ಷೆ)ಗೆ ಆನ್ ಲೈನ್ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಿದೆ. ಆದರೆ, ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ ಈ ಬಾರಿ ಅಭ್ಯರ್ಥಿಗಳ ಅರ್ಜಿ ಸಲ್ಲಿಕೆಯಲ್ಲಿ ನಿಧಾನಗತಿ ಕಂಡಿದೆ. ಫೆಬ್ರವರಿ 7ರಿಂದ ಪ್ರಾರಂಭವಾಗಿರುವ ಅರ್ಜಿ ಸಲ್ಲಿಕೆ ಪ್ರಕ್ರಿಯೆ 5ದಿನದ ಹೊತ್ತಿಗೆ 1.90 ಲಕ್ಷ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ.

ಈ ಕುರಿತು ಆನ್‌ಲೈನ್ ಅರ್ಜಿ ಸಲ್ಲಿಕೆ ಕೇಂದ್ರದ ಆಪರೇಟರ್ ಪಂಕಜ್ ಖಂಡೆಲ್ವಾಲ್ ಮಾತನಾಡಿ, ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿಯ ನೀಟ್ ಯುಜಿ ಪರೀಕ್ಷೆಗೆ ಫೆ. 10ರ ಸಂಜೆವರೆಗೆ 1.75 ಲಕ್ಷ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದಾರೆ ಎಂದರು.

ತಜ್ಞರ ಪ್ರಕಾರ, 2025ರ ನೀಟ್ ಯುಜಿ ಪರೀಕ್ಷೆಗೆ 25 ಲಕ್ಷ ಅಭ್ಯರ್ಥಿಗಳು ರಾಜರಾಗುವ ಸಾಧ್ಯತೆ ಇದೆ. ಈ ಲೆಕ್ಕದಲ್ಲಿ ಪ್ರತಿನಿತ್ಯ ಸುಮಾರು 80 ಸಾವಿರ ಅರ್ಜಿ ಸಲ್ಲಿಕೆಯಾಗಬೇಕಿದೆ. ಆದರೆ, ಇದುವರೆಗೆ ಅಷ್ಟು ಗಣನೀಯ ಪ್ರಮಾಣದ ಅರ್ಜಿಗಳು ಸಲ್ಲಿಕೆಯಾಗಿಲ್ಲ. ದಿನಕ್ಕೆ 38 ಸಾವಿರ ಅರ್ಜಿಗಳು ಸಲ್ಲಿಕೆಯಾಗುತ್ತಿವೆ. ಈ ಅರ್ಜಿ ಸಲ್ಲಿಕೆಗೆ ಮಾರ್ಚ್ 7 ಕಡೆಯ ದಿನವಾಗಿದೆ ಎಂದು ಅವರು ತಿಳಿಸಿದರು.

ಅರ್ಜಿ ಸಲ್ಲಿಕೆ ದಿನಾಂಕ ವಿಸ್ತರಣೆ ಇಲ್ಲ : ಸದ್ಯ ಅರ್ಜಿ ಸಲ್ಲಿಕೆಯಲ್ಲಿ ಅಭ್ಯರ್ಥಿಗಳಿಗೆ ಯಾವುದೇ ಸಮಸ್ಯೆ ಕಾಣಿಸಿಕೊಂಡಿಲ್ಲ. ಅಲ್ಲದೇ, ಅರ್ಜಿ ಸಲ್ಲಿಕೆ ವೇಳೆ ಅಪಾರ್ (೦ಠಿಚಿಚಿಡಿ) ಐಡಿ ಕಡ್ಡಾಯವಿಲ್ಲ. ಆರಂಭದಲ್ಲಿ ಸರ್ವರ್ ಸಮಸ್ಯೆ ಉಂಟಾಗಿತ್ತು. ಈ ವೇಳೆ ಮೊದಲು ಅರ್ಜಿ ಸಲ್ಲಿಕೆ ಮಾಡಿ, ಅಲ್ಲಿ ಯಾವುದಾದರೂ ಕೊರತೆ ಇದ್ದಲ್ಲಿ ಪೂರ್ಣ ಮಾಡಿ, ತಕ್ಷಣಕ್ಕೆ ಅರ್ಜಿ ಭರ್ತಿ ಮಾಡುವಂತೆ ತಿಳಿಸಿದೆವು.

ನ್ಯಾಷನಲ್ ಟೆಸ್ಟಿಂಗ್ ಏಜೆನ್ಸಿ ಜೆಇಇ ಮೇನ್ಸ್ 2025 ಪರೀಕ್ಷೆಗೆ ಅರ್ಜಿ ವಿಸ್ತರಣೆ ಮಾಡಿಲ್ಲ. ಈ ಹಿನ್ನೆಲೆ ನೀಟ್ ಯುಜಿಗೆ ದಿನಾಂಕ ವಿಸ್ತರಣೆ ಮಾಡುವುದಿಲ್ಲ. ಅಭ್ಯರ್ಥಿಗಳು ನಿಗದಿತ ಸಮಯದಲ್ಲಿ ಅರ್ಜಿ ಭರ್ತಿ ಮಾಡುವುದು ಒಳಿತು ಎಂದು ಸಲಹೆ ನೀಡಿದ್ದಾರೆ.

ನೋಂದಣಿ ಬಳಿಕ ದಾಖಲಾತಿ ಅಪ್‌ಲೋಡ್ ಗೆ ಸಮಸ್ಯೆ : ಪಂಕಜ್ ಖಂಡೆಲ್ವಾಲ್ ಹೇಳುವಂತೆ, ಮಂಗಳವಾರ ಬೆಳಗ್ಗೆ ನೋಂದಣಿಗೆ ಯಾವುದೇ ಸಮಸ್ಯೆ ಆಗಿಲ್ಲ. ಆದರೆ, ದಾಖಲಾತಿ ಅಪ್‌ಲೋಡ್ ಮಾಡುವಲ್ಲಿ ಸಮಸ್ಯೆಯಾಗುತ್ತಿದೆ.

ಕೋಟಾದಲ್ಲಿನ ಎಲ್ಲಾ ಕೇಂದ್ರದಲ್ಲಿ ಈ ಸಮಸ್ಯೆ ಕಾಣುತ್ತಿದೆ. ಫಿಂಗರ್‌ಪ್ರಿಂಟ್ ಮತ್ತು ಪೋಸ್ಟ್‌ಕಾರ್ಡ್ ಫೋಟೋಗಳು ಅಪ್‌ಲೋಡ್ ಆಗುತ್ತಿಲ್ಲ. ಕಳೆದ ರಾತ್ರಿಯಿಂದ ಈ ಸಮಸ್ಯೆ ಕಾಡುತ್ತಿದೆ. ಇದರಿಂದ ಸಾವಿರಾರು ಅಭ್ಯರ್ಥಿಗಳು ತೊಂದರೆ ಎದುರಿಸುತ್ತಿದ್ದಾರೆ.

ಬಿಡಿಎಸ್, ಬಿಹೆಚ್‌ಎಂಎಸ್ ಮತ್ತು ಬಿಎಎಂಎಸ್ ಗೂ ದಾಖಲಾತಿ ಲಭ್ಯ : ನೀಟ್ ಯುಜಿ ಮೂಲಕ ಎಂಬಿಬಿಎಸ್ ಕೋರ್ಸ್ ಆಸಕ್ತಿ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುತ್ತಿದ್ದಾರೆ.

ಇದರಲ್ಲಿ ಸರ್ಕಾರಿ ಎಂಬಿಬಿಎಸ್ ಸೀಟ್ ಆದ್ಯತೆಯನ್ನು ಅವರು ಹೊಂದಿದ್ದಾರೆ. ಈ ಪ್ರವೇಶ ಪರೀಕ್ಷೆ ಮೂಲಕವೇ ಬಿಡಿಎಸ್, ಬಿಎಸ್ಸಿ ನರ್ಸಿಂಗ್, ಬಿಎಎಂಎಸ್, ಬಿಯುಎಂಎಸ್ ಮತ್ತು ಬಿಎಸ್‌ಎಂಎಸ್ ಪ್ರವೇಶ ಪಡೆಯಬಹುದಾಗಿದೆ. ಈ ಎಲ್ಲಾದಕ್ಕೂ ನೀಟ್ ಯುಜಿ ಫಲಿತಾಂಶದ ಆಧಾರದ ಮೇಲೆ ಪ್ರತ್ಯೇಕ ಸಮಾಲೋಚನೆ ಮೂಲಕ ಮಾಡಲಾಗುವುದು ಎಂದು ವರದಿಯಾಗಿದೆ.

## ಸಂಸದ ಕುಮಾರ್ ನಾಯ್ಕ್ ಕನ್ನಡದಲ್ಲಿ ಚರ್ಚೆ

**ನವದೆಹಲಿ:** ರಾಯಚೂರು ಸಂಸದ ಕುಮಾರ್ ನಾಯ್ಕ್ ಲೋಕಸಭೆಯಲ್ಲಿ ಕನ್ನಡದಲ್ಲೇ ಮಾತನಾಡಿ ಗಮನ ಸೆಳೆದರು. ಬಜೆಟ್ ಕುರಿತು ಮಾತನಾಡಿದ ಅವರು, ಮಾನ್ಯ ಅರ್ಥ ಸಚಿವರು ಮಂಡಿಸಿದ ಬಜೆಟ್ ವಾಸ್ತವತೆಯನ್ನು ಬಿಂಬಿಸುವ ಕನ್ನಡಿಯೂ ಅಲ್ಲ, ಭವಿಷ್ಯತ್ತಿಗೆ ದಾರಿ ತೋರುವ ದೀವಿಗೆಯೂ ಅಲ್ಲ. ಕಟ್ಟುಕತೆಗಳ ಕಂತೆ, ಅತಿ ಧೈರ್ಯದ ಹೇಳಿಕೆಗಳು, ಮಹದಾಸೆಯ ಸ್ಲೋಗನ್‌ಗಳು. ಜನಜೀವನದ ಕಷ್ಟ ಕಾರ್ಪಣ್ಯಗಳಿಂದ ವಿಮುಖವಾಗಿರುವಂತಹ ಪುಟ್ಟ ಪುಸ್ತಕ ಎಂದರು.

## ಅಪಘಾತ : 7 ಜನ ಸಾವು

**ಜಬಲ್ಪುರ :** ಕುಂಭಮೇಳದಿಂದ ಹಿಂತಿರುಗುತ್ತಿದ್ದ ಮಿನಿ ಬಸ್ ಹಾಗೂ ಟ್ರಕ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ 7 ಜನ ಸಾವನ್ನಪ್ಪಿರುವ ಘಟನೆ ಮಧ್ಯಪ್ರದೇಶದ ಜಬಲ್ಪುರ–ಪ್ರಯಾಗ್‌ರಾಜ್ ಮಾರ್ಗದಲ್ಲಿ ಸಂಭವಿಸಿದೆ. ಜಬಲ್ಪುರ – ಪ್ರಯಾಗ್‌ರಾಜ್ ರಾಷ್ಟ್ರೀಯ ಹೆದ್ದಾರಿಯಲ್ಲಿ ಬರುತ್ತಿದ್ದ ಮಿನಿ ಬಸ್, ವಿರುದ್ಧ ದಿಕ್ಕಿನಿಂದ ವೇಗವಾಗಿ ಬರುತ್ತಿದ್ದ ಸಿಮೆಂಟ್ ತುಂಬಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದಿದೆ. ಪರಿಣಾಮ 7 ಜನ ಪ್ರಾಣ ಕಳೆದುಕೊಂಡಿದ್ದಾರೆ. ಮೃತರೆಲ್ಲರೂ ಆಂಧ್ರಪ್ರದೇಶದ ನಿವಾಸಿಗಳು ಎಂದು ಹೇಳಲಾಗುತ್ತಿದೆ. ಜಬಲ್ಪುರ ಜಿಲ್ಲಾಧಿಕಾರಿ ಹಾಗೂ ಪೊಲೀಸ್ ವರಿಷ್ಠಾಧಿಕಾರಿ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸುತ್ತಿದ್ದಾರೆ. ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗುತ್ತಿದೆ.



ರಷ್ಯಾ ದೇಶದ ಭಾರತದ ರಾಯಬಾರಿ ಹೆಚ್.ಇ. ಡೇನಿಸ್ ಅಲಿಪ್ರೋವ್ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿ ನಿವಾಸದಲ್ಲಿ ಭೇಟಿಯಾಗಿ ಚರ್ಚಿಸಿದರು.

# ತಂಬಾಕು ಸೇವನೆಯ ಅಪಾಯಗಳ ಕುರಿತು ಜಾಗೃತಿ ಅಭಿಯಾನ



**ಬೆಂಗಳೂರು:** ಬಿಬಿಎಂಪಿ ವ್ಯಾಪ್ತಿಯಲ್ಲಿ ತಂಬಾಕು ಸೇವನೆಯ ಅಪಾಯಗಳು, ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ ಮತ್ತು ಹುಕ್ಕಾ ನಿಷೇಧದ ಕುರಿತು ಜಾಗೃತಿ ಮೂಡಿಸಲು ಆಟೋ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಆರೋಗ್ಯ ವಿಭಾಗದ ವಿಶೇಷ ಆಯುಕ್ತರಾದ ಶ್ರೀ ಸುರಳ್ಕರ್ ವಿಕಾಸ್ ಕಿಶೋರ್ ರವರು ತಿಳಿಸಿದರು.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ), ವಿಶ್ವ ಆರೋಗ್ಯ ಸಂಸ್ಥೆಯೊಂದಿಗೆ ಪಾಲುದಾರಿಕೆ ಹೊಂದಿರುವ ಬ್ಲೂಮ್‌ಬರ್ಗ್ ಫಿಲಾಂತ್ರಫೀಸ್ ಬೆಂಬಲಿತ ಆರೋಗ್ಯಕರ ನಗರಗಳ ಪಾಲುದಾರಿಕೆಯೊಂದಿಗೆ(ಕಚಿಡಿಣಟಜಡಿಖಿ ಜಿಂಡಿ ಊಜಚಿಟಣಠಿ ಛಿಣಙಚಿ) ಸ್ಟಾಟಜೀಸ್‌ನ ಸಹಭಾಗಿತ್ವದಲ್ಲಿ ತಂಬಾಕಿನ ಹಾನಿಕಾರಕ ಪರಿಣಾಮಗಳು, ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಸೇವನೆಯ ಅಪಾಯಗಳು ಮತ್ತು ಹುಕ್ಕಾ ನಿಷೇಧದ ಬಗ್ಗೆ ಜಾಗೃತಿ ಮೂಡಿಸಲು ನಗರದಾದ್ಯಂತ ಆಟೋ ಅಭಿಯಾನವನ್ನು ಆರಂಭಿಸಿದೆ.

ಈ ಉಪಕ್ರಮದ ಭಾಗವಾಗಿ 16 ಬ್ರಾಂಡ್ ಆಟೋರಿಕ್ಷಾಗಳು ನಗರದ ಅತ್ಯಂತ ಜನದಟ್ಟಣೆಯ ಪ್ರದೇಶಗಳಲ್ಲಿ ಸಂಚರಿಸಲಿದ್ದು, ತಂಬಾಕು ಸಂಬಂಧಿತ ಹಾನಿಗಳು ಮತ್ತು ಧೂಮಪಾನ ಮುಕ್ತ ಸಾರ್ವಜನಿಕ ಸ್ಥಳಗಳ ಮಹತ್ವದ ಕುರಿತು ಸಾರ್ವಜನಿಕರಿಗೆ ಅರಿವು ಮೂಡಿಸುವ ಉದ್ದೇಶದಿಂದ ಮೊದಲೇ ರೆಕಾರ್ಡ್ ಮಾಡಿರುವ ಸಂದೇಶಗಳನ್ನು ಪ್ರಸಾರ ಮಾಡುತ್ತವೆ. ಒಂದು ವಾರದವರೆಗೆ ನಡೆಯಲಿರುವ ಈ ಅಭಿಯಾನವು ತಂಬಾಕು ನಿಯಂತ್ರಣ ಕಾನೂನುಗಳ ಪಾಲನೆಯನ್ನು ಬಲಗೊಳಿಸಲು ಮತ್ತು ಆರೋಗ್ಯಕರ ಬೆಂಗಳೂರನ್ನು ಉತ್ತೇಜಿಸಲು ಪ್ರಯತ್ನಿಸುತ್ತದೆ.

ನಮ್ಮ ಮಕ್ಕಳು, ನಮ್ಮ ಭವಿಷ್ಯ ಮತ್ತು ತಂಬಾಕಿನ ಅಪಾಯಗಳಿಂದ ಅವರನ್ನು ರಕ್ಷಿಸುವುದು ನಮ್ಮ ಜವಾಬ್ದಾರಿಯಾಗಿದೆ. ಈ ಅಭಿಯಾನವು ಸಾರ್ವಜನಿಕರಿಗೆ ಧೂಮಪಾನದಿಂದ ಆರೋಗ್ಯದ ಮೇಲಾಗುವ ಅಪಾಯಗಳ ಬಗ್ಗೆ ಅರಿವು ಮೂಡಿಸುತ್ತದೆ. ಹುಕ್ಕಾ ಮತ್ತು ಇ-ಸಿಗರೇಟ್‌ಗಳ ನಿಷೇಧವನ್ನು ಪ್ರಮುಖವಾಗಿ ಪ್ರಸ್ತಾಪಿಸುತ್ತದೆ ಮತ್ತು ತಂಬಾಕು ನಿಯಂತ್ರಣ ಕಾನೂನುಗಳ ಪಾಲನೆಯನ್ನು ಉತ್ತೇಜಿಸುತ್ತದೆ ಎಂದರು.

ಆರೋಗ್ಯಕರ ನಗರಗಳ ಪಾಲುದಾರಿಕೆ – ಸ್ಮೋಕ್ ಫ್ರೀ ಬೆಂಗಳೂರು ಉಪಕ್ರಮದ ಯೋಜನಾ ನಿರ್ದೇಶಕಿ ಡಾ. ತ್ರಿವೇಣಿ ಬಿ ಎಸ್ ರವರು ಮಾತನಾಡಿ, ಬಿಬಿಎಂಪಿಯೊಂದಿಗೆ ಪಾಲುದಾರಿಕೆ ಮಾಡಿಕೊಳ್ಳುವ ಮೂಲಕ, ಯುವ ಜನತೆಯನ್ನು ತಂಬಾಕಿನ ಹಾನಿಕಾರಕ ಪರಿಣಾಮಗಳಿಂದ ರಕ್ಷಿಸುವ ಮತ್ತು ಸಾರ್ವಜನಿಕ ಸ್ಥಳಗಳು ಧೂಮಪಾನದ ಹೊಗೆ ಮುಕ್ತವಾಗಿರುವುದನ್ನು ಖಾತ್ರಿಪಡಿಸಿಕೊಳ್ಳುವ ಬೆಂಗಳೂರಿನ ಬದ್ಧತೆಯನ್ನು ನಾವು ಬಲಪಡಿಸುತ್ತಿದ್ದೇವೆ ಎಂದು ಹೇಳಿದರು.

ನಗರದಲ್ಲಿ ತಂಬಾಕು ನಿಯಂತ್ರಣ ಕ್ರಮಗಳನ್ನು ಮತ್ತಷ್ಟು ಬಲಪಡಿಸುವ ಮತ್ತು ಅಸ್ತಿತ್ವದಲ್ಲಿರುವ ನಿಯಮಗಳೊಂದಿಗೆ ಹೆಚ್ಚಿನ ಸಾರ್ವಜನಿಕ ಪಾಲನೆಯನ್ನು ಖಾತ್ರಿಪಡಿಸಿಕೊಳ್ಳುವ ನಿಟ್ಟಿನಲ್ಲಿ ಈ ಉಪಕ್ರಮವು ಒಂದು ಮಹತ್ವದ ಹೆಜ್ಜೆಯಾಗಿದೆ. ಬಿಬಿಎಂಪಿ ಎಲ್ಲಾ ನಾಗರಿಕರು ಈ ಉಪಕ್ರಮವನ್ನು ಬೆಂಬಲಿಸಬೇಕು ಮತ್ತು ಆರೋಗ್ಯಕರ, ಧೂಮಪಾನದ ಹೊಗೆ ಮುಕ್ತ ಬೆಂಗಳೂರನ್ನು ನಿರ್ಮಿಸಲು ಕೊಡುಗೆ ನೀಡಬೇಕೆಂದು ಆಗ್ರಹಿಸುತ್ತದೆ. ಈ ವೇಳೆ ಮುಖ್ಯ ಆರೋಗ್ಯಾಧಿಕಾರಿ ಡಾ. ಸೈಯದ್ ಸಿರಾಜುದ್ದೀನ್ ಮದಿನಿ, ತಂಬಾಕು ನಿಯಂತ್ರಣ ಕಾರ್ಯಕ್ರಮದ ಅಧಿಕಾರಿ ಡಾ. ಕುಮಾರ್, ವಲಯ ಆರೋಗ್ಯ ಅಧಿಕಾರಿ, ವೈದ್ಯಕೀಯ ಅಧಿಕಾರಿಗಳು ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಅಕ್ರಮವಾಗಿ ಸಿಡಿಆರ್ ಸಂಗ್ರಹ; ವಿಚಾರಣೆಗೆ ಹಾಜರಾಗುವಂತೆ ಐಶ್ವರ್ಯಾ ಗೌಡಗೆ ನೋಟಿಸ್

**ಬೆಂಗಳೂರು :** ಅಕ್ರಮವಾಗಿ ಹಲವು ವ್ಯಕ್ತಿಗಳ ಫೋನ್ ಕರೆ ದಾಖಲೆಗಳನ್ನು (ಸಿಡಿಆರ್) ಪಡೆದುಕೊಂಡಿರುವ ಆರೋಪ ಎದುರಿಸುತ್ತಿರುವ ಐಶ್ವರ್ಯಾ ಗೌಡಗೆ ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ಪೊಲೀಸರು ನೋಟಿಸ್ ನೀಡಿದ್ದಾರೆ.

ಫೆಬ್ರವರಿ 13ರಂದು ವಿಚಾರಣೆಗೆ ಹಾಜರಾಗುವಂತೆ ಸೂಚಿಸಿ ವಿಜಯನಗರ ಉಪವಿಭಾಗದ ಎಸಿಪಿ ಚಂದನ್ ಅವರು ಐಶ್ವರ್ಯಾ ಗೌಡಗೆ ನೋಟಿಸ್ ನೀಡಿದ್ದಾರೆ ಎಂದು ವರದಿಯಾಗಿದೆ.



ಮಾಜಿ ಸಂಸದ ಡಿ ಕೆ ಸುರೇಶ್ ಅವರ ಸಹೋದರಿ ಎಂದು ಕೋಟ್ಯಂತರ ರೂಪಾಯಿ ವಂಚಿಸಿದ ಆರೋಪ ಎದುರಿಸುತ್ತಿರುವ ಐಶ್ವರ್ಯಾ ಗೌಡ 5 ಹಾಗೂ ಅವರ ಪತಿಯ 2 ಮೊಬೈಲ್ ಫೋನ್‌ಗಳನ್ನು ಪೊಲೀಸರು ವಶಕ್ಕೆ ಪಡೆದಿದ್ದರು. ನಂತರ ಅವುಗಳಲ್ಲಿದ್ದ ಡೇಟಾ ಸಂಗ್ರಹಣೆಗಾಗಿ ನ್ಯಾಯಾಲಯದ ಅನುಮತಿ ಪಡೆದು ಪಶ್ಚಿಮ ವಿಭಾಗದ ಸಿಇಎನ್ ಠಾಣೆಗೆ ರವಾನಿಸಿದ್ದರು. ಆ ಫೋನ್‌ಗಳಲ್ಲಿರುವ ಡೇಟಾವನ್ನು ಸಂಗ್ರಹಿಸಿದಾಗ ಅದರಲ್ಲಿ ಹಲವು ವ್ಯಕ್ತಿಗಳ ಫೋನ್ ಕರೆ ದಾಖಲೆಗಳು (ಸಿಡಿಆರ್) ಪತ್ತೆಯಾಗಿದ್ದವು. ವಂಚನೆ ಪ್ರಕರಣದ ತನಿಖಾಧಿಕಾರಿಯಾಗಿರುವ ಎಸಿಪಿ ಭರತ್ ರೆಡ್ಡಿ ಅವರು ನೀಡಿರುವ ದೂರಿನ ಮೇರೆಗೆ ಬ್ಯಾಟರಾಯನಪುರ ಪೊಲೀಸ್ ಠಾಣೆಯಲ್ಲಿ ಐಶ್ವರ್ಯಾ ಗೌಡ ಹಾಗೂ ಅವರಿಗೆ ಸಿಡಿಆರ್ ಒದಗಿಸಿದ ಅಪರಿಚಿತರ ವಿರುದ್ಧ ಎ□□□ಆರ್ ದಾಖಲಾಗಿತ್ತು.

ಮೊದಲ ಪುಟದಿಂದ

## ದೆಹಲಿಯಲ್ಲಿ ಮೊಕ್ಕಾಂ

ಕೇಂದ್ರ ಸಚಿವ ಅಮಿತ್ ಶಾ ಬ್ಯುಸಿಯಾಗಿದ್ದಾರೆ. ಹಾಗಾಗಿ ಕಳೆದ 2 ದಿನಗಳಿಂದ ವಿಜಯೇಂದ್ರ ಅವರಿಗೆ ಅಮಿತ್ ಶಾರವರನ್ನು ಭೇಟಿ ಮಾಡಲು ಸಾಧ್ಯವಾಗಿಲ್ಲ.

ದೆಹಲಿಯಲ್ಲಿರುವ ವಿಜಯೇಂದ್ರ ಅವರು ಅಮಿತ್ ಶಾರವರನ್ನು ಭೇಟಿ ಮಾಡಿ ರಾಜ್ಯ ಬಿಜೆಪಿಯ ವಿದ್ಯಮಾನಗಳನ್ನೆಲ್ಲಾ ಅವರ ಗಮನಕ್ಕೆ ತಂದು ಅವರೊಂದಿಗೆ ಚರ್ಚಿಸಿದ ನಂತರವೇ ಬೆಂಗಳೂರಿಗೆ ವಾಪಸ್ಸಾಗುವರು ಎಂದು ಅವರ ಆಪ್ತ ಮೂಲಗಳು ಹೇಳಿವೆ.

ಬಿಜೆಪಿ ರಾಜ್ಯಾಧ್ಯಕ್ಷರಾಗಿ ಮುಂದುವರೆಯುವ ಇಚ್ಛೆ ಹೊಂದಿರುವ ವಿಜಯೇಂದ್ರ ಅವರು ಅಮಿತ್ ಶಾರವರ ಭೇಟಿ ಸಂದರ್ಭದಲ್ಲಿ ತಮಗೆ ಮತ್ತೊಂದು ಅವಕಾಶ ನೀಡಬೇಕು ಎಂಬ ಮನವಿಯನ್ನು ಮಾಡುವರು ಎನ್ನಲಾಗಿದೆ.ಭಿನ್ನಮತೀಯರು ದೆಹಲಿಯಲ್ಲಿ ವಿಜಯೇಂದ್ರ ಅವರು ದೆಹಲಿಯಲ್ಲಿ ಇರುವಾಗಲೇ ಬಿಜೆಪಿಯ ಭಿನ್ನಮತೀಯ ನಾಯಕರುಗಳು ದೆಹಲಿಯಲ್ಲೇ ಇದ್ದಾರೆ.

## ಹೂಡಿಕೆದಾರರನ್ನು ಸೆಳೆಯಲು ಸಜ್ಜು

ಭವ್ಯ ಸಮಾರಂಭದಲ್ಲಿ ಕೇಂದ್ರ ರಕ್ಷಣಾ ಸಚಿವ ರಾಜನಾಥ ಸಿಂಗ್ ಅವರು ಸಮಾವೇಶ ಉದ್ಘಾಟಿಸಲಿದ್ದಾರೆ. ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ಎಚ್.ಡಿ.ಕುಮಾರಸ್ವಾಮಿ, ಶೋಭಾ ಕರಂದ್ಲಾಜೆ, ವಿ.ಸೋಮಣ್ಣ ಸೇರಿದಂತೆ ಇತರ ಗಣ್ಯರು ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ ಎಂದು ಕೈಗಾರಿಕಾ ಸಚಿವ ಎಂ. ಬಿ. ಪಾಟೀಲ್ ಅವರು ತಿಳಿಸಿದ್ದಾರೆ. ಕೆಲವು ಕೇಂದ್ರ ಸಚಿವರು ನಾಲ್ಕು ದಿನಗಳಲ್ಲಿ ಯಾವುದಾದರೊಂದು ದಿನ ಭಾಗವಹಿಸುವ ಭರವಸೆ ನೀಡಿದ್ದಾರೆ.

ಉದ್ದಿಮೆ, ನೀತಿ ನಿರೂಪಣೆ ಹಾಗೂ ನಾವೀನ್ಯತೆ ಕ್ಷೇತ್ರದ ದಿಗ್ಗಜರ ಸಮಾಗಮಕ್ಕೆ, ಚಿಂತನ ಮಂಥನಕ್ಕೆ ಇದು ವೇದಿಕೆ ಒದಗಿಸಲಿದೆ. ಬುಧವಾರದಿಂದ ಶುಕ್ರವಾರದವರೆಗೆ ನಡೆಯಲಿರುವ ವಿವಿಧ ವಿಚಾರಗೋಷ್ಠಿಗಳಲ್ಲಿ ವಿವಿಧ ಕ್ಷೇತ್ರಗಳ ದಿಗ್ಗಜರು ಉದ್ದಿಮೆ ಲೋಕದ ಭವಿಷ್ಯದ ಬಗೆಗಿನ ತಮ್ಮ ಒಳನೋಟಗಳನ್ನು ಹಂಚಿಕೊಳ್ಳಲಿದ್ದಾರೆ. ಪ್ರಮುಖ ಹೂಡಿಕೆ ಒಪ್ಪಂದಗಳಿಗೆ ಸಹಿ ಹಾಕಲಾಗುವುದು ಎಂದು ಅವರು ವಿವರಿಸಿದ್ದಾರೆ.

ಸಮಾವೇಶದಲ್ಲಿ ಇದೇ ಮೊದಲ ಬಾರಿಗೆ ಇನ್ವೆಸ್ಟ್ ಕರ್ನಾಟಕ ಪ್ರಶಸ್ತಿ, ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. 'ಎಸ್‌ಎಂಇ ಕನೆಕ್ಟ್– 25', ವೆಂಚುರೈಸ್ ನ ಎರಡನೆ ಆವೃತ್ತಿ ಇತರ ವಿಶೇಷತೆಗಳಾಗಿವೆ. 60ಕ್ಕೂ ಹೆಚ್ಚು ಕಂಪನಿಗಳು ಮತ್ತು ನವೋದ್ಯಮಗಳು ತಯಾರಿಕೆ, ಸಂಚಾರ ಮತ್ತು ಶುದ್ಧ ಇಂಧನ ಕ್ಷೇತ್ರಗಳಲ್ಲಿ ಗಮನಾರ್ಹ ಬದಲಾವಣೆಗೆ ಕಾರಣವಾಗುವ ತಂತ್ರಜ್ಞಾನಗಳನ್ನು ಪ್ರದರ್ಶಿಸಲಿವೆ. ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾಗಿರುವ ಕ್ವಿನ್ ಸಿಟಿ–ನಲ್ಲಿ ಸಹಭಾಗಿತ್ವ ವಿಸ್ತರಿಸಲು ಆದ್ಯತೆ ನೀಡಲಾಗುವುದು.

ಕರ್ನಾಟಕವನ್ನು ಜಾಗತಿಕ ಬಂಡವಾಳ ಹೂಡಿಕೆಯ ಪ್ರಮುಖ ತಾಣವನ್ನಾಗಿ ಇಡೀ ವಿಶ್ವಕ್ಕೆ ಪ್ರದರ್ಶಿಸಲು, ಪಾಲುದಾರಿಕೆ ಉತ್ತೇಜಿಸಲು ಮತ್ತು ವಿವಿಧ ಕೈಗಾರಿಕಾ ವಲಯಗಳಲ್ಲಿ ನಾವೀನ್ಯತೆಗೆ ಚಾಲನೆ ನೀಡುವುದು ಸಮಾವೇಶದ ಮುಖ್ಯ ಉದ್ದೇಶವಾಗಿದೆ. ಇದು ಬಂಡವಾಳ ಹೂಡಿಕೆಗೆ ವೇದಿಕೆಯಾಗಿರುವುದರ ಜೊತೆಗೆ, ಸರ್ಕಾರ ಮತ್ತು ಉದ್ಯಮ ವಲಯದ ನಡುವಣ ಅರ್ಥಪೂರ್ಣ ಸಹಯೋಗ ಬೆಸೆಯುವುದಕ್ಕೂ ನೆರವಾಗಲಿದೆ. ವಿವಿಧ ಕೈಗಾರಿಕಾ ವಲಯಗಳಲ್ಲಿ ಜಾಗತಿಕ ಪಾಲುದಾರಿಕೆ ಬೆಳೆಸುವುದರ ಜೊತೆಗೆ, ನಾವೀನ್ಯತೆ ಮತ್ತು ಹೂಡಿಕೆ ಕೇಂದ್ರವಾಗಿರುವ ಕರ್ನಾಟಕದ ಮಹತ್ವವನ್ನು ಇಡೀ ವಿಶ್ವಕ್ಕೆ ಮತ್ತೊಮ್ಮೆ ಮನದಟ್ಟು ಮಾಡಿಕೊಡಲಿದೆ.

75ಕ್ಕೂ ಹೆಚ್ಚು ಗಣ್ಯ ಭಾಷಣಕಾರರು ಭಾಗವಹಿಸಲಿದ್ದಾರೆ. 25ಕ್ಕೂ ಹೆಚ್ಚು ತಾಂತ್ರಿಕ ಅಧಿವೇಶನಗಳು, 10ಕ್ಕೂ ಹೆಚ್ಚು ದೇಶಗಳ ಜೊತೆಗಿನ ಸಭೆ, ಮತ್ತು ಎಸ್‌ಎಂಇ ಕನೆಕ್ಟ್‌ಗೆ ಸಂಬಂಧಿಸಿದ ಸಮಾಲೋಚನೆಗಳಿಗೆ ಈ ಹೂಡಿಕೆ ಶೃಂಗಸಭೆಯು ಸಾಕ್ಷಿಯಾಗಲಿದೆ.

ರಾಜ್ಯಕ್ಕೆ ಭಾರಿ ಪ್ರಮಾಣದಲ್ಲಿ ಬಂಡವಾಳ ಹರಿದು ಬರಲು ಅಗತ್ಯವಾದ ಭೂಮಿಕೆಯನ್ನು ರಾಜ್ಯ ಸರ್ಕಾರವು ಹದಗೊಳಿಸಿದೆ. ಇತ್ತೀಚಿನ ವರ್ಷಗಳಲ್ಲಿ ಹತ್ತಾರು ಪ್ರಥಮಗಳನ್ನು ತನ್ನ ಮುಡಿಗೆ ಏರಿಸಿಕೊಂಡಿರುವ ಕರ್ನಾಟಕವು, ಈ ಸಮಾವೇಶದ ನೆರವಿನಿಂದ ತನ್ನ ಕೈಗಾರಿಕಾ ಪ್ರಗತಿಯ ವೇಗ ಹೆಚ್ಚಿಸಲು ದೃಢ ನಿರ್ಧಾರ ಮಾಡಿದೆ ಎಂದು ಸಚಿವ ಎಂ.ಬಿ ಪಾಟೀಲ್ ಅವರು ವಿವರಿಸಿದ್ದಾರೆ.

# ಪಶು ಇಲಾಖೆ ಖಾಲಿ ಇರುವ ಸಿಬ್ಬಂದಿ ಕೂಡಲೇ ಭರ್ತಿಗೆ ಮನವಿ

ಮುಳಬಾಗಿಲು: ತಾಲೂಕಿನ ನಾದ್ಯಂತ ಪಶು ಇಲಾಖೆ ಖಾಲಿ ಇರುವ ಸಿಬ್ಬಂದಿಯನ್ನು ಕೂಡಲೇ ಭರ್ತಿ ಮಾಡಿ ಗ್ರಾಮೀಣ ಪ್ರದೇಶದ ಹಸುಗಳ. ಸೇವೆಗೆ ಹೆಚ್ಚಿನ ಆದ್ಯತೆ ನೀಡಿ, ಚಿಕಿತ್ಸೆ ನೀಡಲು ಹಣ ಕೇಳುವ ವೈದ್ಯರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ರೈತ ಸಂಘದಿಂದ ಪಶು ಸಂಗೋಪನೆ ಇಲಾಖೆ ಮುಂದೆ ಹೋರಾಟ ಮಾಡಿ ಸಹಾಯಕ ನಿರ್ದೇಶಕರಿಗೆ ಮನವಿ ನೀಡಿ ಆಗ್ರಹಿಸಲಾಯಿತು.

ಮನವಿ ನೀಡಿ ಮಾತನಾಡಿದ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ.ನಾರಾಯಣಗೌಡ ಜಿಲ್ಲೆಯಲ್ಲಿ ಸತತ ಬರಗಾಲದ ಹಿನ್ನಲೆಯಲ್ಲಿ ಅಂತರ್ಜಲ ದಿನೆ ದಿನೆ ಕುಸಿತಗೊಂಡು ಕೊಳವೆಬಾವಿಗಳು ಕೈಕೊಟ್ಟು ಬೆಳೆ ಕೈಗೆ ಸಿಗದೆ ಖಾಸಗಿ ಸಾಲಕ್ಕೆ ಸಿಲುಕಿ ಕೃಷಿಯಿಂದ ವಿಮುಕ್ತಿ ಹೊಂದುತ್ತಿದ್ದ, ಜಿಲ್ಲೆಯ ರೈತರ ಬಾಳಿಗೆ ಬೆಳಕಾಗಿ ಹೈನೋದ್ಯಮ ಕೈ ಹಿಡಿದಿದೆ ಶೇಕಡ 90 ರಷ್ಟು ಗ್ರಾಮೀಣ ಪ್ರದೇಶ ಜನರು ಹೈನುಗಾರಿಕೆಯಿಂದ ಜೀವನ ಮಾಡುತ್ತಿದ್ದು, ಹಾಲು ಉತ್ಪಾದನೆಯಲ್ಲಿ ಕೋಲಾರ ಜಿಲ್ಲೆ ಪ್ರಥಮ ಸ್ಥಾನದಲ್ಲಿದೆ. ಆದರೆ ಜಿಲ್ಲೆಯ ಹೈನುಗಾರಿಕೆಯ ಬೆಳಕಾಗಿರುವ ಪಶು ಹಸುಗಳನ್ನು ರಕ್ಷಣೆ ಮಾಡಬೇಕಾದ ಇಲಾಖೆ



ಇದ್ದು, ಇಲ್ಲದಂತಾಗಿ ಪ್ರತಿ ಒಂದು ಚಿಕಿತ್ಸೆಗೆ ಖಾಸಗಿ ವೈದ್ಯರನ್ನು ಅವಲಂಬಿಸಬೇಕಾದ ಪರಿಸ್ಥಿತಿ ಜಿಲ್ಲೆಯಲ್ಲಿದೆ ಜಿಲ್ಲೆಯಾದ್ಯಂತ ಇರುವ ಪಶು ವೈದ್ಯ ಕೇಂದ್ರಗಳಲ್ಲಿ ಸಿಬ್ಬಂದಿ ಇಲ್ಲದೆ ಪ್ರತಿಯೊಬ್ಬ ಹಿರಿಯ ವೈದ್ಯರಿಗೆ ಮೂರು ತಾಲ್ಲೂಕುಗಳ ಜವಾಬ್ದಾರಿ ನೀಡುತ್ತಿದ್ದಾರೆ. ಕಾರಣ ಸಮರ್ಪಕವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಪಶು ವೈದ್ಯ ಸೇವೆ ಇಲ್ಲದೆ ಜನ ಸಾಮಾನ್ಯರು ಪರದಾಡಬೇಕಾದ ಪರಿಸ್ಥಿತಿ ಇದ್ದರು ಇದನ್ನು ಗಂಭೀರವಾಗಿ ಪರಿಗಣಿಸುವಲ್ಲಿ ಉಸ್ತುವಾರಿ ಸಚಿವರು ಮತ್ತು ಸರ್ಕಾರ ವಿಫಲವಾಗಿದೆ ಎಂದು ಅಸಮದಾನ ವ್ಯಕ್ತಪಡಿಸಿದರು.

ತಾಲ್ಲೂಕಿನ.ಅಧ್ಯಕ್ಷ. ಯಲವಳ್ಳಿ.ಪ್ರಭಾಕರ ಮಾತನಾಡಿ ಇರುವ ಸಿಬ್ಬಂದಿ ಗ್ರಾಮೀಣ ಪ್ರದೇಶಗಳ ಸೇವೆಯೆಂದರೆ ಅಸಹ್ಯವಾಗಿ ವರ್ತನೆ ಮಾಡುವ ಜೊತೆಗೆ ಹಳ್ಳಿಗೆ ಕಾಲಿಟ್ಟರೆ ಹಣ ವಿಲ್ಲದೆ ಯಾವುದೇ ಚಿಕಿತ್ಸೆ ನೀಡುತ್ತಿಲ್ಲ ಅದರ ಜೊತೆಗೆ ಸರ್ಕಾರದಿಂದ ಬರುವ ಔಷಧಿಗಳನ್ನು ಸಮರ್ಪಕವಾಗಿ ವಿತರಣೆ ಮಾಡದೆ, ದಾಸ್ತಾನು ಮಾಡಿರುವ ಕೊಠಡಿಗಳಲ್ಲಿಯೇ ಕೊಳೆಯುತ್ತಿದ್ದರೂ ಅದರ ಬಗ್ಗೆ ಗಮನಹರಿಸದ ಪಶು ಉಪನಿರ್ದೇಶಕರ ರೈತ ವಿರೋಧಿ ದೋರಣೆಗೆ ಜನ ಸಾಮಾನ್ಯರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಜೊತೆಗೆ ಇಲಾಖೆ ಎಂಬುದು ಭ್ರಷ್ಟಾಚಾರದ ಕೂಪವಾಗಿದೆ. ಮಾತ್ರೆಯಿಂದ ಸೂಜಿಯವರೆಗೂ ಹಣ ಇಲ್ಲದೆ ವೈದ್ಯರು ಕಾರಿನಿಂದ ಕೆಳಗಡೆ ಸಹ ಇಳಿಯುವುದಿಲ್ಲ. ಅದರ ಜೊತೆಗೆ ಖಾಸಗಿ ಮೆಡಿಕಲ್ ಸ್ಟೋರ್‌ಗೆ ಔಷಧಿಗಳನ್ನು ಬರೆದುಕೊಡುವ ದೊಡ್ಡ ದಂದೆಯಾಗಿಸಿಕೊಂಡಿದ್ದಾರೆ. ಜಿಲ್ಲೆಯ ಜನರ ಮೇಲೆ ಉಪ ನಿರ್ದೇಶಕರಿಗೆ ಕರುಣೆ ಇದ್ದರೆ, ಕೂಡಲೇ ಜಿಲ್ಲಾದ್ಯಂತ ಖಾಲಿ ಇರುವ ಸಿಬ್ಬಂದಿಯನ್ನು ನೇಮಕ ಮಾಡುವಂತೆ ಸರ್ಕಾರದ ಮೇಲೆ ಒತ್ತಡ ಹಾಕಿ ಗ್ರಾಮೀಣ ಸೇವೆಗೆ ಹೆಚ್ಚಿನ ಆದ್ಯತೆ ನೀಡಬೇಕು ಹಾಗೂ ಇರುವ ಸಿಬ್ಬಂದಿ ಚಿಕಿತ್ಸೆ ನೀಡಲು ಹಣಕ್ಕಾಗಿ ಪೀಡಿಸುವ ವೈದ್ಯರ ವಿರುದ್ಧ ಕ್ರಮ ಕೈಗೊಂಡು ಸರ್ಕಾರದಿಂದ ಬರುವ ಪಶು ಇಲಾಖೆ ಅನುದಾನಗಳನ್ನು ಸಮರ್ಪಕವಾಗಿ ರೈತರಿಗೆ ತಲುಪಿಸಲು ಕರಪತ್ರದ ಮುಖಾಂತರ ಜಾಗೃತಿ ಮೂಡಿಸಬೇಕು. ಇಲ್ಲವಾದರೆ ಇಲಾಖೆಗೆ ಶಾಶ್ವತವಾಗಿ ಬೀಗ ಜಡಿಯುವ ಚಳುವಳಿಯನ್ನು ಹಮ್ಮಿಕೊಳ್ಳುವ ಎಚ್ಚರಿಕೆಯನ್ನು ನೀಡಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಹಾಯಕ ನಿರ್ದೇಶಕರಾದ ಭಾಗ್ಯಮ್ಮ ಮಾತನಾಡಿ ಇಲಾಖೆಯಲ್ಲಿ ಶೇಕಡ 60% ರಷ್ಟು ಸಿಬ್ಬಂದಿ ಕೊರತೆ ಇದೆ. ಇರುವ ಸಿಬ್ಬಂದಿಗೆ 3–4 ಹೋಬಳಿಗಳಿಗೆ ಪ್ರಭಾರವಾಗಿ ನೇಮಕ ಮಾಡಿ ಕೆಲಸದ ಒತ್ತಡ ಹೆಚ್ಚಾಗಿದೆ ಜೊತೆಗೆ ಗ್ರಾಮೀಣ ಪ್ರದೇಶಗಳ ಸಮರ್ಪಕವಾದ ಸೇವೆಗೆ ಹಣ ಕೇಳುವ ಬಗ್ಗೆ ಹೆಚ್ಚಿನ ದೂರುಗಳು ಬಂದಿದ್ದು, ಅದನ್ನು ಸರಿಪಡಿಸುವ ಜೊತೆಗೆ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವಂತೆ ಹಿರಿಯ ಅಧಿಕಾರಿಗಳೊಡನೆ ಚರ್ಚೆ ಮಾಡಿ ಸರ್ಕಾರಕ್ಕೆ ಮಾಹಿತಿ ನೀಡುವ ಭರವಸೆಯನ್ನು ನೀಡಿದರು.

ಮನವಿ ನೀಡುವಾಗ.ಬಂಗಾರಿ ಮಂಜು. ರಾಜ್ಯ ಪ್ರಧಾನ ಕಾರ್ಯದರ್ಶಿ ಫಾರುಖಪಾಷ. ರಾಜೇಶ. ಬಾಸ್ಕರ್. ಹೆಬ್ಬಣಿ. ಅನಂದ ರಡ್ಡಿ. ಸುನಿಲ ಕುಮಾರ.

# ಕರ್ನಾಟಕ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಆಯ್ಕೆ

ಶಿಡ್ಲಘಟ್ಟ: ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರಾದ ಆಂಜಿನಪ್ಪ(ಪುಟ್ಟು) ರವರ ಬೆಂಬಲಿತರು ಕರ್ನಾಟಕ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಆಯ್ಕೆಯಾಗಿದ್ದಾರೆ.

ಕರ್ನಾಟಕ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಕ್ಷೇತ್ರದ ಕಾಂಗ್ರೆಸ್ ಅಧ್ಯಕ್ಷರಾಗಿ ದರ್ಶನ್ ರಾಜ್, ಚಿಲಕಲನೇರ್ಪು ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷರಾಗಿ ಡಿ.ಎನ್. ರವಿಚಂದ್ರನ್, ಬ್ಲಾಕ್ ಯುವ ಕಾಂಗ್ರೆಸ್ ಉಪಾಧ್ಯಕ್ಷರಾಗಿ ಎನ್.ರಾಕೇಶ್, ಪ್ರಧಾನ ಕಾರ್ಯದರ್ಶಿಯಾಗಿ ಚಾಂದ್ ಪಾಷ ಚುನಾವಣೆಯಲ್ಲಿ ಜಯಶೀಲರಾಗಿದ್ದಾರೆ.

ನಗರದ ಕಾಂಗ್ರೆಸ್ ಭವನದಲ್ಲಿ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಆಯ್ಕೆಯಾದವರನ್ನು ಮುಖಂಡರಾದ ಆಂಜಿನಪ್ಪ(ಪುಟ್ಟು) ಅವರು ದರ್ಶನ್ ರಾಜ್, ರವಿಚಂದ್ರನ್, ಡಿ.ಎನ್. ರಾಕೇಶ್,ಚಾಂದ್ ಪಾಷ ರವರಿಗೆ ಶಾಲು ಹೊದಿಸಿ ಹಾರ ಹಾಕಿ ಸನ್ಮಾನಿಸಿ ಅಭಿನಂದಿಸಿದರು.

ಮುಖಂಡರಾದ ಆಂಜಿನಪ್ಪ (ಪುಟ್ಟು ) ಮಾತನಾಡಿ ಕಾಂಗ್ರೆಸ್ ಪಕ್ಷ ಕಟ್ಟಿ ಹೆಚ್ಚು ಹೆಚ್ಚು ಯುವಕರನ್ನು ಪಕ್ಷಕ್ಕೆ ಸೇರ್ಪಡೆ ಮಾಡಿ, ಜನರ ಪರ ಸೇವೆಗಳನ್ನು ಸರ್ಕಾರ ಏನೂ ಮಾಡುತ್ತದೆ ಅದನ್ನು ಸಹಾ ಜನರಿಗೆ ಮಟ್ಟಿಸುವುದು ಹಾಗು ತಾವು ಕೂಡ ಪಕ್ಷ ಸಂಘಟನೆಯಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ರಾಜಕೀಯವಾಗಿ ಶಕ್ತಿಯುತವಾಗಿ ಎಲ್ಲರೂ ಬೆಳೆಯುವಂತಾಗಲಿ ಅವರ ಬೆನ್ನಿಗೆ ನಾವು ಸದಾ ನಿಂತು ಆ ಯುವಕರನ್ನ ನಾವು ಬೆಳೆಯುವಂತಹ ಕೆಲಸ ಮಾಡಬೇಕಾಗುತ್ತದೆ ಆ ನಿಟ್ಟಿನಲ್ಲಿ ಗೆದ್ದಿರುವಂತಹ ಎಲ್ಲಾ ಅಭ್ಯರ್ಥಿಗಳಿಗೆ



ಶುಭ ಹಾರೈಸುತ್ತೇವೆ ಎಂದರು.


ಈ ಸಂದರ್ಭದಲ್ಲಿ ವೈ.ಹುಣಸೇನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷಮುರಳಿ, ಪಿ.ಎಲ್.ಡಿ. ಬ್ಯಾಂಕ್ ನಿರ್ದೇಶಕರಾದ ಗುಡಿಹಳ್ಳಿ ಚಂದ್ರು,ತುಮ್ಮನಹಳ್ಳಿ ವೆಂಕಟೇಶ್,ದೊಡ್ಡದಾದಸರಹಳ್ಳಿ ದೇವರಾಜ್, ಬೂದಾಳ ವರದರಾಜ್, ದಾವೋದರ್,ವಾರದಹುಣಸೇನಹಳ್ಳಿ ಮಂಜುನಾಥ್,ಸುಗುಟೂರು ನಾಗೇಶ್ ಉಲ್ಲೂರು ಪೇಟೆ ಮದನ್ ಗೌಡ,ಅಪ್ಸರ್ ಪಾಷ, ಸಮೀರ್ ಮುಂತಾದವರು ಹಾಜರಿದ್ದರು.

# ದ್ವಿಚಕ್ರ ವಾಹನಗಳ ಮುಖಾಮುಖಿ ಡಿಕ್ಕಿ

ಶಿಡ್ಲಘಟ್ಟ: ಶಿಡ್ಲಘಟ್ಟ–ಚಿಂತಾಮಣಿ ಮಾರ್ಗದ ರಾಷ್ಟ್ರೀಯ ಹೆದ್ದಾರಿ–234 ರಲ್ಲಿ ಎರಡು ದ್ವಿ ಚಕ್ರ ವಾಹನಗಳ ನಡುವೆ ಮುಖಾ ಮುಖಿ ಡಿಕ್ಕಿಯಲ್ಲಿ ದ್ವಿ ಚಕ್ರವಾಹನ ಸವಾರನೊಬ್ಬ ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೆ ಮೃತಪಟ್ಟಿದ್ದು ಇನ್ನೊಬ್ಬ ಬೈಕ್ ಸವಾರ ತೀವ್ರವಾಗಿ ಗಾಯಗೊಂಡಿದ್ದಾನೆ.

ನಗರ ಹೊರವಲಯ ಚಿಂತಾಮಣಿ ಮಾರ್ಗ ಪಂಪ್‌ಹೌಸ್ ಬಳಿ ನಡೆದ ಅಪಘಾತದಲ್ಲಿ ವೀರಾಪುರ ಗ್ರಾಮದ ಹೂವಿನ ವ್ಯಾಪಾರಿ ಮುನಿಯಪ್ಪ(60) ಗಂಭೀರವಾಗಿ ಗಾಯಗೊಂಡು ಸ್ಥಳದಲ್ಲೆ ಮೃತಪಟ್ಟಿದ್ದಾನೆ.

ಇನ್ನೊಂದು ಬೈಕ್‌ನ ಸವಾರನ ಪೂರ್ಣ ವಿವರ ತಿಳಿದಿಲ್ಲ, ಆತನೂ ಗಂಭೀರವಾಗಿ ಗಾಯಗೊಂಡು ಬೆಂಗಳೂರಿನ ಆಸ್ಪತ್ರೆಯಲ್ಲಿ ಚಿಕಿತ್ಸೆಗೆ ದಾಖಲಾಗಿದ್ದಾನೆಂದು ತಿಳಿದು ಬಂದಿದೆ.



ಮುನಿಯಪ್ಪ ಅವರು ನಗರದ ಕೋಟೆ ವೃತ್ತದಲ್ಲಿ ಫುಟ್‌ಪಾತ್ ನಲ್ಲಿ ಹೂವಿನ ವ್ಯಾಪಾರ ಮಾಡುತ್ತಿದ್ದು ಬೆಳಗ್ಗೆ ವ್ಯಾಪಾರಕ್ಕೆಂದು ನಗರಕ್ಕೆ ತೆರಳುತ್ತಿದ್ದು ಶಿಡ್ಲಘಟ್ಟದ ಕಡೆಯಿಂದ ಬಂದ ಬೈಕ್ ಡಿಕ್ಕಿಯಾಗಿದೆ, ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದು ಪ್ರಕರಣ ದಾಖಲಿಸಿಕೊಂಡು ಮುಂದಿನ ಕ್ರಮ ಕೈಗೊಂಡಿದ್ದಾರೆ.

# ಪ್ರಗತಿ ಆಶ್ರಯ ಮನೆಯನ್ನು ಗೃಹಪ್ರವೇಶ– ಮುನೇಶ್

**ಮುಳಬಾಗಿಲು:** ತಾಲೂಕನ್ನು ಗುಡಿಸಲು ಮುಕ್ತ ತಾಲೂಕನ್ನಾಗಿ ಮಾಡಿ ತಾಲೂಕನ್ನು ವಿಭಿನ್ನ ರೀತಿಯ ಕಾರ್ಯಕ್ರಮಗಳ ಮೂಲಕ ಪ್ರಗತಿ ಚಾರಿಟೇಬಲ್ ಟ್ರಸ್ಟ್ ಅಭಿವೃದ್ಧಿಪಡಿಸಲಾಗುತ್ತಿದೆ ಎಂದು ಅಧ್ಯಕ್ಷರಾದ ಮುನೇಶ್ ರವರು ತಿಳಿಸಿದರು.

ತಾಲೂಕಿನ ಬೈರಕೂರು ಪಂಚಾಯಿತಿಗೆ ಸೇರಿದ ತೊಂಡಹಳ್ಳಿ ಗ್ರಾಮದಲ್ಲಿ ಪ್ರಗತಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಪ್ರಗತಿ ಆಶ್ರಯ ಗೃಹಪ್ರವೇಶ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಇವರು ಬಡ ದಲಿತ ನಿರಾಶ್ರಿತ ಸುನಂದಮ್ಮ ಅವರ ಕುಟುಂಬಕ್ಕೆ ಉಚಿತವಾಗಿ ನವೀಕರಣಗೊಳಿಸಿದ ಮನೆ ನಿರ್ಮಾಣ ಮಾಡಿಕೊಟ್ಟಿದ್ದಾರೆ.ಅವರ ಸೇವೆ ಹೀಗೆ ಮುಂದುವರೆಯಲಿ ಮುಂದಿನ ದಿನಗಳಲ್ಲಿ ಇನ್ನು ಹೆಚ್ಚು ಸಮಾಜಮುಖಿ ಕಾರ್ಯಕ್ರಮಗಳು ಪ್ರಗತಿ ಚಾರಿಟಬಲ್ ಟ್ರಸ್ಟ್ ಅವರು ಮಾಡಲಿ ಎಂದು ಶುಭ ಕೋರುತ್ತಾ, ನಾವು ನಮ್ಮ ತಾಲೂಕಿನಲ್ಲಿ ಗುಡಿಸಲು ಮುಕ್ತ ಮಾಡುವ ನಿಟ್ಟಿನಲ್ಲಿ ನನ್ನದೇ ಆದ ಸರ್ವೆ ನಡೆಯುತ್ತಿದೆ ದಿನ ಎರಡು ವರ್ಷಗಳಲ್ಲಿ ತಾಲೂಕಿನ ಎಲ್ಲಾ ನಿರಾಶ್ರಿತರಿಗೆ ವಸತಿ ನೀಡುವ ಕಾರ್ಯ ಮಾಡುತ್ತೇವೆ ಹಾಗೂ ಜನತೆಯ ಅಭಿವೃದ್ಧಿಗೆ ಪೂರಕವಾಗಿ ಕಾರ್ಯಕ್ರಮಗಳನ್ನು ಮಾಡಿ ತಾಲೂಕಿನ ಸರ್ವತೋಮುಖ ಅಭಿವೃದ್ಧಿಗೆ ಹಣ



ತೊಟ್ಟು ಕೆಲಸ ಮಾಡುತ್ತೇನೆಂದು ತಿಳಿಸಿದರು.

ಮುಂದಿನ ದಿನಗಳಲ್ಲಿ ಎಲ್ಲಾ ನಾಯಕರ , ಅಧಿಕಾರಿಗಳ ಸಹಕಾರದೊಂದಿಗೆ ತಾಲೂಕಿನ ಅಭಿವೃದ್ಧಿಗೆ ಪೂರಕವಾದ ಯೋಜನೆಗಳನ್ನು ರೂಪಿಸಿ ಜನಸಾಮಾನ್ಯರ ಕಷ್ಟ ಸುಖಗಳಿಗೆ ಸ್ಪಂದಿಸುತ್ತಾ ಕೆಲಸ ಮಾಡಲಾಗುವುದೆಂದು ತಿಳಿಸಿದರು.

ತಾಲೂಕಿನಲ್ಲಿ ಪ್ರಗತಿ ಚಾರಿ ಟಬಲ್ ಟ್ರಸ್ಟ್ ರವರು ಈಗಾಗಲೇ ನಿರಾಶ್ರಿತರಿಗೆ 13 ಮನೆಗಳನ್ನು ಉಚಿತವಾಗಿ ನಿರ್ಮಾಣ ಮಾಡಿಕೊಟ್ಟಿದ್ದು ಅದರ ಜೊತೆಗೆ ಅನೇಕ ಸಮಾಜಮುಖಿ ಕಾರ್ಯಕ್ರಮಗಳನ್ನು ಮಾಡುತ್ತಾ ಬಂದಿದ್ದಾರೆ ಅವರಿಗೆ ನಮ್ಮ ಸಹಕಾರ ಸದಾ ಇರುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಧರ್ಮಸ್ಥಳ ಸಂಘದ ಯೋಜನಾಧಿಕಾರಿಗಳಾದ ಹರೀಶ್, ನಗರದ ಗ್ರಾಮಾಂತರ ಪೊಲೀಸ್ ಠಾಣೆಯ ಸಬ್ ಇನ್ಸ್ಪೆಕ್ಟರ್ ವಿಠಲ ತಲ್ವಾರ್ ,ತಾ. ಶಿಕ್ಷಣ ಸಮನ್ವಯ ಅಧಿಕಾರಿಗಳಾದ ಸೋಮೇಶ್ ,ಪ್ರಗತಿ ಚಾರಿಟೇಬಲ್ ಟ್ರಸ್ಟ್ ನ ಆನಂದ್ , ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಕಾಡೇನಹಳ್ಳಿ ಅಶೋಕ್, ಬಿಜೆಪಿ ಗ್ರಾಮಾಂತರ ಅಧ್ಯಕ್ಷರಾದ ಮೈಸೂರು ಸುರೇಶ್, ರವಿಚಂದ್ರ, ಚೇತನ್ ಪ್ರಸಾದ್, ಅರಿವು ಪ್ರಭಾಕರ್, ಗ್ರಾ. ಪಂ. ಮಾಜಿ ಸದಸ್ಯರಾದ ರವಿಚಂದ್ರ ರಾಜು, ಬೈರಕೂರು ಹಿರಿಯ ಮುಖಂಡರಾದ ರವಿ, ಬೈರಕೂರು ಭಾಗದ ಮುಖಂಡರು, ಪ್ರಗತಿ ಚಾರಿಟೇಬಲ್ ಟ್ರಸ್ಟ್ ನ ಹರೀಶ್, ರಮೇಶ್,ತೊಂಡಹಳ್ಳಿ ಗ್ರಾಮಸ್ಥರು ಮತ್ತಿತರರು ಭಾಗವಹಿಸಿದ್ದರು.




# ಕೊನೆಗೂ ಸಿಕ್ಕಿದ ಪಿಂಜಾರ ನಧಾಫ್‌ದೂದೆಕುಲ ಸಮುದಾಯಕ್ಕೆ ಜಾತಿ ಪ್ರಮಾಣಪತ್ರ



**ದೇವನಹಳ್ಳಿ:** ಹಾಸಿಗೆ ತಯಾರಿಸುವ ಪಿಂಜಾರ ನಧಾಫ್‌ದೂದೆಕುಲ ಸಮುದಾಯಕೆ ್ಕಇದುವರೆಗೂ ಜಾತಿ ಪ್ರಮಾಣಪತ್ರವಿಲ್ಲದ ಕಾರಣಅವರು, ಸರಕಾರದಎಲ್ಲಾ ಸೌಲಭ್ಯಗಳಿಂದ ವಂಚಿತರಾಗಿದ್ದರು. ಈಗ ಸರಕಾರದಿಂದಅಧಿಕೃತವಾಗಿಜಾತಿ ಪ್ರಮಾಣಪತ್ರ ಸಿಕ್ಕಿರುವ ಕಾರಣ ಸರಕಾರದ ಸೌಲತ್ತುಗಳನ್ನು ಸಂವಿಧಾನಬದ್ಧವಾಗಿ ಸಿಗುವಂತಹ ಹಕ್ಕುಗಳನ್ನು ಸದುಪಯೋಗ ಮಾಡಿಕೊಳ್ಳುವಂತೆ ಕೆಪಿಸಿಸಿ ಕಾರ್ಯದರ್ಶಿ ವಿ.ಮಂಜುನಾಥ್ ತಿಳಿಸಿದರು.

ವಿಜಯಪುರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಪಿಂಜಾರ ನಧಾಫ್‌ದೂದೆಕುಲ ಸಮುದಾಯದವರಿಂದಆಯೋಜಿಸಲಾಗಿದ್ದಅಭಿನಂದನಾಕಾರ್ಯಕ್ರಮದಲ್ಲಿಅವರು ಮಾತನಾಡಿದರು. ಇದುವರೆಗೂ ಪಿಂಜಾರ ನಧಾಫ್‌ದೂದೆಕುಲ ಸಮುದಾಯವನ್ನು ಮುಸ್ಲಿಂ ಸಮುದಾಯವೆಂದು ಪರಿಗಣಿಸಲಾಗಿತ್ತು. ಆದರೆ, ಇವರು ಮುಸ್ಲಿಂ ಸಮುದಾಯದಉಪಪಂಗಡವಾಗಿದ್ದಾರೆ. ಹಲವು ವರ್ಷಗಳಿಂದ ಹೋರಾಟ ಮಾಡಿಕೊಂಡು ಬಂದಿದ್ದಾರೆ. ಜನವರಿ 26 ರಂದು ಸರಕಾರದಿಂದಅಧಿಕೃತವಾಗಿ ಪ್ರಮಾಣ ಪತ್ರ ನೀಡಲಾಗಿದೆಎಂದರು.

ಪಿಂಜಾರ ನಧಾಫ್‌ದೂದೆಕುಲ ಸಮುದಾಯದ ರಾಜ್ಯಾಧ್ಯಕ್ಷ ಬಶೀರ್ ಅಹಮದ್‌ಅವರು ಮಾತನಾಡಿ, ರಾಜ್ಯದಲ್ಲಿ 25 ಲಕ್ಷಕ್ಕೂ ಹೆಚ್ಚು ಜನಸಂಖ್ಯೆಇದ್ದರೂ ನಮಗೆ ಜಾತಿ ಪ್ರಮಾಣಪತ್ರಇರಲಿಲ್ಲ. ಇದರಿಂದ ನಾವು ಸರಕಾರದ ಬಳಿ ನಿರಂತರವಾಗಿ ಹೋರಾಟ ಮಾಡಿಕೊಂಡು ಬಂದಿದ್ದೇವೆ. ಈಗ ಜಾತಿ ಪ್ರಮಾಣಪತ್ರ ಸಿಕ್ಕಿದೆ.ಹಿಂದೆ ಅವಕಾಶಗಳಿಂದ ವಂಚಿತರಾಗಿರುವ ಸಮುದಾಯದವರಿಗೆ ನ್ಯಾಯ ಒದಗಿಸಿಕೊಡಬೇಕು, ಮುಂದಿನ ದಿನಗಳಲ್ಲಿ ಎಲ್ಲಾ ರಂಗಗಳಲ್ಲೂ ನಮಗೆ ಅವಕಾಶ ನೀಡಬೇಕುಎಂದರು.

ಪಿಂಜಾರ ನಧಾಫ್‌ದೂದೆಕುಲ ಸಮುದಾಯದ ಜಿಲ್ಲಾಅಧ್ಯಕ್ಷ ಐ.ಎಂ.ಶಫಿ ಮಾತನಾಡಿ, ಜಿಲ್ಲೆಯಲ್ಲಿ ಒಂದೂವರೆ ಸಾವಿರಕ್ಕೂಹೆಚ್ಚುಕುಟುಂಬಗಳಿದ್ದೇವೆ.15 ಸಾವಿರಕ್ಕೂ ಹೆಚ್ಚು ಜನಸಂಖ್ಯೆಇದ್ದೇವೆ. ನಮಗೆ ಜಾತಿ ಪ್ರಮಾಣಪತ್ರಗಳಿಲ್ಲದ ಕಾರಣ, ನಮ್ಮ ಮಕ್ಕಳು ಶಿಕ್ಷಣದಿಂದ ವಂಚಿತರಾಗಿದ್ದಾರೆ. ಈಗಲಾದರೂ ಸರಕಾರ ನಮಗೂ ಸೌಲಭ್ಯಗಳನ್ನು ಒದಗಿಸಿಕೊಡಬೇಕು ಎಂದರು.

ಪಿಂಜಾರ ನಧಾಫ್‌ದೂದೆಕುಲ ಸಂಘದ ಮುಖಂಡರಾದರ ಸೂಲ್ ಸಾಬ್, ಜಾಕೀರ್ ಹುಸೇನ್, ಇಲಿಯಾಜ್, ಮಹಬೂಬಿ, ಬಾಬುಲಾಲ್, ಹಾಗೂ ಬ್ಲಾಕ್‌ಕಾಂಗ್ರೆಸ್‌ಅಧ್ಯಕ್ಷ ವಿ.ರಾಮಚಂದ್ರಪ್ಪ, ಜಿಲ್ಲಾಅಲ್ಪಸಂಖ್ಯಾತಘಟಕದಉಪಾಧ್ಯಕ್ಷ ವಲಿಜಾನ್, ಪುರಸಭೆ ಸದಸ್ಯ ಎಂ.ನಾರಾಯಣಸ್ವಾಮಿ, ಜಗದೀಶ್, ಮಧು, ಅಪ್ಜಲ್, ಜಿಲ್ಲಾಜಾಗೃತಿ ಸಮಿತಿ ಸದಸ್ಯ ಎಂ.ವೇಣುಗೋಪಾಲ್, ಮಾಜಿ ಪುರಸಭೆ ಸದಸ್ಯ ಜೆ.ಎನ್.ಶ್ರೀನಿವಾಸ್, ಎಜಾಜ್, ನಂಜುಂಡಪ್ಪ, ಎ.ಆರ್.ಆಜಂಪಾಷ, ಮುಂತಾದವರು ಹಾಜರಿದ್ದರು.

# ಮೋಹಸಿನ ಕಾಖಂಡಕಿ 1243 ಮತಗಳಿಂದ ಗೆಲುವು

ಕೊಲ್ಹಾರ: ಬ್ಲಾಕ್‌ಯುವಕಾಂಗ್ರೆಸ್‌ಅಧ್ಯಕ್ಷರಚುನಾವಣೆಯಲ್ಲಿಅತಿ ಹೆಚ್ಚು ಮತುಗಳನ್ನು ಪಡೆಯುವ ಮೂಲಕ ಯುವ ಮುಖಂಡ ಮೋಹಸಿನ ಕಾಖಂಡಕಿ ಗೆಲುವು ಸಾಧಿಸಿದ್ದಾರೆ.

ಆನ್ಲೈನ್ ಮೂಲಕ ನಡೆದ ಬ್ಲಾಕ್‌ಯುವಕಾಂಗ್ರೆಸ್‌ಅಧ್ಯಕ್ಷರಚುನಾವಣೆಂುಲ್ಲಿತಮ್ಮ ಪ್ರತಿಸ್ಪರ್ಧಿ ವಿರುದ್ಧ 1243 ಮತಗಳ ಅಂತರದಿಂದ ಗೆಲುವು ಸಾಧಿಸುವ ಮೂಲಕ ಕೊಲ್ಹಾರ ಬ್ಲಾಕ್‌ಯುವಕಾಂಗ್ರೆಸ್‌ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.



ನೂತನವಾಗಿಆಯ್ಕೆಂುಾದಅಧ್ಯಕ್ಷ ಮೋಹಸಿನ ಕಾಖಂಡಕಿತಮ್ಮರಾಜಕೀಯಜೀವನಕಾಂಗ್ರೆಸ್ ಪಕ್ಷದಿಂದ ಆರಂಭಿಸಿ ಯುವಕಾಂಗ್ರೆಸ್ ನಲ್ಲಿ ವಿವಿಧ ಜವಾಬ್ದಾರಿಗಳನ್ನು ನಿರ್ವಹಿಸಿ ಕಳೆದ ವಿಧಾನಸಭೆ, ಲೋಕಸಭೆ ಸೇರಿದಂತೆ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷದ ಪರವಾಗಿ ಸಕ್ರಿಯವಾಗಿ ಪಾಲ್ಗೊಂಡುಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಿದ್ದಾರೆ.

ನೂತನಅಧ್ಯಕ್ಷ ಮೋಹಸಿನ ಕಾಖಂಡಕಿ ಮಾಧ್ಯಮದೊಂದಿಗೆ ಮಾತನಾಡಿದಅವರು ಸರ್ವರಿಗೂ ಸಮಪಾಲು,ಸರ್ವರಿಗೂ ಸಮಬಾಳು ಎಂಬ ಸಿದ್ದಾಂತವನ್ನು ಕಾಂಗ್ರೆಸ್ ಪಕ್ಷ ಪಾಲಿಸುತ್ತಿದೆ. ಎಲ್ಲ ವರ್ಗ, ಧರ್ಮ ಮತ್ತುಜಾತಿಜನಾಂಗದವರನ್ನು ಸರಿಸಮಾನವಾಗಿಕಂಡುಅವರ ಶ್ರೇಯೋಭಿವೃದ್ಧಿಗೆಕಾಂಗ್ರೆಸ್ ಪಕ್ಷ ನಿಲುವಾಗಿದೆ. ಕಾಂಗ್ರೆಸ್ ಪಕ್ಷದಲ್ಲಿ ಸರ್ವರಿಗೂ ಸಮಬಾಳು ಸಿದ್ದಾಂತಗಳನ್ನು ಇರುವುದರಿಂದಇವತ್ತು ನಾನು ಕೊಲ್ಹಾರ ಬ್ಲಾಕ್‌ಯುವಕಾಂಗ್ರೆಸ್‌ಅಧ್ಯಕ್ಷ ಆಗಲು ಕಾರಣ ನನ್ನರಾಜಕೀಯಜೀವನದಲ್ಲಿ ಮೊದಲನೇ ಬಾರಿಕೊಲ್ಹಾರ ಬ್ಲಾಕ್‌ಯುವಕಾಂಗ್ರೆಸ್‌ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧೆ ಮಾಡಿರುವ ನನಗೆ ಯಾವುದೇ ಭೇದವಿಲ್ಲದೆಯುವ ಮತದಾರರುಅಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡಿರುವಯುವ ಮತದಾರರಿಗೆ ಹಾಗೂ ನನ್ನ ಗೆಲುವಿಗಾಗಿ ಶ್ರಮಿಸಿದ ಎಲ್ಲರಿಗೂ ಮತ್ತುಕಾಂಗ್ರೆಸ್ ಮುಖಂಡರಿಗೆಕಾರ್ಯಕರ್ತರಿಗೆ ಧನ್ಯವಾದಗಳು ಎಂದು ಹೇಳಿದರು.

# ವಚನ ಸಾಹಿತ್ಯದಲ್ಲಿ ವಿಶ್ವಭ್ರಾತೃತ್ವ: ಡಾ.ಕೆ.ಬಿ.ಬ್ಯಾಳಿ

**ಕುಕನೂರು:** ಮಕ್ಕಳಲ್ಲಿ ವಚನ ಸಾಹಿತ್ಯದ ಬಗ್ಗೆ ಅರಿವು ಮೂಡಿಸಲು ಶಾಲಾ ಪಠ್ಯಗಳಲ್ಲಿ ವಚನ ಸಾಹಿತ್ಯದ ಅದ್ಯಾಯಗಳನ್ನು ಹೆಚ್ಚಾಗಿ ಸೇರಿಸಬೇಕಾಗಿದೆ ಎಂದು ಹಿರಿಯ ಸಾಹಿತಿ ಡಾ ಕೆ ಬಿ ಬ್ಯಾಳಿ ಹೇಳಿದರು.

ಭಾನುವಾರ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಅಖಿಲ ಭಾರತ ವಚನ ಸಾಹಿತ್ಯ ಮತ್ತು ಸಾಂಸ್ಕೃತಿಕ ಪರಿಷತ್ ನ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ವಚನ ಸಾಹಿತ್ಯ ವಿಶ್ವ ಭ್ರಾತೃತ್ವದ ದಿವ್ಯ ಸಾಹಿತ್ಯವಾಗಿದೆ. ಇಂದಿನ ಪೀಳಿಗೆಗೆ ವಚನ ಸಾಹಿತ್ಯದ ತಿಳುವಳಿಕೆ ಮತ್ತು ಪ್ರಭಾವ ಹೆಚ್ಚಿಸಲು ಪಠ್ಯದಲ್ಲಿ ಅಧ್ಯಯನಗಳನ್ನು ಸೇರಿಸಬೇಕು. ವಚನಗಳನ್ನು ಸರ್ವರಿಗೂ ತಿಳಿಸಲು ವಚನ ಪರಿಷತ್ ಮುಂದಿನ ದಿನಗಳಲ್ಲಿ ಶಾಲೆಗೊಂದು ವಚನ ಸಾಹಿತ್ಯ ಕಾರ್ಯಕ್ರಮ ಆಯೋಜಿಸಿದರೆ ಉತ್ತಮ ಎಂದು ಹೇಳಿದರು.

ಜೀವನದ ನೀತಿ ನಿಯಮಗಳನ್ನು ಶರಣರ ವಚನಗಳಲ್ಲಿ ಕಾಣಬಹುದು. ಮೆಕ್ಯಾಲೆ ಇಂಗ್ಲಿಷ್ ಶಿಕ್ಷಣ ಪದ್ಧತಿ ದೇಶದಲ್ಲಿ ವ್ಯಾಪಿಸಿದಂತೆ ವಚನಗಳು ಇಂದಿನ ಯುವ ಪೀಳಿಗೆ ಬದುಕಿನಲ್ಲಿ ಅಳವಡಿಸಿಕೊಳ್ಳುವ ಕಾರ್ಯಕ್ರಮಗಳನ್ನು ವಚನ ಪರಿಷತ್ ಹಮ್ಮಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಶಿಕ್ಷಣ ಸಂಯೋಜಕ, ಸಾಹಿತಿ ಶರಣಪ್ಪ ರಾವಣಕಿ ಮಾತನಾಡಿ, ಪ್ರತೀ ಗ್ರಂಥಾಲಯದಲ್ಲಿ ವಚನ ಪುಸ್ತಕಗಳು ಹೆಚ್ಚು ಲಭ್ಯವಾಗಬೇಕು. ಯುವ ಪೀಳಿಗೆಗೆ ವಚನಗಳ ಬಗ್ಗೆ ಅರಿವು ಮೂಡಿಸಲು ಪರಿಷತ್ ನಿಂದ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಗುವುದು ಎಂದರು.

ಈ ಸಂದರ್ಭದಲ್ಲಿ ವಚನ ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷ ಈರಯ್ಯ ಕುರ್ತಕೋಟಿ, ನಿವೃತ್ತ ಶಿಕ್ಷಕರು, ಸಾಹಿತಿಗಳಾದ ನಿಂಗಪ್ಪ ತಟ್ಟಿ, ಆದುನಿಕ ವಚನ ಸಾಹಿತಿ, ಶಿಕ್ಷಕ ಬಸವರಾಜ್ ಉಪ್ಪಿನ್, ಪೀರ್ ಸಾಬ್ ದಫೆದಾರ್, ಉಮೇಶ್ ಕಂಬಳಿ, ಶಂಭು ಅರಿಶಿನದ, ಚಂದ್ರು ದೊಡ್ಡಮನಿ, ಕಲ್ಮೇಶ ಬ್ಯಾಳಿ, ತಿಪ್ಪಣ್ಣ ಹೊಸಮನಿ, ಅಡಿವೆಪ್ಪ ಬೋರಣ್ಣವರ, ಇತರರು ಉಪಸ್ಥಿತರಿದ್ದರು.



# ಮಾನವೀಯತೆ ಮೆರೆದ ಆಟೋ ಚಾಲಕ!



**ವರದಿ: ರಾಮಸಮುದ್ರ ಎಸ್.ವೀರಭದ್ರಸ್ವಾಮಿ**

ಚಾಮರಾಜನಗರ: ಪ್ರಯಾಣಿಕರು ಪಯಣ ಮಾಡಿದ ಆಟೋದಲ್ಲಿದ್ದ ಚಿನ್ನದ ಒಡವೆಯ ಬ್ಯಾಗ್ ಅನ್ನ ಆಟೋ ಚಾಲಕ ಹಿಂತಿರುಗಿಸಿ ಮಾನವೀಯತೆ ಮೆರೆದಿದ್ದಾರೆ. ನಗರದ ಆಟೋ ಚಾಲಕ ಸಿದ್ದರಾಜು ಎಂಬುವವರು ಚಿನ್ನವಿದ್ದ ಬ್ಯಾಗ್ ಹಿಂದಿರುಗಿಸಿ ಮಾನವೀಯತೆ ಮೆರೆದಿದ್ದಾರೆ.

ತಾಲ್ಲೋಕಿನ ಹನುಮಪುರದ ರಶ್ಮಿ ಎಂಬುವವರು ರಾಮಸಮುದ್ರ ಕಡೆಯಿಂದ ಪಟ್ಟಣಕ್ಕೆ ಬರುತ್ತಿದ್ದ ಆಟೋವನ್ನ ಏರಿ ಚಿನ್ನದ ಒಡವೆ ಇದ್ದ ಬ್ಯಾಗ್ ಅಲ್ಲೆ ಬಿಟ್ಟು ಪಯಣಿಸಿದ್ದರು.

ನಂತರ ಬ್ಯಾಗ್ ಹುಡುಕಲು ಕಂಗಾಲಾಗಿ ಪೊಲೀಸರ ಮೊರೆ ಹೋಗಿದ್ದರು. ಸುಮಾರು ತಾಸುಗಳ ತಪಾಸಣೆ ಮಾಡಿ ನಂತ ಸಂಚಾರಿ ಪೊಲೀಸ್ ಪೇದೆ ವಸಂತ್ ಕುಮಾರ್ ಎಂಬುವವರು ಹುಡುಕಿ ಬ್ಯಾಗ್ ಅನ್ನ ಆಟೊ ಚಾಲಕನ ಮೂಲಕ ಹಿಂತಿರುಗಿಸಿದ್ದಾರೆ ಎಂದು ತಿಳಿದುಬಂದಿದೆ.

# ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆ ಬೇಡಿಕೆಗಳ ಈಡೇರಿಕೆಗೆ ಪ್ರತಿಭಟನೆ




ಮುಳಬಾಗಿಲು: ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಮಸ್ಯೆಗಳು ಮತ್ತು ಬೇಡಿಕೆಗಳ ಈಡೇರಿಕೆಗಾಗಿ ನಗರದ ತಹಶೀಲ್ದಾರ್ ಕಚೇರಿ ಮುಂದೆ ಪ್ರತಿಭಟನೆ ನಡೆಸಿ ತಹಸೀಲ್ದಾರ್ ಗೀತಾ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ತಾಲ್ಲೂಕು ಅಧ್ಯಕ್ಷ ಗಿರೀಶ್ ಗೌಡ ಮಾತನಾಡಿ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸುಸಜ್ಜಿತವಾದ ಕಚೇರಿ, ಸಾಮಗ್ರಿಗಳು, ಡಿಜಿಟಲ್, ಮೊಬೈಲ್ ಫೋನ್ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕೆಂದು ಸರ್ಕಾರಕ್ಕೆ ಮನವಿ ಮಾಡಿದರು.

ಅಲ್ಲದೆ ನೌಕರರ ಕೌಟುಂಬಿಕ ಸಮಸ್ಯೆಗಳಾದ ಸಣ್ಣ ಮಕ್ಕಳ ಪಾಲನೆ, ವಿದ್ಯಾಭ್ಯಾಸ, ವಯಸ್ಸಾದ ತಂದೆ ತಾಯಿಗಳ ಪೋಷಣೆ, ಗರ್ಭಿಣಿಯರು ಬಾಣಂತಿಯರ ವೈಯಕ್ತಿಕ ಸಮಸ್ಯೆಗಳು ಹಾಗೂ ಅಂಗವಿಕಲರ ನೌಕರರಿಗೆ ಜೀವನ ನಡೆಸುವುದು ಕಷ್ಟಕರವಾಗಿದೆ ಮತ್ತು ದೂರದ ಊರುಗಳಿಗೆ ನಿರಂತರ ಪ್ರಯಾಣ ಮಾಡುವುದರಿಂದ ಕೆಲಸದಲ್ಲಿ ಆಸಕ್ತಿ ಇಲ್ಲದಂತಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕೆಸಿಎಸ್‌ಆರ್ ನಿಯಮ 16 ಎ ಅನ್ನು ಮರುಸ್ಥಾಪಿಸಿರುವುದರಿಂದ ನಮ್ಮೆಲ್ಲ ನೌಕರರ ಸಮಸ್ಯೆಗಳಿಗೆ ಪರಿಹಾರ ನೀಡಿದಂತಾಗುತ್ತದೆ ಅಲ್ಲದೆ ಇದರಿಂದ ಸರ್ಕಾರಕ್ಕೆ ಯಾವುದೇ ಆರ್ಥಿಕ ನಷ್ಟ ಉಂಟಾಗುವುದಿಲ್ಲ ಮತ್ತು ಸಾರ್ವಜನಿಕ ಹಾಗೂ ಸೇವಾವಲಯದಲ್ಲಿ ಯಾವುದೇ ರೀತಿಯ ದುಷ್ಪರಿಣಾಮ ಉಂಟಾಗುವುದಿಲ್ಲ ಕೂಡಲೆ ಸರ್ಕಾರ ನಮ್ಮ ಸಮಸ್ಯೆಗಳನ್ನು ಬಗೆಹರಿಸಬೇಕೆಂದು ರಾಜ್ಯದ್ಯಂತ ಹೋರಾಟ ಮಾಡಲಾಗುತ್ತಿದ್ದು ನಾವು ಸಹ ಆ ಹೋರಾಟಕ್ಕೆ ಬೆಂಬಲ ನೀಡುತ್ತಿರುವುದಾಗಿ ತಿಳಿಸಿದರು. ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ತಾಲ್ಲೂಕು ಉಪಾಧ್ಯಕ್ಷೆ ಸ್ವಪ್ನ , ಕಾರ್ಯದರ್ಶಿ ದೇವರಾಜ್, ಸರ್ಕಾರಿ ನೌಕರ ಸಂಘದ ಅಧ್ಯಕ್ಷ ಅರವಿಂದ್, ಗೌರವಾಧ್ಯಕ್ಷ ಕೆ ಎನ್ ರವೀಂದ್ರ, ಖಜಾಂಚಿ ಮುನಿವೆಂಕಟಪ್ಪ ಸೇರಿದಂತೆ ಗ್ರಾಮ ಆಡಳಿತ ಅಧಿಕಾರಿಗಳು ಇದ್ದರು.

# ತಾತಯ್ಯನವರ ಗುರುಪಾದುಕಾ ವಿಶೇಷ ಪೂಜೆ



ಚೇಳೂರು: ಶ್ರೀ ಕ್ಷೇತ್ರ ಕೈವಾರದ ಯೋಗಿಗಳು. ತಪಸ್ವಿಗಳು. ಕಾಲಜ್ಞಾನ ಗ್ರಂಥ ಕರ್ತರಾದ ವರಕವಿ ನಾದ ಬ್ರಹ್ಮ ಸದ್ಗುರು ಶ್ರೀ ಯೋಗಿ ನಾರೇಯಣ ತಾತಯ್ಯನವರ ಗುರುಪಾದುಕಾ. ವಿಶೇಷ ಪೂಜೆ ಚೇಳೂರು ತಾ. ಸದ್ಗುರು ಶ್ರೀ ಯೋಗಿ ನಾರೇಯಣ ಸಂಕೀರ್ತನ ಸೇವಾ ಟ್ರಸ್ಟ್ ವತಿಯಿಂದ ತಾಲೂಕಿನ ಪೆದ್ದರಾಜಪಲ್ಲಿ ಕ್ರಾಸ್‌ನಲ್ಲಿರುವ ಧಾರ್ಮಿಕ ಕ್ಷೇತ್ರವಾದ ಚಿಟ್ಟಿಗಾನಪುರ ಶ್ರೀ ಲಕ್ಷ್ಮಿ ವೆಂಕಟರಮಣಸ್ವಾಮಿ ದೇವಾಲಯದ ಆವರಣದಲ್ಲಿ ಸಡಗರ ಸಂಭ್ರಮದಿಂದ ನೆರವೇರಿತು.

ಪೆದ್ದರಾಜಪಲ್ಲಿ ಕ್ರಾಸ್‌ನ ಆಂಜನೇಯಸ್ವಾಮಿ ದೇವಾಲಯದಿಂದ ಕೈವಾರ ತತಯ್ಯನವರ ಪಾದುಕಾಗಳನ್ನು ಹೊತ್ತುಕೊಂಡ ಭಕ್ತರು ನಗರ ಸಂಕೀರ್ತನಾ ಪಾದಯಾತ್ರೆ ಕೈವಾರ ತಾತಯ್ಯ ರಚಿಸಿರುವ ಶ್ರೀರಾಮ ಭವತಾರಕ ಮಂತ್ರದಿಂದ ಧಾರ್ಮಿಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಮಧ್ಯಾಹ್ನ ಹರಿ ಭಜನೆ. ಕೈವಾರ ತಾತಯ್ಯನ ಭಕ್ತಿ ಹಾಡುಗಳು ಧಾರ್ಮಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮದಲ್ಲಿ ಸುಮಂಗಳಿಯರಿಗೆ ಹರಿಶಿನ ಕುಂಕುಮ. ಬಳೇ ಸೇವೆ. ವಸ್ತ್ರ?ತಗಳನ್ನು ನೀಡಿದರು.

ಕಾರ್ಯಕ್ರಮದಲ್ಲಿ ಕೈವಾರ ಕ್ಷೇತ್ರದ ಪ್ರವಚನಕಾರ ತಳಗವಾರ ಟಿ.ಎಲ್. ಆನಂದ್. ಮಾತನಾಡಿ ಗ್ರಾಮೀಣಾ ಪ್ರದೇಶಗಳಲ್ಲಿ ಜನರು ಶಾಂತಿ ಮತ್ತು ನೆಮ್ಮದಿಯ ಜೀವನ ನಡೆಸಲು ದೇವಾಲಯಗಳ ಪಾತ್ರ ಹೆಚ್ಚು ಇದ್ದು ಶಾಂತಿ ನೆಮ್ಮದಿಯ ತಾಣವೆಂದರೆ ಅದು ದೇವಾಲಯಗಳಾಗಿವೆ ಮಾನವರಿಗೆ ಎಷ್ಟೇ ಹಣ. ಆಸ್ತಿ. ವಡವೆಗಳಿದ್ದರೂ ನೆಮ್ಮದಿ ಮುಖ್ಯವಾಗಿದೆ ನೆಮ್ಮದಿ ಇಲ್ಲದ ಜೀವನ ವ್ಯರ್ಥ ಜೀವನದಲ್ಲಿ ಕಷ್ಟಗಳು ಬಂದಾಗ ದೇವರಿಗೆ ಮೊರೆ ಹೋಗುವುದು ಪ್ರಾಚೀನ ಕಾಲದಿಂದಲೂ ರೂಡಿಯಲ್ಲಿದೆ ಅತಂಹ ಧನಾತ್ಮಕ ಶಕ್ತಿ ಇರುವುದು ದೇವಾಲಯಗಳಲ್ಲಿ ಪವಿತ್ರ ಜಾಗದಲ್ಲಿ ದೇವರುಗಳನ್ನ ಪ್ರತಿಷ್ಠಾಪನೆ ಮಾಡಬೇಕು.



ದೇವರು ಸುಖ ಶಾಂತಿ ಮತ್ತು ನೆಮ್ಮದಿಯ ಬದುಕು ಪ್ರತಿಯೊಬ್ಬರಿಗೂ ಕರುಣಿಸಲಿ ಮುಂಗಾರು ಬೆಳೆಗಳು ಉತ್ತಮವಾಗಲಿ ಮಳೆ ಬರಲಿ ಜನ– ಜಾನುವಾರುಗಳಿಗೆ ಆರೋಗ್ಯ ನೀಡಲಿ ಎಂದರು.

ಭಕ್ತರುಗಳು ಕ್ರಾಸ್‌ನಿಂದ ಒಂದು ಕೀಮೀ ದೂರದ ದೇವಾಲಯ ತನಕ ದೇವರ ಹಾಡುಗಳು ಹಾಡುತ್ತಾ ಭಕ್ತಿ ಭಾವದಿಂದ ಹಿರಿಯ ನಾಗರೀಕರು ಕುಣಿಯುತ್ತ ಬಂದಿದ್ದು ಎಲ್ಲರಿಗೂ ಅಚ್ಚು ಮೆಚ್ಚಾಗಿತ್ತು ಒಟ್ಟಾರೆ ಇತಂಹ ಧಾರ್ಮಿಕ ಕಾರ್ಯಕ್ರಮ ಎಂದೂ ನಡೆದಿಲ್ಲ ಇದೇ ಮೊದಲಾಗಿತ್ತು ಎನ್ನುತ್ತಾರೆ ಭಕ್ತ ವೃಂದದವರು.

ಧಾರ್ಮಿಕ ಕಾರ್ಯಕ್ರಮದಲ್ಲಿ ಶ್ರೀ ಕ್ಷೇತ್ರ ಕೈವಾರ ಯೋಗಿ ನಾರೇಯಣ ಸೇವಾ ಟ್ರಸ್ಟ್ ಸದಸ್ಯ ಬಾಗೇಪಲ್ಲಿ ನರಸಿಂಹಪ್ಪ. ಜಗದೀಶ್. ಚೇಳೂರು ತಾ ಧಾರ್ಮಿಕರಾದ ಚಿಂತಕರಾದ ಮುದ್ದಲಪಲ್ಲಿ ಎಂ.ಪಿ.ಚಿನ್ನಪರೆಡ್ಡಿ. ಮದ್ದಿರೆಡ್ಡಿ. ಕರ್ರಪಲ್ಲಿ ಬಯ್ಯಪ್ಪಸ್ವಾಮಿ. ದೇವಾಲಯದ ವ್ಯವಸ್ಥಾಪಕ ಚೀಗಟೀಗಲಗುಟ್ಟ ಬೈರೆಡ್ಡಿ. ಮಾಚನಪಲ್ಲಿ ಬಯ್ಯಾರೆಡ್ಡಿ. ಬಾಣಾಲಪಲ್ಲಿ ಬಿ.ಕೆ. ಈಶ್ವರರೆಡ್ಡಿ. ಬಿ.ಕೆ.ಶ್ರೀನಿವಾಸರೆಡ್ಡಿ. ಏನಿಗದಲೆ ಆರ್.ಎಸ್. ಚೌಡರೆಡ್ಡಿ. ರಾಮೋಜಿಪಲ್ಲಿ ಈಶ್ವರಪ್ಪ. ಪೆದ್ದರಾಜಪಲ್ಲಿ ಆಂಜನೇಯಪ್ಪ. ಸೇರಿದಂತೆ ಚೇಳೂರು ತಾಲೂಕಿನ ಭಜನ ಮಂಡಳಿಗಳ ಗ್ರೂಪ್‌ಗಳು ನೂರಾರು ಭಕ್ತರುಗಳು ಭಾಗವಹಿಸಿದ್ದರು.

# ರಾಜೀವ್ ಗೌಡ ಬೆಂಬಲಿತರ ಆಯ್ಕೆ



ಶಿಡ್ಲಘಟ್ಟ: ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರಾದ ರಾಜೀವ್ ಗೌಡ ರವರ ಬೆಂಬಲಿತ ಕರ್ನಾಟಕ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಆಯ್ಕೆಯಾಗಿದ್ದಾರೆ.

ಕರ್ನಾಟಕ ಯುವ ಕಾಂಗ್ರೆಸ್ ಚುನಾವಣೆಯಲ್ಲಿ ಸೈಯದ್ ಜೈದ್ ಚುನಾವಣೆಯಲ್ಲಿ ಜಯಶೀಲರಾಗಿದ್ದು ಅವರನ್ನು ನಗರದ ಕನಕ ನಗರದಲ್ಲಿರುವ ಎಬಿಡಿ ಗ್ರೂಪ್ ಟ್ರಸ್ಟಿನ ಕಚೇರಿಯಲ್ಲಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರಾದ ರಾಜೀವ್ ಗೌಡ ಅವರು 'ಸೈಯದ್ ಜೈದ್' ರವರಿಗೆ ಶಾಲು ಹೊದಿಸಿ ಹಾರ ಹಾಕಿ ಸನ್ಮಾನ ಮಾಡುವ ಮೂಲಕ ಅಭಿನಂದಿಸಿದರು.

# ಅಮಾನತ್ತಾದ ಸಿಬ್ಬಂದಿಗಳಿಗೆ ಅದದೆ ಠಾಣೆಲಿ ಕರ್ತವ್ಯ!

**ಚಾಮರಾಜನಗರ:** ಕರ್ತವ್ಯ ಲೋಪ ..ನಿರ್ಲಕ್ಷ್ಯದ ಬಗ್ಗೆ ಆರೋಪ ಸಾಬೀತಾದರೆ ಅಮಾನತು ಮಾಡಿ ಬೇರೆ ಠಾಣೆಗೆ ನಿಯೋಜಿಸೊದು ಸಹಜ ಆದರೆ ಚಾಮರಾಜನಗರ ಬಹುತೇಕ ಠಾಣೆಗಳಿಗೆ ಅದದೆ ಠಾಣೆ ನಿಯೋಜಿಸುತ್ತಿರುವ ಅಂಶ ಬೆಳಕಿಗೆ ಬಂದಿದೆ.

ಚಾಮರಾಜನಗರ ಪಟ್ಟಣ ಠಾಣೆಯಲ್ಲೆ ಪ್ರತ್ಯೇಕ ಪ್ರಕರಣದಲ್ಲಿ ನಾಲ್ವರು ಇದೂವರೆಗೆ ಅಮಾನತ್ತಾಗಿದ್ದು ಇಬ್ಬರು ಅದೇ ಠಾಣೆಗೆ ವರ್ಗಾವಣೆ ಮಾಡಿಸಿಕೊಂಡಿದ್ದಾರೆ.. ಉಳಿದವರೊಬ್ಬರು ಮಹದೇಶ್ವರ ಬೆಟ್ಟಕ್ಕೆ ವರ್ಗಾವಣೆ ಮಾಡಿದರೆ ಇನ್ನೊಬ್ಬರು ಡಿ ಆರ್ ಗೆ ವರ್ಗಾವಣೆ ಮಾಡಲಾಗಿದೆ. ಅಮಾನತ್ತಾದವರನ್ನ ನಮ್ಮ ಠಾಣೆಗೆ ಉಳಿಸಿಕೊಡಿ ಅಂತ ಆಯಾ ಠಾಣಾ ಇನ್ಸ್ ಪೆಕ್ಟರ್ ಗಳು ವರೀಷ್ಠಾದಿಕಾರಿಗಳ ಕೋರಿಕೆಯ ಫಲವೊ..ಜನಪ್ರತಿನಿದಿಗಳ ಫಲವೊ ಅದೇ ಠಾಣೆಗೆ ನಿಯೋಜಿಸಿತ್ತಿರೊದು ಇದೆ ಮೊದಲು ಎನ್ನಬಹುದು.

ಇತ್ತಿಚೆಗೆ ಗ್ರಾಮಾಂತರ ಠಾಣೆಯಲ್ಲಿ ಅಮಾನತ್ತಾದ ಎಸ್ಬಿ ಪೇದೆ ಮತ್ತದೆ ಠಾಣೆಗೆ ನಿಯೊಜಿಸಿಕೊಳ್ಳು ಪ್ರೇರಿಪಿಸುತ್ತಿದ್ದಾರೂ ಮುಂದಿನ ದಿನಗಳಲ್ಲಿ ಅದೂ ಕೂಡ ಅಲ್ಲೆ ಕರ್ತವ್ಯ ನಿಯೋಜನೆ ಆಗೊ ಸಾದ್ಯತೆ ಕೂಡ ಇದೆ ಎನ್ನಲಾಗಿದೆ. ಒಟ್ಟಾರೆ ಕರ್ತವ್ಯ ದಕ್ಷತೆ ತೋರಬೇಕಾದ ಅದೀಕ್ಷಕರು ಅಮಾನತ್ತಾದವರು ಅದದೆ ಠಾಣೆಗೆ ನಿಯೋಜಿಸಿದರೆ ಮೇಲಾದಿಕಾರಿಗಳದ್ದೆ ಕರ್ತವ್ಯ ಲೋಪ ಎಂಬಂತೆ ಬಾಸವಾಗುವುದಿಲ್ಲವೆ ಎಂದು ಅದಿಕಾರಿಗಳ ವಲಯದಲ್ಲೆ ಚರ್ಚೆಗೆ ಗ್ರಾಸವಾಗುತ್ತಿದೆ. ರಾಜ್ಯದ ಪೊಲೀಸ್ ಮಹಾನಿರ್ದೇಶಕರು ಏನಾದರೂ ಅಮಾನತ್ತಾದವರು ಅದದೆ ಠಾಣೆಯಲ್ಲಿ ಕರ್ತವ್ಯ ಮುಂದುವರೆಸಲು ಆದೇಶ ಮಾಡಿದ್ದಾರಾ ಎಂಬುದನ್ನ ಅವರೆ ಸ್ಪಷ್ಟಪಡಿಸಬೇಕಾಗಿದೆ

# ರಾಶ್ಚೇರುವು ಉದ್ವಿಗ್ನ ಪರಸ್ಥಿತಿ ಮೊಕ್ಕಾಂ ಹೂಡಿದ ಪೋಲೀಸರು

**ಚೇಳೂರು:** ಕುಲಕ್ಷ ಕಾರಣಕ್ಕೆ ಯುವಕನೊಬ್ಬ ವಯೋವೃದ್ದನನ್ನು ಕೊಲೆ ಮಾಡಿ ಪರಾರಿಯಾಗಿ ಗ್ರಾಮ ಉದ್ವಿಗ್ನ ಪರಸ್ಥಿತಿ ಏರ್ಪಟ್ಟಿರುವ ಬಗ್ಗೆ ಚೇಳೂರು ಪೋಲೀಸ್ ಠಾಣಾ ವ್ಯಾಪ್ತಿಯ ರಾಶ್ಚೇರವು ಗ್ರಾಮದಲ್ಲಿ ನಡೆದಿದೆ.

ಕೊಲೆಯಾದ ವ್ಯಕ್ತಿ ಮಾಬುಸಾಬ್ (75) ಕೊಲೆ ಮಾಡಿ ಪರಾರಿಯಾದವನು ಜಿ.ಆರ್. ವೆಂಕಟೇಶ್(35) ಗ್ರಾಮದ ಮಾಬುಸಾಬ್ ಮತ್ತು ಕನುಮುಕಲ ವೆಂಕಟರವಣಪ್ಪ ಎಂಬುವರಿಗೆ ಜಂಟಿ ಜಮೀನಿದ್ದು ರಾಶ್ಚೇರುವು ಗ್ರಾಮ ಪಂಚಾಯಿತಿಯಿಂದ ಮ–ನೇರೇಗಾ ಯೋಜನೆಯಡಿಯಲ್ಲಿ ಜಮೀನುಗಳ ನಡುವೆ ಹಳ್ಳಗಳ ಕಲ್ಲುನಿಂದ ರೀವೀಟ್‌ಮೆಂಟ್ ಕಟ್ಟಲು ಕಾಮಗಾರಿ ಮಾಡಲು ನಿನ್ನೆ ಭಾನುವಾರ ಸದರಿ ಜಮೀನುನಲ್ಲಿ ನಾಮ ಫಲಕ ಹಾಕಲಾಗಿತ್ತು ನಮ್ಮ ಜಮೀನುನಲ್ಲಿ ಹೇಳದೇ ಕೇಳದೇ ಹಾಕಿರುವುದು ಸರಿ ಅಲ್ಲವೆಂದು ಮಾಬುಸಾಬ್ ಮಗ ಸುಭಾಹಾನ್ ನಾಮ ಫಲಕ ತಳ್ಳಿ ಹಾಕಿದ್ದಾನೆ ಇದರಿಂದ ಆಕ್ರೋಶಗೊಂಡ ಜಿ.ಆರ್.ವೆಂಕಟೇಶ್ ಗಲಾಟೆ ಮಾಡಲು ಹೋಗಿ ನಿನ್ನೆಯ ಸಂಜೆ ಆಟೋ ಚಾಲನೆ ಮಾಡಿಕೊಂಡು ಹೋಗುತ್ತಿದ್ದ ಸುಭಾಹಾನ್‌ಗೆ ಸೇರಿದ ಆಟೋ ದ್ವಂಸ ಮಾಡಿದ್ದಾನೆ.

**ನೇರೇಗಾ ನಾಮ ಫಲಕ ಹಾಕಿದ್ದರಿಂದ ವೃದ್ದನನ್ನು ಕೊಲೆ ಮಾಡಿದ ಯುವಕ**

ಸ್ವಲ್ಪ ಸಮಯದ ನಂತರ ಚಿಂತಾಮಣಿಗೆ ಹೋಗಿ ಬಂದ ತಂದೆ ಮಾಬುಸಾಬ್ ಮನೆ ಮುಂದೆ ನಿಂತಿದ್ದಾಗ ಆತನ ಮೇಲೆ ಸದರಿ ವೆಂಕಟೇಶ್ ಹಲ್ಲೇ ನಡೆಸಿ ಇಟ್ಟಿಗೆಯಿಂದ ಹಣೆಗೆ ಹಾಕಿದ ಕೂಡಲೆ ತೀವ್ರ ರಕ್ತಸ್ರಾವವಾಗಿ ತಲೆ ಸಿಮೆಂಟ್‌ಗೆ ಬಿದ್ದು ಸ್ಥಳದಲ್ಲೇ ಮೃತಪಟ್ಟಿರುತ್ತಾನೆ,

ಕೊಲೆಗೆ ಕುಮ್ಮಕ್ಕು ನೀಡಿದ ಗ್ರಾಮದ ರಶೀದ್. ಮಾಬಾಷ. ಎಂಬುವರನ್ನು ಪೋಲೀಸರು ವಶಕ್ಕೆ ತೆಗೆದುಕೊಂಡಿದ್ದು ಕೊಲೆ ಆರೋಪಿ ಪರಾರಿಯಾಗಿದ್ದಾನೆ.

ಚೇಳೂರು ಪೋಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ಆರೋಪಿಯ ಪತ್ತೆಗೆ ಬಲೆ ಬೀಸಿದ್ದಾರೆ.

ಘಟನಾ ಸ್ಥಳಕ್ಕೆ ಸೋಮವಾರ ಸಂಜೆ ಜಿಲ್ಲಾ ಹೆಚ್ಚುವರಿ ರಕ್ಷಣಾಧಿಕಾರಿ ರಾಜಾ ಇಮಾಂಖಾಸಿಂ. ಸರಕಲ್ ಇನ್‌ಸ್ಪೆಕ್ಟರ್‌ರಾದ ಜನಾರ್ದನ. ನಯಾಜ್ ಬೇಗ್ ಭೇಟಿ ನೀಡಿ ಪರಿಶೀಲೀಸಿದರು.

ಗ್ರಾಮದಲ್ಲಿ ಉದ್ವಿಗ್ನ ಪರಸ್ಥಿತಿ ಇದ್ದು ಪಿಎಸ್‌ಐ ಸೇರಿದಂತೆ 20 ಜನ ಪೋಲೀಸರು ಪೋಲೀಸ್ ಮೀಸಲು ಪಡೆ ಮೊಕ್ಕಾಂ ಹೂಡಿದ್ದಾರೆ.

# ಇಸ್ಲಾಂ ಧರ್ಮದಲ್ಲಿ ವಿದ್ಯೆಗೆ ಬಹಳ ಮಹತ್ವ



**ಶಿಡ್ಲಘಟ್ಟ:** ಇಸ್ಲಾಂ ಧರ್ಮದಲ್ಲಿ ವಿದ್ಯೆಗೆ ಬಹಳ ಮಹತ್ವ ನೀಡಲಾಗಿದೆ ವಿಶೇಷವಾಗಿ ನಮ್ಮ ಪ್ರವಾದಿ ಮೊಹಮ್ಮದ್ ಪೈಗಂಬರ್ ಅವರು ವಿದ್ಯೆಯನ್ನು ಪ್ರಾಪ್ತ ಮಾಡಲು ಅಗತ್ಯ ಬಿದ್ದರೆ ಚೀನಾ ದೇಶಕ್ಕೂ ಸಹ ಹೋಗಿ ಎಂದಿದ್ದರು ಆದರೆ ದುರಾದೃಷ್ಟ ನಮ್ಮ ಮಕ್ಕಳು ಶಿಕ್ಷಣದಿಂದ ವಂಚಿತಗೊಳ್ಳುತ್ತಿದ್ದಾರೆ ಎಂದು ನಗರದ ಜಾಮಿಯಾ ಮಸೀದಿಯ ಧರ್ಮಗುರು ಹಜರತ್ ಮುಫಿ ಗುಲಾಮ್ ಕಳವಳ ವ್ಯಕ್ತಪಡಿಸಿದರು.

ನಗರದ ರಹಮತ್ ನಗರದಲ್ಲಿನ ಗೌಸಿಯಾ ಮಸೀದಿಯ ಆಶ್ರಯದಲ್ಲಿ ನಡೆಯುತ್ತಿರುವ ಮದರಸಾದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿ ಮತ್ತು ಬಹುಮಾನ ವಿತರಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಕಳೆದ ಒಂದು ವರ್ಷದಿಂದ ಪ್ರಾರ್ಥನೆ ಸಲ್ಲಿಸುವ ವಿಧಾನ, ಜಾತಿ ಮತ್ತು ಧರ್ಮ ಮರೆತು ಸಂಕಷ್ಟದಲ್ಲಿರುವ ಜನರಿಗೆ ಸಹಾಯ ಮಾಡುವ ಮನೋಭಾವ ಬೆಳೆಸಿಕೊಳ್ಳಲು ಮತ್ತು ಜನ್ಮ ನೀಡಿದ ತಂದೆ ತಾಯಿ ಹಾಗೂ ಗುರು ಹಿರಿಯರಿಗೆ ಗೌರವಿಸುವ ಸಂಸ್ಕಾರವನ್ನು ಮದರಸದಲ್ಲಿ ಕಲಿಸಲಾಗಿತ್ತು. ಅದನ್ನು ವಿದ್ಯಾರ್ಥಿಗಳು ಪೋಷಕರ ಸಮ್ಮುಖದಲ್ಲಿ ತಮ್ಮಲ್ಲಿರುವ ಪ್ರತಿಭೆಯನ್ನು ಪ್ರದರ್ಶನ ಮಾಡಿದರು.

ಶೈಕ್ಷಣಿಕವಾಗಿ ಹಿಂದುಳಿದ ಮುಸ್ಲಿಂ ಸಮುದಾಯದ ಮಕ್ಕಳು ಉತ್ತಮ ವಿದ್ಯಾಭ್ಯಾಸ ಮಾಡಿ ವಿದ್ಯಾವಂತರಾಗಿ ಸಮಾಜದಲ್ಲಿ ಉನ್ನತ ಸ್ಥಾನವನ್ನು ಅಲಂಕರಿಸಿ ಸಮಾಜ ಮತ್ತು ದೇಶ ಸೇವೆ ಮಾಡಬೇಕೆಂದು ಎಂದರು.

ಇದೇ ವೇಳೆ ಗೌಸಿಯ ಮಸೀದಿಯ ಧರ್ಮಗುರು ಹಜರತ್ ಮೌಲಾನಾ ಅಫಜಲ್ ಇಮಾಮ್ ಅವರು ವಿದ್ಯಾರ್ಥಿಗಳಿಗೆ ಅತ್ಯುತ್ತಮವಾಗಿ ಧಾರ್ಮಿಕ ಶಿಕ್ಷಣವನ್ನು ನೀಡಿದರು ಅದನ್ನು ವಿದ್ಯಾರ್ಥಿಗಳು ವಿಶೇಷವಾಗಿ ಪುಟಾಣಿಗಳು ಪ್ರಶ್ನೆ ಮತ್ತು ಉತ್ತರದ ಮೂಲಕ ವಿವರಿಸಿದರು,ವಿದ್ಯಾರ್ಥಿಗಳಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಗೌಸಿಯಾ ಮಸೀದಿಯ ಅಧ್ಯಕ್ಷ ಅನ್ವರ್ ಸಾಬ್, ಉಪಾಧ್ಯಕ್ಷ ಸರ್ದಾರ್, ಕಾರ್ಯದರ್ಶಿ ಇಂತಿಯಾಸ್, ಖಜಾಂಚಿ ಅಲಿಮುಲ್ಲಾ, ನಗರಸಭಾ ಸದಸ್ಯ ತಸ್ವೀರ್ ಪಾಷಾ, ನಗರಸಭೆಯ ಮಾಜಿ ಅಧ್ಯಕ್ಷ ರಹಮತ್ ಉಲ್ಲಾ, ಮಸೀದಿಯ ಮುಖ್ಯಸ್ಥರಾದ ಕೆ.ಪಿ.ಖಲೀಲ್ ಸಾಬ್,ಬಾಬಾಜಾನ್, ಅಮ್ಜದ್, ಖಲೀಲ್ ಸಾಬ್, ಯುವ ಜನ ಸಮಿತಿಯ ಜಮೀರ್ ಶೇಖ್, ನೂರುಲ್ಲಾ, ಇಮ್ರಾನ್ ಖಾನ್, ಸಮಿವುಲ್ಲಾ ಮತ್ತಿತರರು ಹಾಜರಿದ್ದರು.

# ಎಫ್ ಎಲ್ ಎನ್ ಆಧಾರಿತ ಕಲಿಕೆಯಲ್ಲಿ ಸುಧಾರಣೆ ವಿದ್ಯಾರ್ಥಿಗಳಲ್ಲಿ ಕಲಿಕಾ ಸಾಮರ್ಥ್ಯ ವೃದ್ಧಿ



**ದೇವನಹಳ್ಳಿ:** ಕೋವಿಡ್ ನಂತರದಲ್ಲಿ ಮಕ್ಕಳಲ್ಲಿ ಕಲಿಕಾ ಸಾಮರ್ಥ್ಯವು ಕಡಿಮೆಯಾಗಿದ್ದ ಕಾರಣ, ಅವರಲ್ಲಿ ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಇಲಾಖೆಯ ಮಾರ್ದರ್ಶನ ದಲ್ಲಿ ಹಮ್ಮಿಕೊಂಡಿದ್ದ ಹಲವಾರು ಕಾರ್ಯಕ್ರಮ ಗಳಡಿ ಕಲಿತಿರುವ ವಿದ್ಯೆಯನ್ನು ಪ್ರತಿಬಿಂಬಿಸುವ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ ಎಂದುಕ್ಷೇತ್ರ ಸಂಪನ್ಮೂಲ ವ್ಯಕ್ತಿ ದಿನೇಶ್‌ಕುಮಾರ್ ಹೇಳಿದರು.

ಪಟ್ಟಣದ ಸರಕಾರಿ ಮಾದರಿ ಬಾಲಕಿಯರ ಹಿರಿಯ ಪ್ರಾಥಮಿಕ ಶಾಲೆಯಲ್ಲಿಆಯೋಜನೆ ಮಾಡಲಾಗಿದ್ದ ವಿಜಯಪುರಕ್ಲಸ್ಟರ್ ಮಟ್ಟದ ಎಫ್.ಎಲ್.ಎನ್. ಆಧಾರಿತ ಕಲಿಕಾ ಹಬ್ಬ ಕಾರ್ಯಕ್ರಮದಲ್ಲಿಅವರು ಮಾತನಾಡಿದರು.

ಪಠ್ಯಪುಸ್ತಕದಲ್ಲಿನ ಪಾಠಗಳಿಗಿಂತ ಮಕ್ಕಳು, ಕಣ್ಣಲ್ಲಿ ನೋಡಿ, ಗ್ರಹಿಸಿಕೊಳ್ಳುವ ಸಾಮರ್ಥ್ಯವನ್ನು ಹೆಚ್ಚು ಹೊಂದಿರುತ್ತಾರೆ.ಈ ನಿಟ್ಟಿನಲ್ಲಿ ಚಟುವಟಿಕೆಗಳ ಆಧಾರದಲ್ಲಿಅವರನ್ನು ಸಜ್ಜುಗೊಳಿಸಲಾಗಿದ್ದು, ಕಲಿಕಾ ಸಾಮರ್ಥ್ಯವು ವೃದ್ಧಿಯಾಗಿದೆಎಂದರು. ಕಲಿಕಾ ಹಬ್ಬದಲ್ಲಿ ಮಕ್ಕಳಿಗೆ ಗಟ್ಟಿಯಾಗಿ ಓದುವುದು, ಬರೆಯುವುದು, ಕಥೆ ಹೇಳುವುದು, ಪೋಷಕರ ಸಹ ಸಂಬಂಧ ದೊಂದಿಗೆ ಕಥೆಕಟ್ಟುವುದು, ರಸಪ್ರಶ್ನೆ, ಜ್ಞಾಪಕ ಪರೀಕ್ಷೆ, ಮೋಜಿನಗಣಿತ, ಸ್ಪರ್ಧೆಗಳನ್ನು ನಡೆಸಲಾಯಿತು. ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರಗಳೊಂದಿಗೆ ಬಹುಮಾನಗಳು ವಿತರಣೆ ಮಾಡಿದರು. ಒಟ್ಟು 120 ಮಂದಿ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕ್ಲಸ್ಟರ್ ಮಟ್ಟದ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಈ ಹಬ್ಬದ ಸಂಭ್ರಮದಲ್ಲಿ ಪಾಲ್ಗೊಂಡಿದ್ದರು.ಶಾಲೆಗಳ ಮುಖ್ಯಶಿಕ್ಷಕರು, ಪೋಷಕರು ಮಕ್ಕಳನ್ನು ಪ್ರೋತ್ಸಾಹಿಸಿದರು.

ಕ್ಷೇತ್ರ ಸಂಪನ್ಮೂಲ ವ್ಯಕ್ತಿಕೃಷ್ಣರಾಮ್, ಮುಖ್ಯಶಿಕ್ಷಕರಾದ ಮನೋಹರ್, ಸುಜಾತಮ್ಮ, ಸುಭಾಷ್ ಬಿ ದಾಸರ್, ನಾರಾಯಣಸ್ವಾಮಿ, ಮುನಿಪಾಪ, ಶ್ರೀರಾಮ್, ನರಸಿಂಹಮೂರ್ತಿ, ಗುಲ್ಜಾರ್ ಫಾತಿಮಾ, ಎಂ.ವಿನೋದ ಸೇರಿದಂತೆ ಶಿಕ್ಷಕರು ಪೋಷಕರು ಹಾಜರಿದ್ದರು.

# ಫೆ.12ರಂದು ಉಚಿತ ಆರೋಗ್ಯ ತಪಾಸಣೆ ಶಿಬಿರ

ದೇವನಹಳಿ: ವಿಜಯಪುರ ಹೋಬಳಿಯ ವೆಂಕಟಗಿರಿಕೋಟೆಗ್ರಾಮ ಪಂಚಾಯಿತಿ ಸಮೀಪದಚನ್ನಕೇಶವಸ್ವಾಮಿ ಸಮುದಾಯ ಭವನದಲ್ಲಿ ಫೆ.12 ರಂದು ಬುಧವಾರ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟ 'ಯವರೆಗೂಉಚಿತಆರೋಗ್ಯತಪಾಸಣಾ ಶಿಬಿರ ಹಾಗೂ ರಕ್ತದಾನ ಶಿಬಿರವನ್ನು ಆಯೋಜನೆ ಮಾಡಲಾಗಿದೆಎಂದುಗ್ರಾಮ ಪಂಚಾಯಿತಿ ಮಾಜಿಅಧ್ಯಕ್ಷ ಹಾಗೂ ಹಾಲಿ ಸದಸ್ಯಆರ್. ಅಮರನಾಥ್ ತಿಳಿಸಿದರು.

ಈ ಕುರಿತು ವೆಂಕಟಗಿರಿಕೋಟೆಗ್ರಾಮ ಪಂಚಾಯಿತಿಕಾರ್ಯಾಲಯದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದಅವರು, ದೇವನಹಳ್ಳಿಯ ಆಕಾಶ್ ಸೂಪರ್ ಸ್ಪೆಷಾಲಿಟಿಆಸ್ಪತ್ರೆ ಹಾಗೂ ವೆಂಕಟಗಿರಿಕೋಟೆಗ್ರಾಮ ಪಂಚಾಯಿತಿ, ಮತ್ತು ನಾಗಾರ್ಜುನಕಾಲೇಜ್‌ಆಫ್ ಮ್ಯಾನೇಜ್ ಮೆಂಟ್ ಸ್ಟಡೀಸ್‌ಇವರ ಸಹಯೋಗದಲ್ಲಿ ಶಿಬಿರವನ್ನು ಆಯೋಜನೆ ಮಾಡಲಾಗುತ್ತಿದೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯಎಲ್ಲಾ ಹಳ್ಳಿಗಳ ಜನರುಇದರ ಸದುಪಯೋಗ ಮಾಡಿಕೊಳ್ಳುವಂತೆ ತಿಳಿಸಿದರು.

ಪಂಚಾಯಿತಿಅಭಿವೃದ್ಧಿಅಧಿಕಾರಿ ಬಸವನಗೌಡ ಪಾಟೀಲ್ ಮಾತನಾಡಿ, ಶಿಬಿರದಲ್ಲಿ ಸ್ತ್ರೀರೋಗಗಳಿಗೆ ಸಂಬಂಧಿಸಿದಂತೆ ಪ್ರಾಮುಖ್ಯತೆ ನೀಡಲಾಗುತ್ತಿದೆ.ಈ ನಿಟ್ಟಿನಲ್ಲಿ ಮಹಿಳಾ ಸ್ವ ಸಹಾಯ ಸಂಘಗಳ ಪ್ರತಿನಿಧಿಗಳು, ಸೇರಿದಂತೆಅಂಗನವಾಡಿಕಾರ್ಯಕರ್ತೆಯರು, ಆಶಾಕಾರ್ಯಕರ್ತೆಯರು, ಸಂಜೀವಿನಿ ಒಕ್ಕೂಟದ ಸದಸ್ಯರುಎಲ್ಲರೂ ಸಕ್ರೀಯವಾಗಬೇಕು.ಶಾಲೆಗಳ ವಿದ್ಯಾರ್ಥಿಗಳಿಗೂ ತಪಾಸಣೆಯಾಗಬೇಕು ಈ ನಿಟ್ಟಿನಲ್ಲಿಅಗತ್ಯ ಸಿದ್ಧತೆಗಳನ್ನು ಮಾಡಲಾಗುತ್ತದೆಎಂದರು.

ಗ್ರಾಮ ಪಂಚಾಯಿತಿಅಧ್ಯಕ್ಷೆ ಬಿ.ಆರ್ ಸರೋಜಮ್ಮ, ಉಪಾಧ್ಯಕ್ಷ ಸಿ ಜಗನ್ನಾಥ್, ಮಾಜಿಅಧ್ಯಕ್ಷರಾದ ಹುರುಳುಗುರ್ಕಿ ಶ್ರೀನಿವಾಸ್, ಆಶಾಮಂಜುನಾಥ್, ಜೋಸೆಫ್, ಮಾಜಿಉಪಾಧ್ಯಕ್ಷ ವಿಶ್ವನಾಥಾಚಾರ್, ಸದಸ್ಯರಾದ ಎಂ.ಮಾರಪ್ಪ, ನಾಗರಾಜ್, ಹಾಗೂ ನಾಗಾರ್ಜುನಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಶೋಭಾ, ಮೀನಾ, ಶಿಕ್ಷಣಇಲಾಖೆಯಕ್ಷೇತ್ರ ಸಂಪನ್ಮೂಲ ವ್ಯಕ್ತಿಜಯಂತಿ ಸೇರಿದಂತೆಗ್ರಾಮ ಪಂಚಾಯಿತಿ ಸದಸ್ಯರುಗಳು ಹಾಜರಿದ್ದರು.



# ಟೆಂಟ್ ಮುಕ್ತ ಕರ್ನಾಟಕ ನಿರ್ಮಾಣ ಮಾಡುವುದು ನಮ್ಮ ಗುರಿ:ಜಿ.ಪಲ್ಲವಿ



**ಚಿಕ್ಕಬಳ್ಳಾಪುರ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಜನಾಂಗದವರ ಎಲ್ಲರಿಗೂ ನಿವೇಶನ ಹಾಗೂ ವಸತಿ ಸೌಲಭ್ಯ ಕಲ್ಪಿಸುವ ಮೂಲಕ ಟೆಂಟ್ ಮುಕ್ತ ಕರ್ನಾಟಕ ನಿರ್ಮಾಣ ಮಾಡುವುದು ನಮ್ಮ ಮೊದಲ ಆದ್ಯತಾ ಗುರಿ ಎಂದು ಕರ್ನಾಟಕ ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪಲ್ಲವಿ ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸೋಮವಾರ ನಡೆದ "ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಲೆಮಾರಿ, ಅರೆಅಲೆಮಾರಿ ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಸಮುದಾಯಗಳ ಅಭಿವೃದ್ಧಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಅಧೀನದ ನಿಗಮಗಳಡಿ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳ ಕುರಿತು ಪ್ರಗತಿ ಪರಿಶೀಲನಾ ಸಭೆಯನ್ನು ನಡೆಸಿ ನಂತರ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ನಿಗಮದ ಅಧ್ಯಕ್ಷೆಯಾಗಿ ಅಧಿಕಾರ ಸ್ವೀಕರಿಸಿದ ಅಂದಿನಿಂದ ವಿವಿಧ ಜಿಲ್ಲೆಗಳ ಪ್ರವಾಸ ಕೈಗೊಂಡು ಅಲೆಮಾರಿ ಸಮುದಾಯದವರು ಎಲ್ಲೆಲ್ಲಿ ವಾಸಿಸುತ್ತಿದ್ದಾರೆ ಅವರ ಸಮಸ್ಯೆಗಳೇನು? ಎಂಬುದನ್ನು ಅವರ ಬಳಿಗೆ ಬಂದು ಆಲಿಸಿ ಪರಿಹರಿಸುವ ಯತ್ನ ಮಾಡುತ್ತಿದ್ದೇನೆ. ಅದೇ ರೀತಿ ಇಂದು ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿರುವ ಪರಿಶಿಷ್ಟ ಜಾತಿಯ 53 ಅಲೆಮಾರಿ ಜನಾಂಗಗಳು ಹಾಗೂ ಪರಿಶಿಷ್ಟ ಪಂಗಡದ 23 ಅಲೆಮಾರಿ ಜನಾಂಗದವರ ಸಮಸ್ಯೆಗಳನ್ನು ಆಲಿಸಿದ್ದೇನೆ. ಶಿಡ್ಲಘಟ್ಟ ತಾಲ್ಲೂಕಿನ ಹೆಚ್. ಕ್ರಾಸ್ ಬಳಿ ವಾಸಿಸುವ ಚನ್ನದಾಸರು ಹಾಗೂ ಹಂದಿಜೋಗಿ ಜನಾಂಗದವರ ಸಮಸ್ಯೆಗಳನ್ನು ಆಲಿಸಿದ್ದೇನೆ. ಬಿದುರಿನ ಸಲಕರಣೆಗಳನ್ನು ತಯಾರು ಮಾಡಿ ಜೀವನ ಸಾಗಿಸುವ ಜನಾಂಗದವರು ಬಿದುರು ಉತ್ಪನ್ನ ಜಿಲ್ಲೆಯಲ್ಲಿ ಪ್ರಸ್ತುತ ಲಭ್ಯವಿಲ್ಲದ ಕಾರಣ ಬಹಳ ತೊಂದರೆಗೆ ಸಿಲುಕಿದ್ದು, ಮಹಾರಾಷ್ಟ್ರದಿಂದ ಬಿದುರನ್ನು ಆಮದು ಮಾಡಿಕೊಂಡು ಬಹಳ ಕಷ್ಟದಿಂದ ವೃತ್ತಿ ಸಾಗಿಸುತ್ತಿದ್ದಾರೆ. ಆ ಸಮುದಾಯವರು ಬಿದುರು ಉತ್ಪನ್ನವು ಜಿಲ್ಲೆಯಲ್ಲಿ ಸುಗಮವಾಗಿ ದೊರಕುವ ವ್ಯವಸ್ಥೆ ಆಗುವ ನಿಟ್ಟಿನಲ್ಲಿ ಪ್ರಸ್ತಾವನೆ ಸಲ್ಲಿಸಿದ್ದಾರೆ. ಕೆಲವೆಡೆ ಅಲೆಮಾರಿ ಜನಾಂಗದವರು ವಾಸಿಸುವಲ್ಲಿ ಅಂಗನವಾಡಿ, ಬಸ್ ನಿಲ್ದಾಣದ ವ್ಯವಸ್ಥೆಗೆ ಬೇಡಿಕೆ ಸಲ್ಲಿಸಿದ್ದಾರೆ. ಗಂಜಿಕುಂಟೆ ಗ್ರಾಮದಲ್ಲಿ ವಾಸಿಸುವ ಹಕ್ಕಿಪಿಕ್ಕಿ ಜನಾಂಗದವರು ತಾವು ಉಳುಮೆ ಮಾಡುತ್ತಿರುವ 414 ಎಕರೆ ಭೂಮಿಯನ್ನು ಹದ್ದುಬಸ್ತು ಮಾಡಿಸಿ ಕೊಡಲು ಕೋರಿದ್ದಾರೆ. ಪೆರೇಸಂದ್ರದ ಬಳಿಯ ದೊಂಬರಪಾಳ್ಯದ ಅಲೆಮಾರಿ ಜನಾಂಗದವರು ಉಳುಮೆ ಮಾಡುತ್ತಿರುವ ಕೃಷಿ ಭೂಮಿಗೆ ದಾಖಲೆಗಳನ್ನು ಕೊಡಿಸಿಕೊಡುವಂತೆ ಮನವಿ ಮಾಡಿದ್ದಾರೆ. ಈ ಎಲ್ಲಾ ಮನವಿ, ಅಹವಾಲುಗಳನ್ನು ಪರಿಹರಿಸುವ ನಿಟ್ಟಿನಲ್ಲಿ ಜಿಲ್ಲಾಡಳಿತವು ಸಹ ಪೂರಕವಾಗಿ ಸ್ಪಂದಿಸಿದೆ. ಸ್ಥಳದಲ್ಲೇ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಪರಿಹಾರ ಕ್ರಮಕ್ಕೆ ಸ್ಥಳೀಯಾಧಿಕಾರಿಗಳಿಗೆ ಆದೇಶಿಸಿದ್ದಾರೆ. ಎಲ್ಲಾ ಸಮಸ್ಯೆಗಳನ್ನು ಒಮ್ಮೆಲೆ ಬಗೆಹರಿಸಲು ಸಾಧ್ಯವಿಲ್ಲ, ಹಂತಹಂತವಾಗಿ ಪರಿಹಾರ ಕ್ರಮ ಕೈಗೊಳ್ಳಲಾಗುವುದು. ಒಟ್ಟಾರೆ ಅಲೆಮಾರಿ ಜನಾಂಗದವರು ನಿವೇಶನ ರಹಿತರಾಗಿ ಇರದಂತೆ ಕ್ರಮವಹಿಸಿ ಪ್ರತಿಯೊಬ್ಬರಿಗೂ ನಿವೇಶನ ದೊರಕಿಸಿಕೊಡುವ ಮಹೋನ್ನತ ಉದ್ದೇಶವನ್ನು ನಿಗಮ ಮಾಡಲಿದೆ ಎಂದು ಭರವಸೆ ನೀಡಿದರು.

ಅಕ್ರಮ ಕರೆಂಟ್ ಬೇಡ, ಸರ್ಕಾರ ಗೃಹಜ್ಯೋತಿ ಯೋಜನೆಯಡಿ ಪ್ರತಿಯೊಬ್ಬರಿಗೂ 200 ಯುನಿಟ್ ಉಚಿತ ವಿದ್ಯುತನ್ನು ನೀಡುತ್ತಿದೆ. ಆದರೆ ಅಲೆಮಾರಿ ಸಮುದಾಯದವರು ವಾಸಿಸುವ ಕೆಲವೆಡೆ ವಿದ್ಯುತ್ ಕಂಬಗಳ ತಂತಿಗಳಿಗೆ ಅಕ್ರಮವಾಗಿ ವೈರ್ ಮೂಲಕ ಸಂಪರ್ಕ ಪಡೆದು ವಿದ್ಯುತ್ ಉಪಯೋಗಿಸುತ್ತಿರುವುದು ಒಳ್ಳೆಯದಲ್ಲ, ಕೆಲವೊಮ್ಮೆ ಪ್ರಾಣ ಅಪಾಯಕ್ಕೆ ಕಾರಣವಾಗಲಿದೆ. ಸಮುದಾಯದವರು ಸಹ ಈ ನಿಟ್ಟಿನಲ್ಲಿ ಜಾಗೃತಿ ಹೊಂದಿ ವಿದ್ಯುತ್ ಸಂಪರ್ಕವನ್ನು ಪಡೆದು ಉಚಿತ ವಿದ್ಯುತ್ ಸೇವೆಯನ್ನು ಉಪಯೋಗಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಲೀಡ್ ಬ್ಯಾಂಕ್ ಮುಖ್ಯಸ್ಥರಿಗೆ ತಾಕೀತು ಸರ್ಕಾರದ ವಿವಿಧ ಯೋಜನೆಗಳಡಿ ಇಲಾಖೆಗಳಿಂದ ಸಾಲ ಸೌಲಭ್ಯ ಮಂಜೂರಾಗಿ ಕೆಲವು ಪ್ರಕರಣಗಳಲ್ಲಿ ವರ್ಷ ಕಳೆದರೂ ಸಹ ಸಾಲ ಸೌಲಭ್ಯ ಫಲಾನುಭವಿಗಳಿಗೆ ಪಾವತಿಸದಿರುವುದು ತಮ್ಮ ದಿವ್ಯ ನಿರ್ಲಕ್ಷ್ಯವಾಗಿದೆ. ಮುಂದಿನ ಒಂದು ವಾರದ ಒಳಗೆ ಫಲಾನುಭವಿಗಳಿಗೆ ಸಾಲ ಪಾವತಿಯಾಗಬೇಕು ಎಂದು ಜಿಲ್ಲಾ ಲೀಡ್ ಬ್ಯಾಂಕ್ ಅಧಿಕಾರಿಗೆ ತಾಕೀತು ಮಾಡಿದರು.

ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಜನಾಂಗದವರನ್ನು ಮುಖ್ಯವಾಹಿನಿಗೆ ತರಲು ಹಲವು ಯೋಜನೆಗಳನ್ನು ಸರ್ಕಾರ ಜಾರಿಗೆ ತಂದಿದೆ ಆದರೆ ಅವುಗಳನ್ನು ಅನುಷ್ಠಾನಗೊಳಿಸುವಲ್ಲಿ ಜಿಲ್ಲಾ ಮಾರ್ಗದರ್ಶಿ ಬ್ಯಾಂಕ್ ಹಾಗೂ ವಿವಿಧ ಬ್ಯಾಂಕ್ ಗಳ ವ್ಯವಸ್ಥಾಪಕರ ಇಚ್ಛಾಶಕ್ತಿಯ ಕೊರತೆಯಿಂದ ಜನರಿಗೆ ತಲುಪುತ್ತಿಲ್ಲ.

ಈ ಧೋರಣೆಯನ್ನು ನಿಗಮವು ಸಹಿಸುವುದಿಲ್ಲ. ಲೀಡ್ ಬ್ಯಾಂಕ್ ನ ಮುಖ್ಯಸ್ಥರು ಸಾಲ ಪಾವತಿಸಲು ವಿಳಂಬವಾಗಿರುವ 14 ಪ್ರಕರಣಗಳ ಪಟ್ಟಿಯನ್ನು ತೆಗೆದುಕೊಂಡು ಸಂಬಂಧಪಟ್ಟ 14 ಬ್ಯಾಂಕುಗಳ ವ್ಯವಸ್ಥಾಪಕರೊಂದಿಗೆ ತುರ್ತು ಸಭೆ ನಡೆಸಬೇಕು. ಈ ಪ್ರಕರಣಗಳಲ್ಲಿ ಫಲಾನುಭವಿಗಳ ಖಾತೆಗೆ ಸಾಲ ಪಾವತಿಸುವ ಮೂಲಕ ಒಂದು ವಾರದ ಮಿತಿಯಲ್ಲಿ ಯೋಜನೆಗಳ ಅನುಷ್ಠಾನ ಆಗಬೇಕು. ಇಲ್ಲವಾದಲ್ಲಿ ತಕ್ಕ ಕ್ರಮ ತೆಗೆದುಕೊಳ್ಳುತ್ತೇನೆ ಎಂದು ಕಿಡಿಕಾರಿದರು.

ಸಮಿತಿಯ ಸದಸ್ಯರಿಗೂ ಕ್ಲಾಸ್ ಜಿಲ್ಲೆಯಲ್ಲಿ 681 ಕುಟುಂಬಗಳು ಇಂದು ಸಹ ನಿವೇಶನ ರಹಿತರಾಗಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡುತ್ತಿದ್ದಾರೆ. "ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಲೆಮಾರಿ ಮತ್ತು ಬುಡಕಟ್ಟು ಸಮುದಾಯ ಯೋಜನೆಗಳ ಜಿಲ್ಲಾ ಮಟ್ಟದ ಅನುಷ್ಠಾನ ಸಮಿತಿ" ಸದಸ್ಯರು ಯಾವ ಕ್ರಮ ತೆಗೆದು ಕೊಂಡಿದ್ದೀರಿ. ಸರ್ಕಾರಿ ಜಮೀನನ್ನು ಗುರ್ತಿಸಿ ನಿವೇಶನ ರಹಿತ ಅಲೆಮಾರಿ ಜನರಿಗೆ ನಿವೇಶನ ನೀಡಬೇಕು. ಸರ್ಕಾರಿ ಜಮೀನು ಸ್ಥಳೀಯವಾಗಿ ಲಭ್ಯವಿಲ್ಲದಿದ್ದಲ್ಲಿ ಖಾಸಗಿ ಜಮೀನನ್ನು ಖರೀದಿಸಿ ಈ ಸಮುದಾಯದವರಿಗೆ ನಿವೇಶನ ಹಂಚಿಕೆ ಮಾಡಬೇಕು ಎಂದು ಸರ್ಕಾರ ಕಾನೂನು ಮಾಡಿದೆ. ಈ ಬಗ್ಗೆ ಯಾವ ಸದಸ್ಯರು ಎಷ್ಟು ಬಾರಿ ಅಧಿಕಾರಿಗಳನ್ನು ಪ್ರಶ್ನೆ ಮಾಡಿದ್ದೀರಿ, ಹೋರಾಟ ಮಾಡಿದ್ದೀರಿ ಇನ್ನಾದರೂ ಅಧಿಕಾರಿಗಳನ್ನು ಸಂಪರ್ಕಿಸಿ ಈ ದಿಸೆಯಲ್ಲಿ ಪರಿಣಾಮಕಾರಿಯಾಗಿ ಹೋರಾಟ ಮಾಡಿ. ಅದು ಬಿಟ್ಟು ಗುರಿ ನಿಗದಿಯನ್ನು ಹೆಚ್ಚಿಸಬೇಕು ಎಂದು ಹೋರಾಟ ಮಾಡುವುದು ಔಚಿತ್ಯವಲ್ಲ ಎಂದು ಸಲಹೆ ನೀಡಿದರು.

ನಿವೇಶನ ರಹಿತ ಅಲೆಮಾರಿ ಜನಾಂಗದವರಿಗೆ ನಿವೇಶನ ಹಂಚಿಕೆಯ ಉದ್ದೇಶಕ್ಕೆ ಜಮೀನನ್ನು ಮೀಸಲಿಡಲು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ತುರ್ತು ಕ್ರಮಕೈಗೊಳ್ಳುತ್ತಿದ್ದಾರೆ. ತಾಲ್ಲೂಕು ಮಟ್ಟದ ಅಧಿಕಾರಿಗಳು ಈ ಉದ್ದೇಶಕ್ಕಾಗಿ ಸ್ಪಷ್ಟವಾಗಿ ನಮೂದಿಸಿ ಜಿಲ್ಲಾಧಿಕಾರಿಗಳಿಗೆ ವರದಿ/ಪ್ರಸ್ತಾವನೆ ಸಲ್ಲಿಸಬೇಕು. ಈ ವೇಳೆ ಜಿಲ್ಲಾಧಿಕಾರಿಗಳು ಪ್ರತಿಕ್ರಿಯಿಸಿ ಅಲೆಮಾರಿ ಜನಾಂಗದವರ ನಿವೇಶನಕ್ಕಾಗಿ ಭೂಮಿಯನ್ನು ಮೀಸಲಿಡುವ ಕಡತಗಳನ್ನು ಅತೀ ತುರ್ತಾಗಿ ವಿಲೇವಾರಿ ಮಾಡಲು ಆದ್ಯತೆ ನೀಡಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ. ನಿಟ್ಟಾಲಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ತೇಜಾನಂದರೆಡ್ಡಿ, ಸಹಾಯಕ ನಿರ್ದೇಶಕ ಶೇಷಾದ್ರಿ ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ದೇಶೀಯ ಕ್ರೀಡೆಗಳ ಕಡೆಗೂ ಗಮನಹರಿಸಿ: ವಿ.ಶಾಂತಕುಮಾರ್



**ದೇವನಹಳ್ಳಿ:**ವಿಜಯಪುರ ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜುಆಟದ ಮೈದಾನದಲ್ಲಿ ನಡೆದ ಸುವರ್ಣ ಕರ್ನಾಟಕ ಕ್ರಿಕೆಟ್ 2025 ರಟೂರ್ನಿಯಲ್ಲಿಚಾಲುಕ್ಯ ತಂಡದವರು ಪ್ರಥಮ ಬಹುಮಾನ, ಸುಲ್ತಾನ್‌ತಂಡದವರು ದ್ವಿತೀಯ ಬಹುಮಾನ ಪಡೆದುಕೊಂಡರು.

ಟೂರ್ನಿಯಲ್ಲಿಒಟ್ಟು 8 ತಂಡಗಳು ಭಾಗವಹಿಸಿದ್ದವು. ಅಂತಿಮವಾಗಿ ಫೈನಲ್ ಪಂದ್ಯದಲ್ಲಿ ಟೌನ್ ಕಾಂಗ್ರೆಸ್ ಅಧ್ಯಕ್ಷ ವಿ.ಎಂ.ನಾಗರಾಜ್ ಒಡೆತನದ ಚಾಲುಕ್ಯತಂಡ ಮತ್ತು ಮಾಜಿ ಪುರಸಭೆ ಸದಸ್ಯ ಎಜಾಜ್ ಅಹಮದ್ ಒಡೆತನದ ಸುಲ್ತಾನ್‌ತಂಡದವರುಆಡಿದರು.

ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರಾಧಿಕಾರದಅಧ್ಯಕ್ಷ ವಿ.ಶಾಂತಕುಮಾರ್‌ಅವರು ವಿಜೇತರಾದ ತಂಡಗಳಿಗೆ ಟ್ರೋಫಿಗಳನ್ನು ವಿತರಣೆ ಮಾಡಿದರು.ಈ ವೇಳೆ ಮಾತನಾಡಿದಅವರು, ಗ್ರಾಮೀಣ ಭಾಗದಲ್ಲಿನಯುವಕರುಒಗ್ಗಟ್ಟು ಕಾಪಾಡಿಕೊಳ್ಳಲು ಕ್ರಿಕೆಟ್ ನಂತಹ ಕ್ರೀಡಾಕೂಟಗಳು ಸಹಕಾರಿಯಾಗುತ್ತದೆ. ಇದರಜೊತೆಗೆ ದೇಶಿಯ ಕ್ರೀಡೆಗಳ ಕಡೆಗೂ ಗಮನಹರಿಸಿ, ಕಬ್ಬಡ್ಡಿ, ಖೊ-ಖೋ, ವಾಲಿಬಾಲ್, ಮುಂತಾದ ಕ್ರೀಡೆಗಳನ್ನು ಆಡುವ ಮೂಲಕ ದೈಹಿಕವಾಗಿ ಸದೃಢರಾಗಬೇಕುಎಂದರು.

ಕೆಪಿಸಿಸಿ ಕಾರ್ಯದರ್ಶಿ ವಿ.ಮಂಜುನಾಥ್ ಮಾತನಾಡಿ, ಐಪಿಎಲ್ ಮಾದರಿಯಲ್ಲಿಆಟಗಾರರನ್ನುಅಣಕು ಹರಾಜು ಮಾಡುವ ಮೂಲಕ ಕ್ರಿಕೆಟ್ ಪಂದ್ಯಾವಳಿಯನ್ನು ಆಯೋಜನೆ ಮಾಡಿರುವುದು ವಿಶಿಷ್ಟವಾಗಿದ್ದು, ಯುವಕರು ದುಶ್ಚಟಗಳಿಂದ ಮುಕ್ತರಾಗಲು ಕ್ರೀಡೆಗಳು ಸಹಕಾರಿಯಾಗುತ್ತವೆ. ಪರಸ್ಪರ ಹೊಂದಾಣಿಕೆಯಿಂದಆಟವಾಡಿದರೆಉತ್ತಮ ಫಲಿತಾಂಶವನ್ನುಎಲ್ಲಾಆಟಗಾರರುಕ್ರೀಡಾಸೂರ್ತಿಯಿಂದ ಸ್ವೀಕಾರ ಮಾಡಬೇಕುಎಂದರು.

ಬಯಾಪ ನಿರ್ದೇಶಕ ಪ್ರಸನ್ನಕುಮಾರ್ ಮಾತನಾಡಿ, ನಮ್ಮ ಬಾಲ್ಯದ ನೆನಪುಗಳನ್ನು ಉಳಿಸುವಂತಹ ಶಕ್ತಿ ಕ್ರೀಡೆಗಳಿಗೆ ಇದೆ. ನಾವು ಹುಡುಗರಾಗಿದ್ದಾಗಆಟವಾಡಿದ್ದನು ನೆನಪಿಸುತ್ತಿದೆ.ಮುಂದಿನ ಪೀಳಿಗೆಯನ್ನೂ ಎಲ್ಲಾ ಕ್ರೀಡೆಗಳಲ್ಲಿ ತೊಡಗಿಸಿಕೊಳ್ಳುವಂತೆ ಪ್ರೋತ್ಸಾಹ ಮಾಡಬೇಕಾದಂತಹಅವಶ್ಯಕತೆ ಇದೆಎಂದರು.

ಜಿಲ್ಲಾಕಾಂಗ್ರೆಸ್‌ಉಪಾಧ್ಯಕ್ಷ ವಲಿಜಾನ್, ಬಯಪಾ ನಿರ್ದೇಶಕ ವಿ.ರಾಮಚಂದ್ರಪ್ಪ, ಟೌನ್‌ಕಾಂಗ್ರೆಸ್‌ಅಧ್ಯಕ್ಷರಾದ ವಿಎಂ ನಾಗರಾಜ್, ಪುರಸಭೆ ಸದಸ್ಯರಾದಎಂ. ರಾಜಣ್ಣ, ಎಂ.ನಾರಾಯಣಸ್ವಾಮಿ, ಸೈಯದ್‌ಎಕ್ಬಾಲ್, ಮಾಜಿ ಪುರಸಭೆ ಸದಸ್ಯರಾದ ಜೆ.ಎನ್.ಶ್ರೀನಿವಾಸ್, ಎಜಾಜ್‌ಅಹಮದ್, ಮುಖಂಡರಾದ ಬಿಸ್ಲೀಪ್ ಮಧು, ಹರೀಶ್, ಜಿಲ್ಲಾಜಾಗೃತಿ ಸಮಿತಿ ಸದಸ್ಯ ಎಂ.ವೇಣುಗೋಪಾಲ್, ಜಗದೀಶ್, ಅಕ್ರಂಪಾಷ, ಎ.ಆರ್. ಆಜಂಪಾಷ, ಆರ್.ಪ್ರದೀಪ್‌ಕುಮಾರ್, ಮುಂತಾದವರು ಹಾಜರಿದ್ದರು.

## ಪ್ಯಾರಿಸ್‌ನಲ್ಲಿ ಮೋದಿ: ಫ್ರೆಂಚ್ ಅಧ್ಯಕ್ಷ ಭೇಟಿ ಮಾತುಕತೆ



**ಫ್ರಾನ್ಸ್:** ಪ್ರಧಾನಿ ಮೋದಿ ಅವರು ಫ್ರಾನ್ಸ್‌ಗೆ ಮೂರು ದಿನಗಳ ಭೇಟಿ ನೀಡಿದ್ದಾರೆ. ಇಲ್ಲಿ ನಡೆಯುತ್ತಿರುವ ಎಐ ಶೃಂಗಸಭೆಯ ಸಹ -ಅಧ್ಯಕ್ಷತೆ ವಹಿಸುವ ಮೊದಲು ನಡೆದ ಭೋಜನಕೂಟದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಭರ್ಜರಿ ಸ್ವಾಗತ ಕೋರಿದರು.

ನನ್ನ ಸ್ನೇಹಿತ, ಅಧ್ಯಕ್ಷ ಮ್ಯಾಕ್ರನ್ ರನ್ನು ಭೇಟಿಯಾಗಲು ಸಂತೋಷವಾಗಿದೆ ತಮ್ಮ ಎಕ್ಸ್ ಪೋಸ್ಟ್ ನಲ್ಲಿ ಪ್ರಧಾನಿ ಮೋದಿ ಹೇಳಿದ್ದಾರೆ. ಪ್ರಧಾನಿ ಭೇಟಿ ಹಿನ್ನೆಲೆಯಲ್ಲಿ ಫ್ರೆಂಚ? ಅಧ್ಯಕ್ಷರು ಔತಣಕೂಟ ಏರ್ಪಡಿಸಿದ್ದರು. ಂಖ ಶೃಂಗಸಭೆಯಲ್ಲಿ ಪಾಲ್ಗೊಳ್ಳಲು ಫ್ರಾನ್ಸ್‌ನಲ್ಲಿರುವ ಗಖ ಉಪಾಧ್ಯಕ್ಷ ಜೆ.ಡಿ.ವಾನ್ಸ್ ಅವರನ್ನು ಪ್ರಧಾನಿ ಮೋದಿ ಇದೇ ವೇಳೆ ಭೇಟಿಯಾದರು.

ಈ ಬಗ್ಗೆ ಪ್ರಧಾನಿ ಕಾರ್ಯಾಲಯ ಎಕ್ಸ್ ಪೋಸ್ಟ್ ಮಾಡಿದೆ. ಪ್ರಧಾನಿ ಮೋದಿ ಅವರು, ಅಧ್ಯಕ್ಷ ಎಮ್ಯಾನುವೆಲ್ ಮ್ಯಾಕ್ರನ್ ಹಾಗೂ ಅಮೆರಿಕ ಉಪಾಧ್ಯಕ್ಷ ಜೆ ಡಿ ವ್ಯಾನ್ ಅವರೊಂದಿಗೆ ಸಂವಾದ ನಡೆಸಿದರು ಎಂದು ಮಾಹಿತಿ ನೀಡಿದೆ. ಪ್ರಧಾನಿ ಮೋದಿ ಫ್ರಾನ್ಸ್ ಪ್ರವಾಸದ ಹಿನ್ನೆಲೆಯಲ್ಲಿ ಸೋಮವಾರ ಪ್ಯಾರಿಸ್‌ಗೆ ಭೇಟಿ ನೀಡಿದ್ದಾರೆ. ಈ ಭೇಟಿ ಬಳಿಕ ಮೋದಿ ಅಮೆರಿಕ ಪ್ರವಾಸ ಕೈಗೊಳ್ಳಲಿದ್ದಾರೆ.

ಫ್ರಾನ್ಸ್‌ಗೆ ಮೂರು ದಿನಗಳ ಭೇಟಿಯ ಸಂದರ್ಭದಲ್ಲಿ ಪ್ರಧಾನಿ ಮೋದಿ ಪ್ಯಾರಿಸ್‌ನಲ್ಲಿ ಮ್ಯಾಕ್ರನ್ ಅವರೊಂದಿಗೆ ಎಐ ಆಕ್ಷನ್ ಶೃಂಗಸಭೆಯ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ, ಈ ವೇಳೆ ಅವರು ಅವರೊಂದಿಗೆ ದ್ವಿಪಕ್ಷೀಯ ಮಾತುಕತೆಗಳನ್ನು ನಡೆಸಲಿದ್ದಾರೆ. ಅಲ್ಲಿನ ವ್ಯಾಪಾರೋದ್ಯಮಿಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.

ಭವ್ಯ ಸ್ವಾಗತ: ಪ್ಯಾರಿಸ್‌ನಲ್ಲಿ ಸ್ಮರಣೀಯ ಸ್ವಾಗತ ಸಿಕ್ಕಿದೆ. ಮೈ ಕೊರೆಯುವ ಚಳಿಯಲ್ಲೂ ತಮ್ಮ ಸ್ವಾಗತಕ್ಕಾಗಿ ಬಂದ ಭಾರತೀಯ ಸಮುದಾಯವನ್ನು ಪ್ರಧಾನಿ ಹೊಗಳಿದರು. ನನ್ನ ಭಾರತೀಯ ಸಮುದಾಯಕ್ಕಾಗಿ ನಾನು ಕೃತಜ್ಞನಾಗಿರುತ್ತೇನೆ ಮತ್ತು ಅವರ ಸಾಧನೆಗಳಿಗಾಗಿ ಹೆಮ್ಮೆಪಡುತ್ತೇನೆ ಎಂದು ಗುಣಗಾನ ಮಾಡಿದರು.

ನನ್ನ ಸ್ನೇಹಿತ ಅಧ್ಯಕ್ಷ ಮ್ಯಾಕ್ರನ್ ಜೊತೆಗೆ ಭಾರತ-ಫ್ರಾನ್ಸ್ ಬಾಂಧವ್ಯ ವೃದ್ಧಿ, ವಿವಿಧ ಪಾಲುದಾರಿಕೆಗಾಗಿ 2047 ರ ಹಾರಿಜಾನ್ ಮಾರ್ಗಸೂಚಿಯಲ್ಲಿನ ಪ್ರಗತಿಯನ್ನು ಪರಿಶೀಲಿಸಲು ಭೇಟಿಯಿಂದ ದ್ವಿಪಕ್ಷೀಯ ವಿಭಾಗಕ್ಕೆ ಅವಕಾಶವನ್ನು ಒದಗಿಸುತ್ತದೆ ಎಂದು ಪ್ರಧಾನಿ ತಮ್ಮ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಬುಧವಾರ, ಉಭಯ ನಾಯಕರು ಮಾರ್ಸಿಲ್ಲೆಯಲ್ಲಿ ಕಾಮನ್‌ವೆಲ್ತ್ ವಾರ್ ಗ್ರೇವ್ಸ್ ಕಮಿಷನ್ ನಿರ್ವಹಿಸುತ್ತಿರುವ ಮಜಾರ್ಗ್ಯೂಸ್ ಯುದ್ಧ ಸ್ಮಶಾನಕ್ಕೆ ಭೇಟಿ ನೀಡಲಿದ್ದು, ಮೊದಲ ಮಹಾಯುದ್ಧದಲ್ಲಿ ಭಾರತೀಯ ಸೈನಿಕರು ಮಾಡಿದ ತ್ಯಾಗಕ್ಕೆ ಗೌರವ ಸಲ್ಲಿಸಲಿದ್ದಾರೆ. ಅಷ್ಟೇ ಅಲ್ಲ ಮಾರ್ಸೆಲ್ಲೆಯಲ್ಲಿ ಭಾರತದ ಹೊಸ ಕಾನ್ಸುಲೇಟ್ ಜನರಲ್ ಉದ್ಘಾಟಿಸಲಿದ್ದಾರೆ. ಇದು ಪ್ರಧಾನಿ ಮೋದಿಯವರ ಆರನೇ ಫ್ರಾನ್ಸ್ ಭೇಟಿಯಾಗಿದೆ.

## ಹತ್ಯೆ ಯತ್ನ; ಸಂಚಿನಲ್ಲಿ ಶಿಕ್ಷೆಗೊಳಗಾಗಿದ್ದ ಪತ್ರಕರ್ತನ ಬಿಡುಗಡೆ

**ಢಾಕಾ:** ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರ ಪುತ್ರ ಸಜೀಬ್ ವಾಝೆದ್ ಜಾಯ್ ಅವರನ್ನು ಅಪಹರಿಸಿ ಹತ್ಯೆಗೈಯಲು ವಿಫಲ ಸಂಚು ರೂಪಿಸಿದ್ದ ಪ್ರಕರಣದಲ್ಲಿ ಶಿಕ್ಷೆಗೊಳಗಾಗಿದ್ದ ದೇಶದ ಪ್ರಮುಖ ಪತ್ರಿಕಾ ಸಂಪಾದಕರೊಬ್ಬರನ್ನು ಬಾಂಗ್ಲಾದೇಶದ ನ್ಯಾಯಾಲಯವೊಂದು ಖುಲಾಸೆಗೊಳಿಸಿದೆ. 2015ರಲ್ಲಿ ಅಮೆರಿಕದಲ್ಲಿ ಸಜೀಬ್ ಅವರನ್ನು ಕೊಲ್ಲುವ ಯತ್ನ ಮಾಡಲಾಗಿತ್ತು.

ಢಾಕಾದ 4ನೇ ಹೆಚ್ಚುವರಿ ಮೆಟ್ರೋಪಾಲಿಟನ್ ಸೆಷನ್ಸ್ ನ್ಯಾಯಾಧೀಶ ತಾರಿಕ್ ಅಜೀಜ್ ಅವರು ಈ ತೀರ್ಪು ನೀಡಿದ್ದು, ಈ ಪ್ರಕರಣದಲ್ಲಿ ತನ್ನ ಶಿಕ್ಷೆಯನ್ನು ರದ್ದುಗೊಳಿಸಬೇಕೆಂದು ಕೋರಿ ಮಹಮುದುರ್ ರೆಹಮಾನ್ ಸಲ್ಲಿಸಿದ್ದ ಮೇಲ್ಮನವಿಯನ್ನು ಅವರು ಅಂಗೀಕರಿಸಿದ್ದಾರೆ ಎಂದು ಡೈಲಿ ಸ್ಟಾರ್ ಪತ್ರಿಕೆ ವರದಿ ಮಾಡಿದೆ.

ಮೇಲ್ಮನವಿದಾರರ ವಿರುದ್ಧ ಹೊರಿಸಲಾದ ಆರೋಪಗಳು ಸುಳ್ಳು ಮತ್ತು ಕಪೋಲಕಲ್ಪಿತವಾಗಿವೆ ಎಂದು ಕಂಡುಬಂದಿದೆ ಎಂದು ನ್ಯಾಯಾಧೀಶರು ಹೇಳಿದರು. ಹೀಗಾಗಿ ವಿಚಾರಣಾ ನ್ಯಾಯಾಲಯವು ಅವರಿಗೆ ವಿಧಿಸಿದ ಶಿಕ್ಷೆಯನ್ನು ರದ್ದುಗೊಳಿಸಲಾಗುತ್ತಿದ್ದು, ಮೇಲ್ಮನವಿದಾರನನ್ನು ಬಿಡುಗಡೆ ಮಾಡಲು ಆದೇಶಿಸಲಾಗಿದೆ ಎಂದು ನ್ಯಾಯಾಧೀಶರು ತಮ್ಮ ಆದೇಶದಲ್ಲಿ ತಿಳಿಸಿದ್ದಾರೆ.

ತೀರ್ಪಿನ ನಂತರ ಮಾತನಾಡಿದ, ಅಮರ್ ದೇಶ್ ದಿನಪತ್ರಿಕೆಯ ಸಂಪಾದಕ ಮಹಮದೂರ್, ಅಂತಿಮವಾಗಿ ನ್ಯಾಯಾಲಯದಿಂದ ನ್ಯಾಯ ಸಿಕ್ಕಿದ್ದು, ಫ್ಯಾಸಿಸಂ ವಿರುದ್ಧದ ಹೋರಾಟವನ್ನು ಮುಂದುವರಿಸುವುದಾಗಿ ಸುದ್ದಿಗಾರರಿಗೆ ತಿಳಿಸಿದರು. ಕಳೆದ ವರ್ಷ ಆಗಸ್ಟ್ 17 ರಂದು ಢಾಕಾ ನ್ಯಾಯಾಲಯವು ಅವರ ಅನುಪಸ್ಥಿತಿಯಲ್ಲಿ ಅವರಿಗೆ ಏಳು ವರ್ಷಗಳ ಜೈಲು ಶಿಕ್ಷೆ ವಿಧಿಸಿತ್ತು.

ಹಿರಿಯ ಪತ್ರಕರ್ತ ಶಫೀಕ್ ರೆಹಮಾನ್, ಜತಿಯಾತಾಬಾದಿ ಸಾಮಾಜಿಕ ಸಾಂಸ್ಕೃತಿಕ ಸಂಘಟನೆಯ ಉಪಾಧ್ಯಕ್ಷ ಮುಹಮ್ಮದ್ ಉಲ್ಲಾ ಮಾಮುನ್, ಅವರ ಪುತ್ರ ರಿಜ್ವಿ ಅಹ್ಮದ್ ಸೀಸರ್ ಮತ್ತು ಅಮೆರಿಕ ಮೂಲದ ಉದ್ಯಮಿ ಮಿಜಾನುರ್ ರಹಮಾನ್ ಭುಯಿಯಾನ್ ಅವರಿಗೂ ಇದೇ ಪ್ರಕರಣದಲ್ಲಿ ಏಳು ವರ್ಷಗಳ ಜೈಲು ಶಿಕ್ಷೆ ವಿಧಿಸಲಾಗಿದೆ.

ಐದೂವರೆ ವರ್ಷಗಳ ಕಾಲ ದೇಶಭ್ರಷ್ಟರಾಗಿದ್ದ ಮಹಮುದೂರ್ ಕಳೆದ ವರ್ಷ ಸೆಪ್ಟೆಂಬರ್ 27ರಂದು ಬಾಂಗ್ಲಾದೇಶಕ್ಕೆ ಮರಳಿದ್ದರು. ಎರಡು ದಿನಗಳ ನಂತರ, ಅವರು ಢಾಕಾದ ಮುಖ್ಯ ಮೆಟ್ರೋಪಾಲಿಟನ್ ಮ್ಯಾಜಿಸ್ಟ್ರೇಟ್ ನ್ಯಾಯಾಲಯಕ್ಕೆ ಶರಣಾಗಿದ್ದರು ಮತ್ತು ಅವರನ್ನು ಜೈಲಿಗೆ ಕಳುಹಿಸಲಾಗಿತ್ತು. 2015ರ ಆಗಸ್ಟ್ 3ರಂದು ದಾಖಲಾದ ಪ್ರಕರಣದಲ್ಲಿ ಮಹಮುದೂರ್ ಮತ್ತು ಶಫೀಕ್ ರೆಹಮಾನ್ ಅವರನ್ನು ಬಂಧಿಸಲಾಗಿತ್ತು.

## ಮಹಾರಾಷ್ಟ್ರದಲ್ಲಿ ಗೀಲನ್ ಬಾ ಸಿಂಡ್ರೋಮ್ ಪ್ರಕರಣ ಪತ್ತೆ



ಮಹಾರಾಷ್ಟ್ರ: ರಾಜ್ಯದಲ್ಲಿ ಒಟ್ಟು 192 ಗೀಲನ್ ಬಾ ಸಿಂಡ್ರೋಮ್ ಶಂಕಿತ ಪ್ರಕರಣಗಳು ಪತ್ತೆಯಾಗಿದ್ದು, ಅವುಗಳಲ್ಲಿ 167 ಪ್ರಕರಣಗಳು ದೃಢಪಟ್ಟಿವೆ ಎಂದು ಮಹಾರಾಷ್ಟ್ರ ಆರೋಗ್ಯ ಇಲಾಖೆ ಸೋಮವಾರ ವರದಿ ಮಾಡಿದೆ.

ಗೀಲನ್ ಬಾ ಸಿಂಡ್ರೋಮ್‌ಗೆ 7 ಮಂದಿ ಬಲಿ: ಇದಲ್ಲದೇ ಅಧಿಕಾರಿಗಳ ಪ್ರಕಾರ, ಏಳು ಸಾವುಗಳು ವರದಿಯಾಗಿದ್ದು, ಅದರಲ್ಲಿ ಒಂದು ಜಿಬಿಎಸ್? ಎಂದು ದೃಢಪಟ್ಟಿದೆ. ಉಳಿದ ಆರು ಸಾವುಗಳು ಇನ್ನೂ ಶಂಕಿತವಾಗಿಯೇ ಇವೆ.

ಗೀಲನ್ ಬಾ ಸಿಂಡ್ರೋಮ್ ರಾಜ್ಯದ ಹಲವೆಡೆ ಹರಡಿದೆ. ಇದರಲ್ಲಿ ಪುಣೆ ಮಹಾನಗರ ಪಾಲಿಕೆ (ಕಒಅ)ಯಿಂದ 39, ಕಒಅ ಪ್ರದೇಶದಲ್ಲಿ ಹೊಸದಾಗಿ ಸೇರ್ಪಡೆಯಾದ ಹಳ್ಳಿಗಳಿಂದ 91, ಪಿಂಪ್ರಿ ಚಿಂಚ್‌ವಾಡ್ ಮುನ್ಸಿಪಲ್ ಕಾರ್ಪೊರೇಷನ್ ನಿಂದ 29, ಪುಣೆ ಗ್ರಾಮೀಣದಿಂದ 25 ಮತ್ತು ಇತರ ಜಿಲ್ಲೆಗಳಿಂದ 8 ಪ್ರಕರಣಗಳು ವರದಿಯಾಗಿವೆ ಎಂದು ಇಲಾಖೆ ತಿಳಿಸಿದೆ.

ಇನ್ನೂ 48 ರೋಗಿಗಳಿಗೆ ಐಸಿಯುನಲ್ಲಿ ಚಿಕಿತ್ಸೆ: ಪ್ರಸ್ತುತ, 48 ರೋಗಿಗಳು ತೀವ್ರ ನಿಗಾ ಘಟಕದಲ್ಲಿ, 21 ಜನರು ವೆಂಟಿಲೇಟರ್‌ನಲ್ಲಿದ್ದು ಚಿಕಿತ್ಸೆ ಪಡೆಯುತ್ತಿದ್ದರೆ, 91 ರೋಗಿಗಳನ್ನು ಚಿಕಿತ್ಸೆ ನಂತರ ಆಸ್ಪತ್ರೆಯಿಂದ ಬಿಡುಗಡೆ ಮಾಡಲಾಗಿದೆ ಎಂದು ಮಾಹಿತಿ ನೀಡಿದೆ.

ರಾಜ್ಯ ಆರೋಗ್ಯ ಅಧಿಕಾರಿಗಳು ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ಪೀಡಿತ ಪ್ರದೇಶಗಳಲ್ಲಿ ಕಣ್ಗಾವಲು ತೀವ್ರಗೊಳಿಸಿದ್ದಾರೆ. ಇದಕ್ಕೂ ಮೊದಲು ಫೆಬ್ರವರಿ 6ರಂದು ಪುಣೆ ಮಹಾನಗರ ಪಾಲಿಕೆಯು, ನಾಂದೇಡ್ ಗ್ರಾಮ, ಧಯಾರಿ ಮತ್ತು ಪುಣೆ ನಗರದ ಸಿಂಹಗಡ್ ರಸ್ತೆಯಲ್ಲಿರುವ ಪಕ್ಕದ ಪ್ರದೇಶಗಳಲ್ಲಿ 30 ಖಾಸಗಿ ನೀರು ಸರಬರಾಜು ಘಟಕಗಳನ್ನು ಮುಚ್ಚಿತ್ತು.

ಈ ಪ್ರದೇಶಗಳನ್ನು ಸಾಂಕ್ರಾಮಿಕದ ಕೇಂದ್ರಬಿಂದು ಎಂದು ಗುರುತಿಸಲಾಗಿದೆ. ಕಳೆದ ಎರಡು ದಿನಗಳಲ್ಲಿ ಈ ಘಟಕಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ಎಂದು ಫೆ. 6ರಂದು ಮಹಾನಗರ ಪಾಲಿಕೆ ಅಧಿಕಾರಿಯೊಬ್ಬರು ತಿಳಿಸಿದ್ದರು.

ನೀರಿನ ಮಾದರಿಗಳನ್ನು ಸಂಗ್ರಹಿಸಿದ ಪಾಲಿಕೆ: ಕುಡಿಯಲು ಯೋಗ್ಯವಲ್ಲದ ನೀರಿನ ಮಾದರಿಗಳನ್ನು ಸಂಗ್ರಹಿಸಿದ ಪುಣೆ ಮಹಾನಗರ ಪಾಲಿಕೆ, ಅಪಾಯ ಅರಿತು ನೀರಿನ ಘಟಕಗಳ ವಿರುದ್ಧ ಕ್ರಮ ಕೈಗೊಂಡಿದೆ. ಕೆಲವು ನೀರಿನ ಘಟಕಗಳು ಕಾರ್ಯನಿರ್ವಹಿಸಲು ಸರಿಯಾದ ಅನುಮತಿಯನ್ನೂ ಹೊಂದಿಲ್ಲದಿದ್ದರೆ, ಉಳಿದವುಗಳು ಎಸ್ಚೆರಿಯಾ ಕೋಲಿ ಬ್ಯಾಕ್ಟೀರಿಯಾದಿಂದ ಕಲುಷಿತಗೊಂಡಿದ್ದವು. ಇನ್ನುಳಿದ ಕೆಲವು ಘಟಕಗಳು ಮಾಲಿನ್ಯ ನಿಯಂತ್ರಣಕ್ಕೆ ಸೋಂಕುನಿವಾರಕ ಹಾಗೂ ಕ್ಲೋರಿನ್ ಅನ್ನು ಬಳಸುತ್ತಿರಲಿಲ್ಲ.

## ಹಳಿ ತಪ್ಪಿದ ರೈಲಿನ ಇಂಜಿನ್: ತಪ್ಪಿದ ಅನಾಹುತ




ಉತ್ತರಪ್ರದೇಶ: ಮಹಾಕುಂಭದ ವಿಶೇಷ ರೈಲಿನ ಬೋಗಿಗೆ ಎಂಜಿನ್ ಜೋಡಿಸುವ ವೇಳೆ ಹಳಿ ತಪ್ಪಿರುವ ಘಟನೆ ಜೌನ್‌ಪುರ ಜಂಕ್ಷನ್‌ನಲ್ಲಿ ನಡೆದಿದೆ. ಜೌನಪುರ ಜಂಕ್ಷನ್‌ನ ಮೂರನೇ ಫ್ಲಾಟ್‌ಫಾರ್ಮ್‌ನಲ್ಲಿ ನಡೆದ ಈ ಘಟನೆ ರೈಲ್ವೆ ನೌಕರರಲ್ಲಿ ಆತಂಕಕ್ಕೆ ಕಾರಣವಾಯಿತು. ಆದರೆ, ಅದೃಷ್ಟವಶಾತ್ ರೈಲು ಖಾಲಿ ಇದ್ದ ಕಾರಣ ಯಾವುದೆ ಅಹಿತಕರ ಘಟನೆ ನಡೆದಿಲ್ಲ.

ಪ್ರಯಾಗರಾಜ್‌ನ ಮಹಾಕುಂಭ ಮೇಳಕ್ಕೆ ಸಂಚರಿಸುವ ವಿಶೇಷ ರೈಲನ್ನು ಜೌನಪುರ ಜಂಕ್ಷನ್‌ನ ಪ್ಲಾಟ್‌ಫಾರ್ಮ್ ನಂಬರ್ ಮೂರರಲ್ಲಿ ಸಿದ್ಧಪಡಿಸಲಾಗುತ್ತಿತ್ತು. ನೌಕರರು ಜೋಡಣೆ ಕೆಲಸವನ್ನು ನಿರ್ವಹಿಸುತ್ತಿದ್ದರು. ಈ ವೇಳೆ, ರೈಲು ಹಿಂದಕ್ಕೆ ಮುಂದಕ್ಕೆ ಚಲಿಸುವಾಗ ಇಂಜಿನ್‌ನ ಎರಡು ಚಕ್ರಗಳು ಏಕಾಏಕಿ ಹಳಿಯಿಂದ ಹೊರಬಂದು, ನೌಕರರಲ್ಲಿ ಆತಂಕಕ್ಕೆ ಕಾರಣವಾಯ್ತು.

ಈ ಅಪಘಾತದ ಸಮಯದಲ್ಲಿ, ರೈಲು ಸಂಪೂರ್ಣವಾಗಿ ಖಾಲಿಯಾಗಿತ್ತು. ಇದರಿಂದಾಗಿ ಭಾರಿ ಅನಾಹುತ ತಪ್ಪಿದೆ. ಈ ಅಪಘಾತಕ್ಕೆ ಕಾರಣ ಏನು ಎಂಬುದು ಇನ್ನೂ ತಿಳಿದುಬಂದಿಲ್ಲ ಎಂದು ಅಲ್ಲಿನ ಸಿಬ್ಬಂದಿ ಹೇಳಿದೆ.

ಸದ್ಯ ರೈಲು ಸಿದ್ಧವಾಗಿದ್ದು, ಖಾಲಿ ರೈಲು ಪ್ರಯಾಗ್‌ರಾಜ್‌ಗೆ ತಲುಪಿ ಅಲ್ಲಿಂದ ಪ್ರಯಾಣಿಕರೊಂದಿಗೆ ಈ ನಿಲ್ದಾಣಕ್ಕೆ ಹಿಂತಿರುಗುತ್ತದೆ ಎಂದು ನಿಲ್ದಾಣದ ಸಿಬ್ಬಂದಿ ತಿಳಿಸಿದ್ದಾರೆ.

ಈ ನಡುವೆ, ರೈಲಿನ ಚಕ್ರ ಹಳಿತಪ್ಪಿದ ಮಾಹಿತಿ ಪಡೆದ ಎಡಿಆರ್‌ಎಂ ಲಾಲ್ಜಿ ಚೌಧರಿ ತಡರಾತ್ರಿಯೇ ತಮ್ಮ ತಂಡದೊಂದಿಗೆ ಜೌನ್ಪುರ ಜಂಕ್ಷನ್‌ಗೆ ಭೇಟಿ ನೀಡಿ, ಅಪಘಾತಕ್ಕೆ ಕಾರಣ ಕುರಿತು ಸಿಬ್ಬಂದಿಯೊಂದಿಗೆ ಮಾತನಾಡಿದರು. ರೈಲ್ವೆ ಸಿಬ್ಬಂದಿ ತಡರಾತ್ರಿಯವರೆಗೂ ತನಿಖೆ ಮುಂದುವರೆಸಿ, ಎಂಜಿನ್ ಅನ್ನು ಮತ್ತೆ ಹಳಿಗೆ ತರಲು ಎಲ್ಲಾ ಪ್ರಯತ್ನಗಳು ಮಾಡಿದರು. ಈ ನಡುವೆ ಈ ಅಪಘಾತಕ್ಕೆ ಕಾರಣ ಏನು ಎಂಬುದು ತಿಳಿದಿಲ್ಲ. ಈ ಕುರಿತು ಸಂಪೂರ್ಣ ತನಿಖೆ ನಡೆಸಲಾಗುವುದು ಎಂದು ಎಡಿಆರ್‌ಎಂ ತಿಳಿಸಿದ್ದಾರೆ.

## ಲಂಚ ನಿಷೇಧಿಸುವ ಕಾನೂನಿಗೆ ನಿರ್ಬಂಧ ಹೇರಿದ ಟ್ರಂಪ್



ವಾಷಿಂಗ್ಟನ್: ಅಮೆರಿಕದ ಕಂಪನಿಗಳು ವಿದೇಶಿ ಅಧಿಕಾರಿಗಳಿಗೆ ಲಂಚ ನೀಡುವುದನ್ನು ನಿಷೇಧಿಸುವ ಕಾನೂನಿಗೆ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಡೆ ನೀಡಿದ್ದಾರೆ. ಈ ಕಾನೂನು ಅಮೆರಿಕದ ಕಂಪನಿಗಳ ಹಿತಾಸಕ್ತಿಗೆ ವ್ಯತಿರಿಕ್ತವಾಗಿದೆ ಎಂದು ಟ್ರಂಪ್ ಪ್ರತಿಪಾದಿಸಿದ್ದಾರೆ. ಈ ಕಾನೂನು ಜಾರಿಗೆ ನಿರ್ಬಂಧ ವಿಧಿಸಿದ ನಂತರ ಅಮೆರಿಕದ ಷೇರು ಮಾರುಕಟ್ಟೆಯಲ್ಲಿ ಅದಾನಿ ಗ್ರೂಪ್‌ನ ಎಲ್ಲ ಷೇರುಗಳು ಏರಿಕೆಯಾಗಿವೆ.

ವಿದೇಶಿ ಭ್ರಷ್ಟಾಚಾರ ಅಭ್ಯಾಸಗಳ ಕಾಯ್ದೆ ಜಾರಿ ನಿರ್ಬಂಧಿಸುವ ಕಾರ್ಯನಿರ್ವಾಹಕ ಆದೇಶಕ್ಕೆ ಟ್ರಂಪ್ ಸಹಿ ಹಾಕಿದ್ದಾರೆ.

ಕಾರ್ಯನಿರ್ವಾಹಕ ಆದೇಶದ ಫ್ಯಾಕ್ಟ್ ಶೀಟ್?ನಲ್ಲಿ ವಿವರಿಸಿದಂತೆ ಹೊಸ ಜಾರಿ ಮಾರ್ಗಸೂಚಿಗಳನ್ನು ರೂಪಿಸುವವರೆಗೆ ಕಾಯ್ದೆಯಡಿ ಯಾವುದೇ ಕ್ರಮಗಳನ್ನು ಕೈಗೊಳ್ಳದಂತೆ ಯುಎಸ್ ಅಧ್ಯಕ್ಷರು ಅಟಾರ್ನಿ ಜನರಲ್ ಪಾಮ್ ಬೊಂಡಿ ಅವರಿಗೆ ನಿರ್ದೇಶನ ನೀಡಿದರು. ಇದಲ್ಲದೇ ಎಫ್‌ಸಿಪಿಎ ಅಡಿ ಈ ಹಿಂದೆ ಕೈಗೊಳ್ಳಲಾದ ಎಲ್ಲ ಕ್ರಮಗಳ ಬಗ್ಗೆ ಪುನರ್ ಪರಿಶೀಲನೆ ನಡೆಯಲಿದೆ.

"1977 ರಲ್ಲಿ ಜಾರಿಗೆ ಬಂದಾಗಿನಿಂದ, ವಿದೇಶಿ ಭ್ರಷ್ಟಾಚಾರ ಅಭ್ಯಾಸಗಳ ಕಾಯ್ದೆಯ ವ್ಯಾಪ್ತಿಯನ್ನು ವ್ಯವಸ್ಥಿತವಾಗಿ ಮಿತಿ ಮೀರಿ ಹೆಚ್ಚಿಸಲಾಗಿದೆ ಮತ್ತು ಇದನ್ನು ಅಮೆರಿಕದ ಹಿತಾಸಕ್ತಿಗಳಿಗೆ ಹಾನಿಯಾಗುವಂತೆ ದುರ್ಬಳಕೆ ಮಾಡಿಕೊಳ್ಳಲಾಗಿದೆ" ಎಂದು ಶ್ವೇತಭವನದ ಹೇಳಿಕೆ ತಿಳಿಸಿದೆ.

ಏನು ಈ ಕಾಯಿದೆ: ಪ್ರಸ್ತುತ ಎಫ್‌ಸಿಪಿಎ ಜಾರಿಯು ಯುನೈಟೆಡ್ ಸ್ಟೇಟ್ಸ್‌ನ ವಿದೇಶಾಂಗ ನೀತಿಯ ಉದ್ದೇಶಗಳಿಗೆ ಅಡ್ಡಿಯಾಗಿದೆ ಮತ್ತು ಅದೇ ಕಾರಣದಿಂದ ಇದು ವಿದೇಶಾಂಗ ವ್ಯವಹಾರಗಳ ಮೇಲೆ ಅಧ್ಯಕ್ಷರ ಅನುಚ್ಛೇದ 2 ರ ಅಡಿ ಅಧಿಕಾರದ ಬಳಕೆಗೆ ಅಡ್ಡಿಯಾಗುತ್ತದೆ. ಅಮೆರಿಕವು ಸಂಬಂಧ ಹೊಂದಿರುವ ಯಾವುದೇ ಕಂಪನಿ ಅಥವಾ ವ್ಯಕ್ತಿಯು ವಿದೇಶದಲ್ಲಿ ವ್ಯವಹಾರವನ್ನು ಭದ್ರಪಡಿಸಿಕೊಳ್ಳಲು ವಿದೇಶಿ ಅಧಿಕಾರಿಗಳಿಗೆ ಹಣ ಅಥವಾ ಉಡುಗೊರೆಗಳನ್ನು ನೀಡುವುದನ್ನು ಎಫ್‌ಸಿಪಿಎ ನಿಷೇಧಿಸುತ್ತದೆ. ಟ್ರಂಪ್ ತಮ್ಮ ಮೊದಲ ಅಧಿಕಾರಾವಧಿಯಲ್ಲಿಯೇ ಈ ಕಾನೂನನ್ನು ತೆಗೆದುಹಾಕಲು ಯೋಚಿಸಿದ್ದರು.

"ಅಧ್ಯಕ್ಷರ ವಿದೇಶಾಂಗ ನೀತಿ ಅಧಿಕಾರವು ಅಮೆರಿಕದ ಕಂಪನಿಗಳ ಜಾಗತಿಕ ಆರ್ಥಿಕ ಸ್ಪರ್ಧಾತ್ಮಕತೆಯೊಂದಿಗೆ ಬೇರ್ಪಡಿಸಲಾಗದಷ್ಟು ಸಂಬಂಧ ಹೊಂದಿದೆ. ಅಮೆರಿಕದ ರಾಷ್ಟ್ರೀಯ ಭದ್ರತೆಯು ಪ್ರಮುಖ ಖನಿಜಗಳು, ಆಳ – ನೀರಿನ ಬಂದರುಗಳು ಅಥವಾ ಇತರ ಪ್ರಮುಖ ಮೂಲಸೌಕರ್ಯ ಅಥವಾ ಸ್ವತ್ತುಗಳಲ್ಲಿ ಕಾರ್ಯತಂತ್ರದ ವ್ಯವಹಾರ ಪ್ರಯೋಜನಗಳನ್ನು ಪಡೆಯುವ ಯುನೈಟೆಡ್ ಸ್ಟೇಟ್ಸ್ ಮತ್ತು ಅದರ ಕಂಪನಿಗಳ ಮೇಲೆ ಗಣನೀಯ ಭಾಗವನ್ನು ಅವಲಂಬಿಸಿದೆ" ಎಂದು ಹೇಳಿಕೆಯಲ್ಲಿ ತಿಳಿಸಲಾಗಿದೆ. "ಆದ್ದರಿಂದ ವಿದೇಶದಲ್ಲಿ ಅಮೆರಿಕದ ವಾಣಿಜ್ಯಕ್ಕೆ ಅತಿಯಾದ ಅಡೆತಡೆಗಳನ್ನು ತೆಗೆದುಹಾಕುವ ಮೂಲಕ ವಿದೇಶಾಂಗ ವ್ಯವಹಾರಗಳನ್ನು ನಡೆಸಲು ಮತ್ತು ಅಮೆರಿಕದ ಆರ್ಥಿಕ ಮತ್ತು ರಾಷ್ಟ್ರೀಯ ಭದ್ರತೆಯನ್ನು ಮುನ್ನಡೆಸಲು ಅಧ್ಯಕ್ಷೀಯ ಅಧಿಕಾರವನ್ನು ಕಾಪಾಡಿಕೊಳ್ಳುವುದು ನನ್ನ ಆಡಳಿತದ ನೀತಿಯಾಗಿದೆ" ಎಂದು ಆದೇಶದಲ್ಲಿ ತಿಳಿಸಲಾಗಿದೆ.

# ದಕ್ಷಿಣ ಭಾರತದ ಟಾಪ್–5 ಸಂಭಾವನೆ ಪಡೆಯುವ ನಟಿಯರು ಯಾರು?



ಟಾಪ್ 5 ಹೆಚ್ಚು ಸಂಭಾವನೆ ಪಡೆಯುವ ದಕ್ಷಿಣ ಭಾರತದ ನಟಿಯರು: ಪ್ಯಾನ್ ಇಂಡಿಯಾ ಸಿನಿಮಾಗಳ ಸಂಖ್ಯೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ನಾಯಕರು, ನಾಯಕಿಯರು ಕೂಡ ಪ್ಯಾನ್ ಇಂಡಿಯಾ ಸಿನಿಮಾಗಳಲ್ಲಿ ನಟಿಸಲು ಆಸಕ್ತಿ ತೋರಿಸುತ್ತಿದ್ದಾರೆ. ಅಭಿಮಾನಿಗಳು ಕೂಡ ಅದನ್ನೇ ಬಯಸುತ್ತಿದ್ದಾರೆ. ಅಷ್ಟೇ ಅಲ್ಲ, ಪ್ಯಾನ್ ಇಂಡಿಯಾ ಸಿನಿಮಾಗಳು ಕಲೆಕ್ಷನ್‌ನಲ್ಲಿಯೂ ದಾಖಲೆಗಳನ್ನು ನಿರ್ಮಿಸುತ್ತಿವೆ.

ಇದರಿಂದಾಗಿ ನಟ, ನಟಿಯರ ಸಂಭಾವನೆಯೂ ಹೆಚ್ಚುತ್ತಿದೆ. ಈ ಕ್ರಮದಲ್ಲಿ ದಕ್ಷಿಣ ಭಾರತದಲ್ಲಿ ಅತಿ ಹೆಚ್ಚು ಸಂಭಾವನೆ ಪಡೆಯುವ ನಾಯಕಿಯರ ಸಂಖ್ಯೆ ಹೆಚ್ಚುತ್ತಿದೆ. ದಕ್ಷಿಣದಲ್ಲಿ ಹೆಚ್ಚು ಸಂಭಾವನೆ ಪಡೆಯುವ ನಟಿಯರು ಯಾರೆಂದರೆ.. ಇದರಲ್ಲಿ ಮೊದಲ ಸ್ಥಾನದಲ್ಲಿ ಯಾರಿದ್ದಾರೆ?

ಅಮರನ್ ಚಿತ್ರದ ಯಶಸ್ಸಿನ ನಂತರ ನಾಗ ಚೈತನ್ಯ ಜೊತೆ ಸಾಯಿ ಪಲ್ಲವಿ ನಟಿಸಿದ ತೆಲುಗು ಚಿತ್ರ ತಂಡೇಲ್ 7ನೇ ತಾರೀಕಿನಂದು ಬಿಡುಗಡೆಯಾಗಿ ಉತ್ತಮ ಪ್ರತಿಕ್ರಿಯೆ ಪಡೆಯಿತು. ಈ ಚಿತ್ರಕ್ಕೆ ಸಾಯಿ ಪಲ್ಲವಿಗೆ 5 ಕೋಟಿ ರೂ. ಸಂಭಾವನೆ ನೀಡಲಾಗಿದೆ ಎಂದು ತಿಳಿದುಬಂದಿದೆ.

ಮದುವೆಯಾದ ನಂತರವೂ ನಂಬರ್ 1 ನಾಯಕಿಯಾಗಿ ಮಿಂಚುತ್ತಿರುವ ನಯನತಾರ ಪ್ರತಿ ಚಿತ್ರಕ್ಕೂ 10 ಕೋಟಿ ರೂ.ವರೆಗೆ ಸಂಭಾವನೆ ಪಡೆಯುತ್ತಿದ್ದಾರೆ. 2018ರಲ್ಲಿ ಫೋರ್ಬ್ಸ್ ಇಂಡಿಯಾ ಬಿಡುಗಡೆ ಮಾಡಿದ 100 ಪ್ರಮುಖ ವ್ಯಕ್ತಿಗಳ ಪಟ್ಟಿಯಲ್ಲಿ ಸ್ಥಾನ ಪಡೆದ ಏಕೈಕ ನಟಿ ನಯನತಾರ. ಪ್ರಸ್ತುತ ಅವರು ಟೆಸ್ಟ್, ಮನ್ನಾಂಗಟ್ಟಿ ಸಿನ್ಸ್ 1960, ಡಿಯರ್ ಸ್ಟೂಡೆಂಟ್ಸ್, ಟಾಕ್ಸಿಕ್, ರಾಕ್ಕಾಯಿ, ಒಒಓಓ ಮುಂತಾದ ಚಿತ್ರಗಳಲ್ಲಿ ನಟಿಸುತ್ತಿದ್ದಾರೆ.

ಟಾಲಿವುಡ್‌ನ ಸ್ಟಾರ್ ನಟಿ ಅನುಷ್ಕಾ ಶೆಟ್ಟಿ ಈಗ ಸಿನಿಮಾಗಳಲ್ಲಿ ನಟಿಸುವುದನ್ನು ಕಡಿಮೆ ಮಾಡಿದ್ದಾರೆ. 2020ರಲ್ಲಿ ನಿಶ್ಶಬ್ದಂ ಚಿತ್ರದಲ್ಲಿ ನಟಿಸಿದ್ದರು. 3 ವರ್ಷಗಳ ವಿರಾಮದ ನಂತರ 2023ರಲ್ಲಿ ಮಿಸ್ ಶೆಟ್ಟಿ ಮಿಸ್ಟರ್ ಪೊಲೀಶೆಟ್ಟಿ ಚಿತ್ರದಲ್ಲಿ ನಟಿಸಿದ್ದಾರೆ. ಈಗ ಕಾದಿ, ಕಥನಾರ್ – ದಿ ವೈಲ್ಡ್ ಸೋರ್ಸೆರರ್ ಮುಂತಾದ ಚಿತ್ರಗಳಲ್ಲಿ ನಟಿಸುತ್ತಿದ್ದಾರೆ. ಪ್ರತಿ ಚಿತ್ರಕ್ಕೂ 5 ಕೋಟಿ ರೂ.ಗಳಿಂದ 7 ಕೋಟಿ ರೂ.ವರೆಗೆ ಪಡೆಯುತ್ತಿದ್ದಾರೆ.

ಎಲ್ಲಾ ಭಾಷೆಗಳಲ್ಲಿಯೂ ಈಗ ಸ್ಟಾರ್ ಆಗಿರುವವರು ರಶ್ಮಿಕಾ ಮಂದಣ್ಣ. ಪುಷ್ಪ ಚಿತ್ರ ಅವರಿಗೆ ಉತ್ತಮ ಗುರುತಿಸುವಿಕೆ ತಂದುಕೊಟ್ಟಿತು. ಈ ಚಿತ್ರದ ಜೊತೆಗೆ ಚಿತ್ರದ ಹಾಡುಗಳು ಕೂಡ ಪ್ರೇಕ್ಷಕರನ್ನು ಆಕರ್ಷಿಸಿದವು. ಇತ್ತೀಚೆಗೆ ಬಿಡುಗಡೆಯಾದ ಪುಷ್ಪ 2 ಚಿತ್ರ 1800 ಕೋಟಿ ರೂ.ಗೂ ಹೆಚ್ಚು ಕಲೆಕ್ಷನ್ ಮಾಡಿದೆ. ಈಗ ಐತಿಹಾಸಿಕ ಕಥೆಯಲ್ಲಿ ನಟಿಸುತ್ತಿದ್ದಾರೆ.

ಛತ್ರಪತಿ ಶಿವಾಜಿ ಮಹಾರಾಜರ ಹಿರಿಯ ಮಗ ಛತ್ರಪತಿ ಸಂಭಾಜಿ ಮಹಾರಾಜರ ಕಥೆಯಾಧಾರಿತ ಐತಿಹಾಸಿಕ ಚಿತ್ರ ನಿರ್ಮಾಣವಾಗುತ್ತಿದೆ. ಚಾವಾ ಎಂಬ ಶೀರ್ಷಿಕೆಯ ಈ ಚಿತ್ರ ಫೆಬ್ರವರಿ 14 ರಂದು ಬಿಡುಗಡೆಯಾಗಲಿದೆ. ಪುಷ್ಪ 2 ಚಿತ್ರಕ್ಕೆ ರಶ್ಮಿಕಾ ಮಂದಣ್ಣಗೆ 10 ಕೋಟಿ ರೂ. ಸಂಭಾವನೆ ನೀಡಲಾಗಿದ್ದರೆ, ಚಾವಾ ಚಿತ್ರಕ್ಕೆ 4 ಕೋಟಿ ರೂ. ನೀಡಲಾಗಿದೆ ಎಂದು ತಿಳಿದುಬಂದಿದೆ.

ನಾಗ ಚೈತನ್ಯ ಜೊತೆಗಿನ ವಿಚ್ಛೇದನ, ತಂದೆಯ ಸಾವು, ಮಯೋಸೈಟಿಸ್ ಕಾಯಿಲೆಯಂತಹ ಸಮಸ್ಯೆಗಳಿಂದ ಚೇತರಿಸಿಕೊಳ್ಳುತ್ತಿರುವ ಸಮಂತಾ ಈಗ ಸಿನಿಮಾಗಳಿಂದ ದೂರವಿದ್ದಾರೆ. ವೆಬ್ ಸರಣಿಗಳತ್ತ ಗಮನ ಹರಿಸಿದ್ದಾರೆ. ಪ್ರತಿ ಚಿತ್ರಕ್ಕೂ 8 ಕೋಟಿ ರೂ.ವರೆಗೆ ಸಮಂತಾ ಸಂಭಾವನೆ ಪಡೆಯುತ್ತಿದ್ದಾರೆ.

# ದರ್ಶನ್ ಭೇಟಿಯಾಗಲು ಸಾಧ್ಯವಾಗ್ತಿಲ್ಲ: ನಟ ಡಾಲಿ





ಮೈಸೂರಿನಲ್ಲಿ ಫೆಬ್ರವರಿ 15 ಮತ್ತು 16 ರಂದು ನಡೆಯಲಿರುವ ತಮ್ಮ ಮದುವೆಗೆ ನಟ ದರ್ಶನ್ ಬರುತ್ತಾರಾ ಎಂಬ ಕುತೂಹಲವನ್ನು ನಟ ಡಾಲಿ ಧನಂಜಯ್ ಹುಟ್ಟುಹಾಕಿದ್ದಾರೆ. ಚಿತ್ರರಂಗದ ಎಲ್ಲರನ್ನೂ ಆಹ್ವಾನಿಸಿದ್ದು, ದರ್ಶನ್ ಅವರನ್ನು ಭೇಟಿ ಮಾಡಿ ಆಮಂತ್ರಣ ನೀಡಲು ಪ್ರಯತ್ನಿಸುತ್ತಿರುವುದಾಗಿಯೂ ತಿಳಿಸಿದ್ದಾರೆ. ಮೈಸೂರಿನ ವಸ್ತುಪ್ರದರ್ಶನ ಆವರಣದಲ್ಲಿ ನಡೆಯಲಿರುವ ಮದುವೆಗೆ ಅಭಿಮಾನಿಗಳಿಗೂ ಮುಕ್ತ ಅವಕಾಶವಿದೆ.

ಕನ್ನಡ ಚಿತ್ರರಂಗದ ಎಲ್ಲರನ್ನೂ ಕರೆದಿದ್ದೇನೆ. ಈಗಿನ ಪರಿಸ್ಥಿತಿಯಲ್ಲಿ ದರ್ಶನ್ ತೂಗುದೀಪ ಅವರನ್ನು ಭೇಟಿ ಮಾಡಲು ಸಾಧ್ಯವಾಗುತ್ತಿಲ್ಲ. ಆದರೆ, ನನ್ನ ಮದುವೆಗೆ ದರ್ಶನ್ ಅವರು ಬಂದರೆ ನನಗೆ ತುಂಬಾ ಸಂತೋಷವಾಗುತ್ತದೆ ಎಂದು ನಟ ಡಾಲಿ ಧನಂಜಯ ಹೇಳಿದ್ದಾರೆ.

ಮೈಸೂರಿನ ವಸ್ತು ಪ್ರದರ್ಶನ ಆವರಣದಲ್ಲಿ ಫೆ.15 ಮತ್ತು 16ರಂದು ನಡೆಯಲಿರುವ ಮದುವೆ ಕುರಿತು ಸುದ್ದಿಗೋಷ್ಠಿ ಏರ್ಪಡಿಸಿ ಮಾತನಾಡುವಾಗ ನಟ ದರ್ಶನ್‌ಗೆ ವಿವಾಹ ಆಮಂತ್ರಣ ಪತ್ರಿಕೆ ಕೊಡಲಾಗಿದೆಯೇ ಎಂಬ ಮಾಧ್ಯಮದವರ ಪ್ರಶ್ನೆ ಉತ್ತರಿಸುತ್ತಾ, ನನ್ನ ಮದುವೆಗೆ ದರ್ಶನ್ ರವರು ಬಂದ್ರೆ ನನಗೆ ತುಂಬಾ ಸಂತೋಷ. ಈಗಿನ ಪರಿಸ್ಥಿಯಲ್ಲಿ ಅವರನ್ನ ಭೇಟಿ ಮಾಡಲು ಆಗುತ್ತಿಲ್ಲ. ಕನ್ನಡ ಚಿತ್ರರಂಗದ ಎಲ್ಲರನ್ನೂ ಕರೆದಿದ್ದೇನೆ. ದರ್ಶನ್ ರವರನ್ನ ಕರೆಯಲು ಪ್ರಯತ್ನ ಮಾಡುತ್ತಿದ್ದೇನೆ. ದರ್ಶನ್ ಅವರು ಸಿಗುತ್ತಿಲ್ಲ. ಖಂಡಿತವಾಗಿ ದರ್ಶನ್ ನನ್ನ ಮದುವೆಗೆ ಬಂದರೆ ನನಗೆ ಸಂತೋಷ ಎಂದರು.

ಮೈಸೂರಿನ ವಸ್ತು ಪ್ರದರ್ಶನ ಆವರಣದಲ್ಲಿ ಮದುವೆಗೆ ಈಗಾಗಲೇ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಮೈಸೂರಿನಲ್ಲೇ ಮದುವೆ ಆಗಬೇಕು ಎನ್ನುವುದು ನಮ್ಮ ಕನಸು. ನನ್ನ ವಿದ್ಯಾಭ್ಯಾಸ, ಚಿತ್ರರಂಗಕ್ಕೆ ಕಾಲಿಟ್ಟಿದ್ದು ಎಲ್ಲವು ಮೈಸೂರಿನಿಂದಲೇ. ತಾಯಿ ಚಾಮುಂಡೇಶ್ವರಿ ಆಶೀರ್ವಾದ ಸಿಗಲಿ. ಅಭಿಮಾನಿಗಳಿಗೆ ಮುಕ್ತ ಅವಕಾಶ ನೀಡಿದ್ದೇವೆ. ಎಲ್ಲರು ನೇರವಾಗಿ ಬಂದು ನನಗೆ ಆಶೀರ್ವಾದ ಮಾಡಿ ಹೋಗಬಹುದು. ವಿದ್ಯಾಪತಿ ದ್ವಾರ ಮೂಲಕ ಅಭಿಮಾನಿಗಳಿಗೆ ಪ್ರವೇಶ ಇರುತ್ತದೆ ಎಂದು ತಿಳಿಸಿದರು.


ಚಿತ್ರರಂಗ, ರಾಜಕೀಯ ನಾಯಕರು ಎಲ್ಲರನ್ನ ಮದುವೆಗೆ ಕರೆದಿದ್ದೇನೆ. ಎಲ್ಲರು ಬಂದು ಆಶೀರ್ವಾದ ಮಾಡಬೇಕು ಎಂಬುದು ನಮ್ಮ ಬಯಕೆ. ಆಹ್ವಾನ ನೀಡಿರುವ ಬರ್ತಾರೆ ಎಂಬ ನಿರೀಕ್ಷೆ ಇದೆ. ನನಗೆ ಮಂತ್ರ ಮಾಂಗಲ್ಯ, ವಚನ ಮಾಂಗಲ್ಯ, ರಿಜಿಸ್ಟರ್ ಮದುವೆ ಆಗುವ ಆಸೆ ಇತ್ತು. ನಮ್ಮ ಕುಟುಂಬ ಸದಸ್ಯರು, ಚಿತ್ರರಂಗ, ಸ್ನೇಹಿತರು ಎಲ್ಲರಿಗೂ ಊಟ ಹಾಕಿಸಬೇಕು. ಹೀಗಾಗಿ ಒಂದೇ ವೇದಿಕೆಯಲ್ಲಿ ಎಲ್ಲರಿಗೂ ಊಟ ಹಾಕಿ ಆಶೀರ್ವಾದ ಪಡೆಯೋಣ ಎಂಬ ಆಸೆಯಿಂದ ಇಲ್ಲಿ ಮದುವೆ ಮಾಡಿಕೊಳ್ಳುತ್ತಿದ್ದೇನೆ ಎಂದು ಮಾಹಿತಿ ನೀಡಿದರು.

ಚಾಮುಂಡೇಶ್ವರಿ ದೇವಾಲಯ ಮಾದರಿಯಲ್ಲಿ ವೇದಿಕೆ ನಿರ್ಮಾಣ ಆಗುತ್ತಿದೆ. ದಕ್ಷಿಣ ಭಾರತದ ಮಾದರಿಯ ಊಟದ ವ್ಯವಸ್ಥೆ ಇದೆ. ಅಭಿಮಾನಿಗಳು, ವಿಐಪಿಗಳಿಗೆ ಪ್ರತ್ಯೇಕ ಊಟದ ವ್ಯವಸ್ಥೆ ಮಾಡಲಾಗಿದೆ. ಎಲ್ಲರಿಗೂ ಒಂದೇ ಮಾದರಿಯ ಊಟ ಇರುತ್ತದೆ. ಆದರೆ, ಪ್ರತ್ಯೇಕವಾಗಿ ಊಟದ ವ್ಯವಸ್ಥೆ ಮಾಡಲಾಗಿದೆ. ಎಲ್ಲರು ಮದುವೆಗೆ ಬನ್ನಿ ಹಾರೈಸಿ ಎಂದು ಮೈಸೂರಿನಲ್ಲಿ ನಟ ಡಾಲಿ ಧನಂಜಯ ಮನವಿ ಮಾಡಿದರು.

## ಮತ್ತೆ ದಕ್ಷಿಣಕ್ಕೆ ಬರುತ್ತಿರುವ ಖಾನ್‌ಗಳ ಮೆಚ್ಚಿನ ನಿರ್ದೇಶಕ

‘ಪುಷ್ಪ 2’ ಸಿನಿಮಾ ಮೂಲಕ ಭರ್ಜರಿ ಹಿಟ್ ಸಿನಿಮಾ ನೀಡಿರುವ ಅಲ್ಲು ಅರ್ಜುನ್, ತಮ್ಮ ಮುಂದಿನ ಸಿನಿಮಾಗಳನ್ನು ಬಲು ಎಚ್ಚರಿಕೆಯಿಂದ ಆಯ್ಕೆ ಮಾಡಿಕೊಳ್ಳಲಿದ್ದಾರೆ. ಅಲ್ಲು ಅರ್ಜುನ್, ಮುಂದಿನ ಸಿನಿಮಾವನ್ನು ತ್ರಿವಿಕ್ರಮ್ ಜೊತೆ ಮಾಡುವುದಾಗಿ ಘೋಷಣೆ ಆಗಿದೆ. ಇದೀಗ ಮತ್ತೊಬ್ಬ ಹಿಟ್ ನಿರ್ದೇಶಕನ ಜೊತೆಗೆ ಅಲ್ಲು ಅರ್ಜುನ್ ಕೈ ಜೋಡಿಸಲಿದ್ದಾರೆ. ಈಗಾಗಲೇ ಖಾನ್?ಗಳ ಜೊತೆ ಕೆಲಸ ಮಾಡುತ್ತಿರುವ ದಕ್ಷಿಣ ಭಾರತದ ಹಿಟ್ ನಿರ್ದೇಶಕರೊಟ್ಟಿಗೆ ಅಲ್ಲು ಅರ್ಜುನ್ ಕೈ ಜೋಡಿಸುತ್ತಿದ್ದಾರೆ.

ಸತತ ಸೋಲಿನ ಸುಳಿಯಲ್ಲಿದ್ದ ಶಾರುಖ್ ಖಾನ್‌ಗೆ ‘ಜವಾನ್’ ಸಿನಿಮಾ ಮೂಲಕ ಬ್ಲಾಕ್ ಬಸ್ಟರ್ ಹಿಟ್ ಕೊಟ್ಟ ತಮಿಳಿನ ನಿರ್ದೇಶಕ ಅಟ್ಲಿ ಇದೀಗ ಅಲ್ಲು ಅರ್ಜುನ್ ಜೊತೆಗೆ ಸಿನಿಮಾ ಮಾಡಲಿದ್ದಾರೆ. ಅಟ್ಲಿ, ಸಲ್ಮಾನ್ ಖಾನ್‌ಗಾಗಿ ಸಿನಿಮಾ ಒಂದನ್ನು ನಿರ್ದೇಶನ ಮಾಡಲಿದ್ದಾರೆ. ಆ ಸಿನಿಮಾದ ಬಳಿಕ ಅಲ್ಲು ಅರ್ಜುನ್‌ಗಾಗಿ ಸಿನಿಮಾ ಮಾಡಲಿದ್ದಾರೆ ನಿರ್ದೇಶಕ ಅಟ್ಲಿ. ತಮಿಳು ನಿರ್ದೇಶಕನಾದರೂ ಬಾಲಿವುಡ್‌ನಲ್ಲಿ ಒಂದರ ಹಿಂದೊಂದು ಸಿನಿಮಾಗಳನ್ನು ಅಟ್ಲಿ ನಿರ್ದೇಶನ ಮಾಡುತ್ತಿದ್ದಾರೆ.



‘ಜವಾನ್’ ಸಿನಿಮಾ ಬ್ಲಾಕ್ ಬಸ್ಟರ್ ಆದ ಬಳಿಕ ವರುಣ್ ಧವನ್, ಕೀರ್ತಿ ಸುರೇಶ್ ನಟನೆಯ ‘ಬೇಬಿ’ ಹೆಸರಿನ ಸಿನಿಮಾವನ್ನು ಅಟ್ಲಿ ನಿರ್ದೇಶನ ಮಾಡಿದರು. ಸಿನಿಮಾದ ಬಗ್ಗೆ ಧನಾತ್ಮಕ ಅಭಿಪ್ರಾಯಗಳು ವ್ಯಕ್ತವಾದರೂ ಸಹ ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ನಿರೀಕ್ಷಿತ ಪ್ರದರ್ಶನ ಕಾಣಲಿಲ್ಲ. ಅದರ ಬಳಿಕ ಅಟ್ಲಿ, ತಾವು ಸಲ್ಮಾನ್ ಖಾನ್ ಜೊತೆ ಸಿನಿಮಾ ಮಾಡುವುದಾಗಿ ಹೇಳಿದ್ದಾರೆ. ಇದೀಗ ಸಲ್ಮಾನ್ ಖಾನ್ ‘ಸಿಖಂಧರ್’ ಸಿನಿಮಾದ ಚಿತ್ರೀಕರಣದಲ್ಲಿ ಬ್ಯುಸಿಯಾಗಿದ್ದು, ಆ ಸಿನಿಮಾದ ಬಳಿಕ ಅಟ್ಲಿ ಜೊತೆಗಿನ ಸಿನಿಮಾ ಶುರು ಮಾಡಲಿದ್ದಾರೆ.

ಇನ್ನು ಅಲ್ಲು ಅರ್ಜುನ್ ಕೆಲವೇ ದಿನಗಳಲ್ಲಿ ತ್ರಿವಿಕ್ರಮ್ ನಿರ್ದೇಶನದ ಹೊಸ ಸಿನಿಮಾದಲ್ಲಿ ನಟಿಸಲು ಆರಂಭಿಸಲಿದ್ದಾರೆ. ಆ ಸಿನಿಮಾದ ಬಳಿಕ ಬಾಲಿವುಡ್‌ನ ಲೆಜೆಂಡರಿ ನಿರ್ದೇಶಕ ಸಂಜಯ್ ಲೀಲಾ ಬನ್ಸಾಲಿ ನಿರ್ದೇಶನದ ಹೊಸ ಸಿನಿಮಾದಲ್ಲಿ ನಟಿಸಲಿದ್ದಾರೆ. ಈ ಎರಡೂ ಸಿನಿಮಾಗಳ ಬಳಿಕವಷ್ಟೆ ಅಲ್ಲು ಅರ್ಜುನ್, ಅಟ್ಲಿ ಕಾಂಬಿನೇಷನ್?ನ ಸಿನಿಮಾ ಸೆಟ್ಟೇರಲಿದೆ. 2019 ರ ‘ಬಿಗಿಲ್’ ಸಿನಿಮಾದ ಬಳಿಕ ಅಟ್ಲಿ ದಕ್ಷಿಣದ ಯಾವುದೇ ಸಿನಿಮಾ ನಿರ್ದೇಶಿಸಿಲ್ಲ. ಅಲ್ಲು ಅರ್ಜುನ್ ಸಿನಿಮಾ ಮೂಲಕ ಅಟ್ಲಿ ಮತ್ತೆ ದಕ್ಷಿಣ ಭಾರತ ಚಿತ್ರರಂಗಕ್ಕೆ ಮರಳಲಿದ್ದಾರೆ.

## ಪಿ.ವಿ.ಸಿಂಧು ಗೈರಿನಲ್ಲಿ ಭಾರತಕ್ಕೆ ಕಠಿಣ ಸವಾಲು



ಬ್ಯಾಡ್ಮಿಂಟನ್ ಏಷ್ಯಾ ಮಿಶ್ರ ತಂಡ ಚಾಂಪಿಯನ್‌ಶಿಪ್ ಮಂಗಳ ವಾರ ಆರಂಭಗೊಳ್ಳಲಿದೆ. ಆದರೆ ಗಾಯದ ಸಮಸ್ಯೆಯಿಂದ ಪಿ.ವಿ.ಸಿಂಧು ಹಿಂದೆ ಸರಿದಿದ್ದು, ಹೀಗಾಗಿ ಚಿನ್ನದ ಪದಕ ಗೆಲ್ಲುವ ಭಾರತಕ್ಕೆ ಕಠಿಣ ಸವಾಲು ಎದುರಾಗಲಿದೆ.

2 ವರ್ಷಗಳ ಹಿಂದೆ ದುಬೈನಲ್ಲಿ ನಡೆದಿದ್ದ ಆವೃತ್ತಿಯಲ್ಲಿ ಭಾರತ ಕಂಚಿನ ಪದಕ ಗೆದ್ದಿತ್ತು. ಗೆಲುವಿನಲ್ಲಿ ಸಿಂಧು ಪ್ರಮುಖ ಪಾತ್ರ ವಹಿಸಿ ದ್ದರು. ಈ ಬಾರಿ ಅವರ ಬದಲು ಮಾಳವಿಕಾ ಬನ್ಸೋದ್ ತಂಡಕ್ಕೆ ಆಯ್ಕೆಯಾಗಿದ್ದಾರೆ.

ಭಾರತ ತಂಡದಲ್ಲಿ ಸಾತ್ವಿಕ್–ಚಿರಾಗ್ ಶೆಟ್ಟಿ, ಎಚ್.ಎಸ್.ಪ್ರಣಯ್, ಲಕ್ಷ ಸೇನ್, ಕರ್ನಾಟಕದ ಅಶ್ವಿನಿ ಪೊನ್ನಪ್ಪ ಸೇರಿ ಪ್ರಮುಖ ಶಟ್ಲರ್‌ಗಳು ಇದ್ದಾರೆ. ಕೂಟದಲ್ಲಿ ‘ಡಿ’ ಗುಂಪಿನಲ್ಲಿ ಸ್ಥಾನ ಪಡೆದಿರುವ ಭಾರತ ಬುಧವಾರ ಮಕಾವ್ ವಿರುದ್ಧ ತನ್ನ ಅಭಿಯಾನವನ್ನು ಆರಂಭಿಸಲಿದ್ದು, ಗುರುವಾರ ಬಲಿಷ್ಠ ಕೊರಿಯಾ ತಂಡದೊಂದಿಗೆ ಪೈಪೋಟಿ ನಡೆಸಲಿದೆ.

ಟೆನಿಸ್‌ನಲ್ಲಿ ಚಿನ್ನ ಗೆದ್ದು ಪ್ರಜ್ವಲಿಸಿದ ನಿಕಿ–ಪ್ರಜ್ವಲ್ ದೇವ್: ಅಥ್ಲೆಟಿಕ್ಸ್, ಸೈಕ್ಲಿಂಗ್‌ನಲ್ಲೂ ಮೆಡಲ್

ಡೆಹ್ರಾಡೂನ್: 38ನೇ ರಾಷ್ಟ್ರೀಯ ಗೇಮ್ಸ್‌ನಲ್ಲಿ ಸೋಮವಾರ ಕರ್ನಾಟಕ ಟೆನಿಸ್‌ನಲ್ಲಿ 3 ಸೇರಿದಂತೆ ಒಟ್ಟು 6 ಪದಕ ತನ್ನದಾಗಿಸಿಕೊಂಡಿದೆ. ಇದರೊಂದಿಗೆ ಪದಕ ಗಳಿಕೆಯನ್ನು 68ಕ್ಕೆ ಹೆಚ್ಚಿಸಿದೆ.

ಟೆನಿಸ್‌ನ ಪುರುಷರ ಡಬಲ್ಸ್‌ನಲ್ಲಿ ನಿಕಿ ಪೂನಚ್ಚ ಹಾಗೂ ಪ್ರಜ್ವಲ್ ದೇವ್ ಚಿನ್ನಕ್ಕೆ ಕೊರಳೊಡ್ಡಿದರು.

ಈ ಜೋಡಿ ಫೈನಲ್‌ನಲ್ಲಿ ಸರ್ವಿಸಸ್‌ನ ಇಸಾಖ್ ಇಕ್ಬಾಲ್–ಫೈಸಲ್ ಕಮರ್ ವಿರುದ್ಧ 6–3, 6–1 ಜಯಗಳಿಸಿತು. ಇತ್ತೀಚೆಗಷ್ಟೇ ನಿಕಿ, ಪ್ರಜ್ವಲ್ ಪುರುಷರ ತಂಡ ವಿಭಾಗದಲ್ಲಿ ಬೆಳ್ಳಿ ಗೆದ್ದಿದ್ದರು. ನಿಕಿಗೆ ಮತ್ತೊಂದು ಪದಕ ಖಚಿತವಾಗಿದ್ದು, ಮಿಶ್ರ ಡಬಲ್ಸ್ ಫೈನಲ್‌ನಲ್ಲಿ ಮಂಗಳವಾರ ಸೋಹಾ ಸಾದಿಕ್ ಜೊತೆಗೂಡಿ ಆಡಲಿದ್ದಾರೆ.

# ಕ್ಷಮೆ ಕೋರಿದ ಯೂಟ್ಯೂಬರ್ ರಣವೀರ್ ಅಲ್ಲಾಬಾಡಿಯಾ




ಜನಪ್ರಿಯ ಸಾಮಾಜಿಕ ಮಾಧ್ಯಮ ಪ್ರಭಾವಿ ರಣವೀರ್ ಅಲ್ಲಾಬಾಡಿಯಾ ಕಾರ್ಯಕ್ರಮವೊಂದರಲ್ಲಿ ತಾವು ನೀಡಿ ವಿವಾದಾತ್ಮಕ ಮತ್ತು ಕೀಳುಮಟ್ಟದ ಹೇಳಿಕೆಗೆ ಸಾರ್ವಜನಿಕವಾಗಿ ಕ್ಷಮೆ ಕೋರಿದ್ದಾರೆ. "ಈ ರೀತಿಯ ಹೇಳಿಕೆ ನೀಡಬಾರದಿತ್ತು. ಇದು ಹಾಸ್ಯಕ್ಕೂ ಮೀರಿದ್ದು, ತಪ್ಪಾಯ್ತು" ಎಂದು ಹೇಳಿದ್ದಾರೆ.

ಸ್ಟಾಂಡಪ್ ಕಮಿಡಿಯನ್ ಸಮಯ್ ರೈನಾ ಅವರ 'ಇಂಡಿಯಾಸ್ ಗಾಟ್ ಲೇಟೆಂಟ್' ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ರಣವೀರ್ ಅಲ್ಲಾಬಾಡಿಯಾ ಪೋಷಕರು ಮತ್ತು ಲೈಂಗಿಕತೆಯ ಬಗ್ಗೆ ಸ್ಪರ್ಧಿಯೊಬ್ಬರಲ್ಲಿ ಅಸಹ್ಯಕರ ಪ್ರಶ್ನೆ ಕೇಳಿದ್ದರು. ಈ ವಿಡಿಯೋ ವೈರಲ್ ಆಗಿ, ತೀವ್ರ ಟೀಕೆಗೆ ಗುರಿಯಾಗಿದೆ.

ಪ್ರಮಾದವಾಗಿದೆ, ಕ್ಷಮಿಸಿ: ಇದರ ಬೆನ್ನಲ್ಲೇ, ರಣವೀರ್ ತಮ್ಮ ತಪ್ಪನ್ನು ಅರಿತುಕೊಂಡು ಕ್ಷಮೆಯಾಚಿಸಿದ್ದಾರೆ. ಈ ಬಗ್ಗೆ ವಿಡಿಯೋ ಹಂಚಿಕೊಂಡಿರುವ ಬೀರ್‌ಬೈಸೆಪ್ಸ್ ಯೂಟ್ಯೂಬರ್?, "ನನ್ನ ಹೇಳಿಕೆ ಉಚಿತವಾಗಿರಲಿಲ್ಲ. ಅದು ತಮಾಷೆಯೂ ಅಲ್ಲ ಎಂಬುದು ಗೊತ್ತಿದೆ. ಹಾಸ್ಯ ಮಾಡಲು ನನಗೆ ಬರುವುದಿಲ್ಲ. ನನ್ನ ಹೇಳಿಕೆಗೆ ಕ್ಷಮೆ ಕೋರುತ್ತೇನೆ" ಎಂದಿದ್ದಾರೆ.

"ವೇದಿಕೆಯನ್ನು ನೀವು ಹೀಗೆಯೇ ಬಳಸುತ್ತೀರಾ ಎಂದು ಹಲವರು ಪ್ರಶ್ನಿಸಿದ್ದೀರಿ. ಖಂಡಿತವಾಗಿಯೂ ನಾನು ಮಾಡಿದ್ದು ತಪ್ಪು. ವೇದಿಕೆಯಲ್ಲಿ ಈ ರೀತಿ ಮಾತನಾಡಬಾರದು. ನಾನು ಹೇಳಿದ್ದಕ್ಕೆ ನೆವ, ಸಂದರ್ಭ, ಸಮರ್ಥನೆಯನ್ನು ನೀಡುವುದಿಲ್ಲ. ನನ್ನಿಂದಾದ ಪ್ರಮಾದಕ್ಕೆ ಕ್ಷಮೆ ಮಾತ್ರ ಕೇಳುತ್ತೇನೆ" ಎಂದು ವಿಡಿಯೋದಲ್ಲಿ ಹೇಳಿದ್ದಾರೆ.

"ಪಾಡ್‌ಕ್ಯಾಸ್ಟ್ ಅನ್ನು ಎಲ್ಲಾ ವಯೋಮಾನದ ಜನರು ವೀಕ್ಷಿಸುತ್ತಾರೆ. ಕುಟುಂಬವನ್ನು ನಾನು ಅತಿಯಾಗಿ ಗೌರವಿಸುತ್ತೇನೆ. ಈ ತಪ್ಪಿನಿಂದ ನಾನು ಪಾಠ ಕಲಿತಿದ್ದೇನೆ. ಆಕ್ಷೇಪಾರ್ಹ ವಿಡಿಯೋವನ್ನು ಅಳಿಸಿ ಹಾಕಲು ಕಾರ್ಯಕ್ರಮದ ಆಯೋಜಕರಲ್ಲಿ ಕೋರಿದ್ದೇನೆ. ನನ್ನನ್ನು ಕ್ಷಮಿಸುವ ಭರವಸೆಯಲ್ಲಿದ್ದೇನೆ" ಎಂದು ಮನವಿ ಮಾಡಿದ್ದಾರೆ.

ಕೀಳುಮಟ್ಟದ ಹೇಳಿಕೆ ವಿರುದ್ಧ ದೂರು: ರಣವೀರ್ ಅಲ್ಲಾಬಾಡಿಯಾ ವಿವಾದಿತ ಮತ್ತು ಕೀಳುಮಟ್ಟದ ಹೇಳಿಕೆಯ ವಿರುದ್ಧ ಮುಂಬೈ ಮತ್ತು ದೆಹಲಿಯಲ್ಲಿ ದೂರು ದಾಖಲಿಸಲಾಗಿದೆ. ಜೊತೆಗೆ, ಇಂಡಿಯಾಸ್ ಗಾಟ್ ಲ್ಯಾಟೆಂಟ್ ಕಾರ್ಯಕ್ರಮದ ಕಮಿಡಿಯನ್ ಸಮಯ್ ರೈನಾ, ಇನ್ನೊಬ್ಬ ಸಾಮಾಜಿಕ ಮಾಧ್ಯಮ ಪ್ರಭಾವಿ ಅಪೂರ್ವ ಮಖಿಜಾ ಮತ್ತು ಆಯೋಜಕರ ವಿರುದ್ಧ ದೂರು ನೀಡಲಾಗಿದೆ.

ಈ ಕುರಿತು ಪ್ರತಿಕ್ರಿಯಿಸಿರುವ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, "ಕೀಳುಮಟ್ಟದ ಹೇಳಿಕೆಯ ವಿರುದ್ಧ ಕ್ರಮ ಜರುಗಿಸಲು ಸೂಚನೆ ನೀಡಲಾಗಿದೆ. ವಾಕ್ ಸ್ವಾತಂತ್ರ್ಯವನ್ನು ದುರುಪಯೋಗಪಡಿಸಿಕೊಳ್ಳಬಾರದು. ಸಮಾಜದ ಸ್ವಾಸ್ಥ್ಯಕ್ಕೆ ವಿರುದ್ಧವಾಗಿ ನಡೆದುಕೊಳ್ಳಬಾರದು. ಅದರ ಉಲ್ಲಂಘನೆ ಮಾಡಿದವರು ಕ್ರಮ ಎದುರಿಸಿ" ಎಂದು ಹೇಳಿದ್ದಾರೆ.

# ಒಂದೇ ದಿನ 6 ತಂಡಗಳ ಏಕದಿನ ಪಂದ್ಯ..!




ಚಾಂಪಿಯನ್ಸ್ ಟ್ರೋಫಿ ಆರಂಭಕ್ಕೆ ಇನ್ನು ದಿನಗಳು ಮಾತ್ರ ಉಳಿದಿವೆ. ಅದಕ್ಕೂ ಮುನ್ನ ಎಲ್ಲಾ ತಂಡಗಳ ಏಕದಿನ ಸರಣಿಗಳತ್ತ ಮುಖ ಮಾಡಿವೆ. ಈಗಾಗಲೇ ಭಾರತ ಮತ್ತು ಇಂಗ್ಲೆಂಡ್ ನಡುವಣ ಏಕದಿನ ಸರಣಿಯು ಮುಕ್ತಾಯದ ಹಂತಕ್ಕೆ ಬಂದು ನಿಂತಿದೆ. ಮತ್ತೊಂದೆಡೆ ಶ್ರೀಲಂಕಾ ಮತ್ತು ಆಸ್ಟ್ರೇಲಿಯಾ ತಂಡಗಳು ಏಕದಿನ ಸರಣಿ ಆಡಲು ಸಜ್ಜಾಗಿದೆ. ಅದರಂತೆ ನಾಳೆ (ಫೆ.12) ಒಟ್ಟು 6 ತಂಡಗಳು ಏಕದಿನ ಪಂದ್ಯಗಳಲ್ಲಿ ಕಣಕ್ಕಿಳಿಯಲಿವೆ.

ಭಾರತ VS ಇಂಗ್ಲೆಂಡ್: ಭಾರತ ಮತ್ತು ಇಂಗ್ಲೆಂಡ್ ನಡುವಣ ಏಕದಿನ ಸರಣಿಯ ಮೂರನೇ ಪಂದ್ಯವು ಬುಧವಾರ (ಫೆ.12) ನಡೆಯಲಿದೆ. ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ನಡೆಯಲಿರುವ ಈ ಪಂದ್ಯವು ಮಧ್ಯಾಹ್ನ 1.30 ಕ್ಕೆ ಶುರುವಾಗಲಿದೆ.

ಶ್ರೀಲಂಕಾ VS ಆಸ್ಟ್ರೇಲಿಯಾ: ಶ್ರೀಲಂಕಾ ಮತ್ತು ಆಸ್ಟ್ರೇಲಿಯಾ ನಡುವಣ 2 ಪಂದ್ಯಗಳ ಏಕದಿನ ಸರಣಿ ಕೂಡ ಫೆಬ್ರವರಿ 12 ರಿಂದ ಶುರುವಾಗಲಿದೆ. ಈ ಸರಣಿಯ ಮೊದಲ ಪಂದ್ಯವು ಬುಧವಾರ ಕೊಲಂಬೊದ ಪ್ರೇಮದಾಸ ಸ್ಟೇಡಿಯಂನಲ್ಲಿ ಜರುಗಲಿದೆ. ಬೆಳಿಗ್ಗೆ 10 ಗಂಟೆಯಿಂದ ಈ ಪಂದ್ಯ ಶುರುವಾಗಲಿದೆ.

ಪಾಕಿಸ್ತಾನ್ VS ಸೌತ್ ಆಫ್ರಿಕಾ: ಪಿಸಿಬಿ ಆಯೋಜಿಸಿರುವ ತ್ರಿಕೋನ ಸರಣಿಯ ಮೂರನೇ ಪಂದ್ಯದಲ್ಲಿ ಪಾಕಿಸ್ತಾನ್ ಮತ್ತು ಸೌತ್ ಆಫ್ರಿಕಾ ತಂಡಗಳು ಮುಖಾಮುಖಿಯಾಗಲಿದೆ. ಕರಾಚಿಯ ನ್ಯಾಷನಲ್ ಸ್ಟೇಡಿಯಂನಲ್ಲಿ ನಡೆಯಲಿರುವ ಈ ಪಂದ್ಯವು ಬುಧವಾರ (ಫೆ.12) ಮಧ್ಯಾಹ್ನ 2 ಗಂಟೆಯಿಂದ ಶುರುವಾಗಲಿದೆ.

ಭಾರತದ ಸರಣಿ ಮುಕ್ತಾಯ: ಇಂಗ್ಲೆಂಡ್ ವಿರುದ್ಧದ ಮೂರನೇ ಏಕದಿನ ಪಂದ್ಯದೊಂದಿಗೆ ಟೀಮ್ ಇಂಡಿಯಾದ ಮೊದಲಾರ್ಧದ ಸರಣಿ ಮುಗಿಯಲಿದೆ. ಇದಾದ ಬಳಿಕ ಭಾರತ ತಂಡವು ಚಾಂಪಿಯನ್ಸ್ ಟ್ರೋಫಿ ಟೂರ್ನಿಗಾಗಿ ದುಬೈಗೆ ತೆರಳಲಿದೆ. ಫೆಬ್ರವರಿ 19 ರಿಂದ ಆರಂಭವಾಗಲಿರುವ ಚಾಂಪಿಯನ್ಸ್ ಟ್ರೋಫಿ ಮಾರ್ಚ್ 9 ರಂದು ಮುಗಿಯಲಿದೆ.

ಚಾಂಪಿಯನ್ಸ್ ಟ್ರೋಫಿ ಮುಕ್ತಾಯದ ಬೆನ್ನಲ್ಲೇ ಟೀಮ್ ಇಂಡಿಯಾ ಆಟಗಾರರು ಇಂಡಿಯನ್ ಪ್ರೀಮಿಯರ್ ಲೀಗ್?ಗಾಗಿ ಸಜ್ಜಾಗಲಿದ್ದಾರೆ. ಈ ಬಾರಿಯ ಐಪಿಎಲ್ ಮಾರ್ಚ್ 21 ರಿಂದ ಶುರುವಾಗಲಿದ್ದು, ಮೇ 25 ರವರೆಗೆ ನಡೆಯುವ ಸಾಧ್ಯತೆಯಿದೆ. ಹೀಗಾಗಿ ಟೀಮ್ ಇಂಡಿಯಾದ ಮುಂದಿನ ಸರಣಿಯನ್ನು ವೀಕ್ಷಿಸಲು ಜೂನ್ ತಿಂಗಳವರೆಗೆ ಕಾಯಲೇಬೇಕು.

# ವಿರಾಟ್ ಕೊಹ್ಲಿ ದಾಖಲೆ ಮುರಿದ ಕೇನ್ ವಿಲಿಯಮ್ಸನ್!

ಕೇನ್ ವಿಲಿಯಮ್ಸನ್: ನ್ಯೂಜಿಲೆಂಡ್‌ನ ಮಾಜಿ ನಾಯಕ, ಸ್ಟಾರ್ ಬ್ಯಾಟ್ಸ್‌ಮನ್ ಕೇನ್ ವಿಲಿಯಮ್ಸನ್ ಲಾಹೋರ್‌ನ ಗಡಾಫಿ ಕ್ರೀಡಾಂಗಣದಲ್ಲಿ ಅದ್ಭುತ ಶತಕದೊಂದಿಗೆ ಮಿಂಚಿದರು. ಅವರ ಇನ್ನಿಂಗ್ಸ್‌ನಿಂದ ದಕ್ಷಿಣ ಆಫ್ರಿಕಾ ವಿರುದ್ಧದ ಎರಡನೇ ಏಕದಿನ ಪಂದ್ಯದಲ್ಲಿ ನ್ಯೂಜಿಲೆಂಡ್ ಜಯ ಸಾಧಿಸಿತು. ಈ ಸಂದರ್ಭದಲ್ಲಿ ಕಿವೀಸ್ ತಾರೆ ಮತ್ತೊಂದು ಸಾಧನೆ ಮಾಡಿದರು.

ವಿರಾಟ್ ಕೊಹ್ಲಿ ದಾಖಲೆ ಮುರಿದ ಕೇನ್ ವಿಲಿಯಮ್ಸನ್: 133 ರನ್‌ಗಳ ಶತಕದ ಇನ್ನಿಂಗ್ಸ್‌ನೊಂದಿಗೆ ನ್ಯೂಜಿಲೆಂಡ್‌ಗೆ ಗೆಲುವು ತಂದುಕೊಟ್ಟಿದ್ದಲ್ಲದೆ, ಕೇನ್ ವಿಲಿಯಮ್ಸನ್ 7,000 ಏಕದಿನ ರನ್‌ಗಳ ಗಡಿ ದಾಟಿದರು. ಈ ಮೈಲಿಗಲ್ಲನ್ನು ತಲುಪಿದ ಅತಿವೇಗದ ನ್ಯೂಜಿಲೆಂಡ್ ಆಟಗಾರ ಎನಿಸಿಕೊಂಡರು. ಕೇವಲ 159 ಇನ್ನಿಂಗ್ಸ್‌ಗಳಲ್ಲಿ ಈ ಸಾಧನೆ ಮಾಡಿದರು.

ಸಚಿನ್ ದಾಖಲೆ ಮುರಿದ ವಿಲಿಯಮ್ಸನ್: ಏಕದಿನ ಪಂದ್ಯಗಳಲ್ಲಿ ಅತಿ ವೇಗವಾಗಿ 7,000 ರನ್ ಗಳಿಸುವ ಮೂಲಕ ವಿರಾಟ್ ಕೊಹ್ಲಿ ಮತ್ತು ಸಚಿನ್ ತೆಂಡೂಲ್ಕರ್ ಅವರಂತಹ ದಿಗ್ಗಜರನ್ನು ವಿಲಿಯಮ್ಸನ್ ಹಿಂದಿಕ್ಕಿದ್ದಾರೆ.

ಏಕದಿನ ಪಂದ್ಯಗಳಲ್ಲಿ ಅತಿ ವೇಗವಾಗಿ 7,000 ರನ್ ಪೂರ್ಣಗೊಳಿಸಿದ ಟಾಪ್ –5 ಕ್ರಿಕೆಟಿಗರು ಯಾರ್ಯಾರು ಎನ್ನುವುದನ್ನು ನೋಡೋಣ ಬನ್ನಿ.

2023ರಲ್ಲಿ ವಾಂಖೆಡೆ ಕ್ರೀಡಾಂಗಣದಲ್ಲಿ ಭಾರತದ ವಿರುದ್ಧ ನಡೆದ ಸೆಮಿಫೈನಲ್ ನಂತರ ಕೇನ್ ವಿಲಿಯಮ್ಸನ್ ತ್ರಿಕೋನ ಸರಣಿಯೊಂದಿಗೆ ಮೊದಲ ಬಾರಿಗೆ ಏಕದಿನ ಕ್ರಿಕೆಟ್‌ಗೆ ಮರಳಿದರು. ಪಾಕಿಸ್ತಾನದ ವಿರುದ್ಧದ ತ್ರಿಕೋನ ಸರಣಿಯ ಮೊದಲ ಪಂದ್ಯದಲ್ಲಿ ಆಡಿದರು.




2025ರ ಚಾಂಪಿಯನ್ಸ್ ಟ್ರೋಫಿಗೆ ಮುನ್ನ ಸೂಪರ್ ಫಾರ್ಮ್‌ನಲ್ಲಿ ಕೇನ್ ವಿಲಿಯಮ್ಸನ್: ಕೇನ್ ವಿಲಿಯಮ್ಸನ್ ತಮ್ಮ 14ನೇ ಏಕದಿನ ಶತಕವನ್ನು ಗಳಿಸಿದ್ದಾರೆ. 2025ರ ಚಾಂಪಿಯನ್ಸ್ ಟ್ರೋಫಿಗೆ ಮುನ್ನ ನ್ಯೂಜಿಲೆಂಡ್‌ನ ಸ್ಟಾರ್ ಬ್ಯಾಟ್ಸ್‌ಮನ್ ಫಾರ್ಮ್‌ಗೆ ಮರಳಿದ್ದಾರೆ.

[redacted] 52 [redacted]